24 June 2026 Wednesday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ನಮ್ಮ ಬದುಕಿನಲ್ಲಿ ನಾವು ಸಂಗ್ರಹಿಸ ಬೇಕಾಗಿದ್ದು ಸಂತೋಷದ ಕ್ಷಣಗಳನ್ನೇ ಹೊರತು ದುಬಾರಿ ಮಾತುಗಳನ್ನಲ್ಲ!

–ಸ್ನೇಹಾ ಆನಂದ್

info.varthaman@gmail.com



ಮೂವರ ಆತ್ಮಹತ್ಯೆ ಪ್ರಕರಣ: ಯುವಕನ ಬಂಧನ ಪುಟ ಸಂ. 2



ಮುಮ್ಮಡಿ ನಿರ್ವಾಣ ಸ್ವಾಮೀಜಿ ಐಂಗೈಕ್ಯ: ಭಾವುಕರಾಗಿ ಬಿಕ್ಕಿದ ಮುಖ್ಯಮಂತ್ರಿ ಪುಟ ಸಂ. 3



ದಸಂಸ ಹೆಸರಲ್ಲಿ ಕೆಲವರಿಂದ ಅಕ್ರಮ ಆರೋಪ ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 206 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

## ಆರ್‌ಎಸ್‌ಎಸ್ ಸಂವಿಧಾನ ವಿರೋಧಿ

### ಮೋದಿ ಅವರಿಂದ ಕಲಿಯಬೇಕಿಲ್ಲ: ಪ್ರಿಯಾಂಕ್ ಖರ್ಗೆ ವಾಗ್ದಾಳಿ

**ಬೆಂಗಳೂರು:** ಭಾರತ 1950ರಲ್ಲಿ ಸಂವಿಧಾನ ಅಂಗೀಕರಿಸಿದಾಗ ಆರ್‌ಎಸ್‌ಎಸ್ ಅದನ್ನು ವಿರೋಧಿಸಿತ್ತು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಆರ್‌ಎಸ್‌ಎಸ್ ವಿರುದ್ಧ ವಾಗ್ದಾಳಿ ಮುಂದುವರಿಸಿದ್ದಾರೆ.

ಸುದ್ದಿಗಾರರ ಜೊತೆ ಮಂಗಳವಾರ ಮಾತನಾಡಿದ ಅವರು, ಸಂವಿಧಾನದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರಿಂದ ಕಲಿಯಬೇಕಾದ್ದು ಕಾಂಗ್ರೆಸ್‌ಗೆ ಏನೂ ಇಲ್ಲ ಹೇಳಿದರು.

ಸಂವಿಧಾನದ ಬಗ್ಗೆ ನಮಗೆ ಮೋದಿ ಅವರಿಂದ ಕಲಿಯಬೇಕಾದ ಅಗತ್ಯವಿಲ್ಲ. ಅವರು ಸಂವಿಧಾನವನ್ನು ನಿರ್ಲಕ್ಷಿಸಿದ್ದ ಚಿಂತನಾ ಪರಂಪರೆಯಿಂದ ಬಂದವರು. ಅಂದು ಆರ್‌ಎಸ್‌ಎಸ್ ತಮ್ಮ ಸಂಪಾದಕೀಯದಲ್ಲಿ ಸ್ಪಷ್ಟವಾಗಿ ಸಂವಿಧಾನ ತಿರಸ್ಕರಿಸುತ್ತೇವೆ ಎಂದು ಬರೆದಿತ್ತು ಎಂದು ಆರೋಪಿಸಿದರು.

ದೆಹಲಿಯ ರಾಮಲೀಲಾ ಮೈದಾನದಲ್ಲಿ 150ಕ್ಕೂ ಹೆಚ್ಚು ಪ್ರತಿಭಟನೆಗಳನ್ನು ನಡೆಸಿದ್ದ ಆರ್‌ಎಸ್‌ಎಸ್ ನವರು, ನೆಹರು ಮತ್ತು ಅಂಬೇಡ್ಕರ್ ಅವರು ವೇದಗಳನ್ನು ಮುಗಿಸಿ ಸಂವಿಧಾನ ಜಾರಿಗೆ ತರುತ್ತಿದ್ದಾರೆ. ನಾವು ಅದನ್ನು ಸಂಪೂರ್ಣವಾಗಿ ತಿರಸ್ಕರಿಸುತ್ತೇವೆ. ದೇಶದ ಸಂವಿಧಾನವಾಗಿ ಮನುಸ್ಮೃತಿಯೇ ಬೇಕು ಎಂದು ಹೇಳಿದ್ದರು. ಅಂತಹ ಹಿನ್ನೆಲೆ



ಯವರಿಂದ ನಮಗೆ ಸಂವಿಧಾನದ ಪಾಠ ಬೇಕೇ? ಸಂಸತ್ತು ಹೇಗೆ ಕಾರ್ಯನಿರ್ವಹಿಸುತ್ತಿದೆ ಎಂಬುದನ್ನು ನೀವು ನೋಡುತ್ತಿಲ್ಲವೇ ಎಂದು ಪ್ರಶ್ನಿಸಿದರು.

ಸಂವಿಧಾನ ಮತ್ತು ನಕ್ಸಲ್ ವಾದ ವಿಷಯದಲ್ಲಿ ಪ್ರಧಾನಿ ಮೋದಿ ಕಾಂಗ್ರೆಸ್ ವಿರುದ್ಧ ಟೀಕೆ ಮಾಡಿದ ಬೆನ್ನಲ್ಲೇ ಖರ್ಗೆ ಈ ಹೇಳಿಕೆ ನೀಡಿದ್ದಾರೆ.

ರಿಪಬ್ಲಿಕ್ ಟಿವಿ ಸಮ್ಮಿಟ್‌ನಲ್ಲಿ ಮಾತನಾಡಿದ್ದ ಪ್ರಧಾನಿ ಮೋದಿ, ನಕ್ಸಲರ ಹಿಂಸಾಚಾರದ ಬಗ್ಗೆ ಕಾಂಗ್ರೆಸ್ ನಿರ್ಲಕ್ಷ್ಯ ತೋರಿದೆ ಎಂದು ಆರೋಪಿಸಿದ್ದರು. ಸಂವಿಧಾನವನ್ನು ಸದಾ ಕೈಯಲ್ಲಿ ಹಿಡಿದುಕೊಂಡು ತಿರುಗುವವರು ಅಧಿಕಾರದಲ್ಲಿದ್ದಾಗ ನಕ್ಸಲ್ ಪೀಡಿತ ಪ್ರದೇಶಗಳಲ್ಲಿ ಸಂವಿಧಾನದ ಬಗ್ಗೆ ಮಾತನಾಡಿದ ಜನರನ್ನು ಗುಂಡಿಕ್ಕಿ

## ನಾಲಿಗೆ ಬಿಗಿ ಹಿಡಿದು ಮಾತಾಡಿ:ಬಿ.ಸಿ.ಪಾಟೀಲ್

### ಈಶ್ವರಪ್ಪ ಹೇಳಿಕೆಗೆ ತಿರುಗೇಟು

**ಬೆಂಗಳೂರು:** ನಮ್ಮ ಶ್ರಮದಿಂದಲೇ ನೀವು ಮಂತ್ರಿಯಾಗಿ ಲಂಚ ಪಡೆದು ಬೆಳಗಾವಿಯಲ್ಲಿ ಒಬ್ಬ ವ್ಯಕ್ತಿ ಆತ್ಮಹತ್ಯೆಗೆ ಕಾರಣರಾಗಿದ್ದೀರಿ. ಈಗ ಬಾಯಿಗೆ ಬಂದಂತೆ ಮಾತನಾಡುವುದನ್ನು ಬಿಡಿ. ನಮ್ಮಿಂದ ಬಿಜೆಪಿ ಹಾಳಾಗಲಿಲ್ಲ ಎಂದು ಬಿ.ಸಿ ಪಾಟೀಲ್ ಅವರು ಕೆ.ಎಸ್.ಈಶ್ವರಪ್ಪ ಹೇಳಿಕೆಗೆ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಹಿಂದೆ ದುಡ್ಡು ಕೊಟ್ಟು ಕರೆತಂದ 17 ಕಾಂಗ್ರೆಸ್ ಶಾಸಕರಿಂದಲೇ ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಿತ್ತು. ಆದರೆ ನಂತರ ಅವರಿಂದಲೇ ಪಕ್ಷ ಹಾಳಾಯ್ತು ಎಂದು ಸಚಿವ ಕೆ.ಎಸ್ ಈಶ್ವರಪ್ಪ ಮಾಡಿದ್ದ ಗಂಭೀರ ಆರೋಪಕ್ಕೆ ಮಾಜಿ




## ಆರ್‌ಎಸ್‌ಎಸ್ ನೋಂದಣಿ: ಕಾನೂನು ಕ್ರಮದ ಎಚ್ಚರಿಕೆ



**ಬೆಂಗಳೂರು:** ರಾಷ್ಟ್ರೀಯ ಸ್ವಯಂಸೇವಕ ಸಂಘ ನೋಂದಣಿ ಬಗ್ಗೆ ದಾಖಲೆ ಸಲ್ಲಿಸದಿದ್ದರೆ ಸಂಘದ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಮಂಗಳವಾರ ಸುಳಿವು ನೀಡಿದ್ದಾರೆ.

ನಾನು ಬರೆದ ಪತ್ರಕ್ಕೆ ಆರ್ ಎಸ್‌ಎಸ್ ನಿಂದ ಯಾವುದೇ ತೃಪ್ತಿದಾಯಕ ಉತ್ತರ ಸಿಗದಿದ್ದರೆ ಕಾನೂನು ಕ್ರಮ ಕೈಗೊಳ್ಳುವುದಾಗಿ ಅವರು ಎಚ್ಚರಿಕೆ ನೀಡಿದ್ದಾರೆ.

ಆರ್‌ಎಸ್‌ಎಸ್ ನವರು ದಾಖಲೆ ಕೊಡದೆ ಕಾನೂನು ಚೌಕಟು ಮೀರಲು ನಾನು ಬಿಡಲ್ಲ. ಆರ್ ಎಸ್ ಎಸ್ ಬಳಿ ದಾಖಲೆ ಇದ್ದಿದ್ದರೇ ನನ್ನ ಮುಖಕ್ಕೆ ಎಸೆಯುತ್ತಿದ್ದರು ಎಂದು ಕುಟುಕಿದರು.

ಆರ್‌ಎಸ್‌ಎಸ್ ದಾಖಲೆಗಳನ್ನು ನೀಡದಿದ್ದರೆ ಮುಂದಿನ ಕ್ರಮ ಏನು? ಎಂದು ವರದಿಗಾರರು ಕೇಳಿದಾಗ, ದೇಶದಲ್ಲಿ ಕಾನೂನು ಇದೆ. ಕಾನೂನಿನ ಪ್ರಕಾರ ಮುಂದಿನ ಕ್ರಮಕೈಗೊಳ್ಳುವುದಾಗಿ ಖರ್ಗೆ ತಿಳಿಸಿದರು.

ಆರ್ ಎಸ್ ಎಸ್ ನೋಂದಣಿ ಬಗ್ಗೆ ಪತ್ರ ಬರೆದು ಸ್ಪಷ್ಟನೆ ಕೇಳಿದ್ದೇನೆ. ಇದೇ ಅಂತಿಮ ಅಲ್ಲ. ಅವರು ಉತ್ತರ ಕೊಡಲಿ. ತಾಳ್ಮೆಯಿಂದ ಕಾಯೋಣ.

ಅವರು 100 ವರ್ಷಗಳ ಇತಿಹಾಸ ಹೊಂದಿರುವ ದೇಶಭಕ್ತರು. ಅವರು ಎಲ್ಲೋ ದಾಖಲೆಗಳನ್ನು ಇಟ್ಟಿರಬೇಕು. ಅದು ನಾಗ್ಪುರದಲ್ಲಿ, ಬೆಂಗಳೂರಿನ ಕೇಶವ ಶಿಲ್ಪದಲ್ಲಿ ಅಥವಾ ಸರಸಂಘ ಚಾಲಕ್ ಅವರ ನಿವಾಸದಲ್ಲಿ ಇರಬಹುದು. ಅದನ್ನು ಹುಡುಕಲು ಅವರಿಗೆ ಸಮಯ ಬೇಕು ಅಲ್ವಾ ಎಂದು ವ್ಯಂಗ್ಯವಾಡಿದರು.

## ಹೊಸ ಮುಖಗಳಿಗೆ ಮಣೆ: ಮುಖ್ಯಮಂತ್ರಿ ಡಿಕೆಶಿ ಸುಳಿವು



**ಬೆಂಗಳೂರು:** ರಾಜ್ಯ ರಾಜಕಾರಣದಲ್ಲಿ ತೀವ್ರ ಕುತೂಹಲ ಕೆರಳಿಸಿರುವ ಸಚಿವ ಸಂಪುಟ ವಿಸ್ತರಣೆ ಕಸರತ್ತಿನ ನಡುವೆಯೇ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹೊಸ ಬರಿಗೆ ಮಣೆ ಹಾಕುವ ಕುರಿತು ಸುಳಿವು ನೀಡಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಂಪುಟದಲ್ಲಿ ಹೊಸ ಮುಖಗಳಿಗೆ ಅವಕಾಶ ನೀಡುವ ಆಲೋಚನೆ ನಡೆದಿರುವುದನ್ನು ಬಹಿರಂಗಪಡಿಸಿದರು.

ಸಚಿವ ಸಂಪುಟ ಸೇರ್ಪಡೆಗೆ ನಾನು ಯಾರದೇ ಅವಕಾಶವನ್ನು ತಡೆಯಲು ಬಯಸುವುದಿಲ್ಲ. ಎಲ್ಲರಿಗೂ ಸಮಾನ ಅವಕಾಶ ಸಿಗಬೇಕು ಎನ್ನುವುದೇ ನಮ್ಮ ಆಶಯ. ಸಚಿವ ಸಂಪುಟ ವಿಸ್ತರಣೆ ಜವಾಬ್ದಾರಿಯನ್ನು ಪಕ್ಷದ ಹೈಕಮಾಂಡ್ ವಹಿಸಿಕೊಂಡಿದೆ. ಈಗಾಗಲೇ ನವದೆಹಲಿಯಲ್ಲಿ ಈ ಕುರಿತು ವರಿಷ್ಠರ ಮಟ್ಟದಲ್ಲಿ ಗಂಭೀರ ಚರ್ಚೆ ನಡೆಯುತ್ತಿದೆ ಎಂದು ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದರು.

ಸಿಎಂ ಡಿಕೆಶಿ ಹೇಳಿಕೆಯು ಸಚಿವ ಸ್ಥಾನದ ಆಕಾಂಕ್ಷಿಗಳಲ್ಲಿ ಸಂಚಲನ ಮೂಡಿಸಿದೆ. ಸದ್ಯದಲ್ಲೇ ರಾಜ್ಯ ಸಚಿವ ಸಂಪುಟಕ್ಕೆ ಮೇಜರ್ ಸರ್ಜರಿ ನಡೆಯಲಿದೆಯೇ ಎಂಬ ಚರ್ಚೆಗಳು ರಾಜಕೀಯ ವಲಯದಲ್ಲಿ ಜೋರಾಗಿವೆ.

# ಕಾವೇರಿದ ತ.ನಾಡು ಕ್ಯಾತೆ

### ಮಳೆ ಕೊರತೆ ಇದ್ದರೂ ಜೂನ್–ಜುಲೈ ತಿಂಗಳ ನೀರು ಹರಿಸಲು ಆಗ್ರಹ

**ನವದೆಹಲಿ:** ರಾಜ್ಯದಲ್ಲಿ ಮುಂಗಾರು ಮಳೆ ಕೊರತೆಯಿಂದ ಕುಡಿಯುವ ನೀರಿಗೂ ಸಮಸ್ಯೆ ಎದುರಾಗಿದೆ. ಆದರೆ, ಕಾವೇರಿ ನೀರಿನ ವಿಚಾರದಲ್ಲಿ ತಮಿಳುನಾಡು ಕ್ಯಾತೆ ತೆಗೆದಿದೆ.

ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಮಂಗಳವಾರ ನಡೆದ ಸಭೆಯಲ್ಲಿ ಜೂನ್ ತಿಂಗಳ ನೀರಿನ ಜೊತೆಗೆ ಜುಲೈನ 31.24 ಟಿಎಂಸಿ ನೀರು ಹರಿಸಲು ನಿರ್ದೇಶನ ನೀಡುವಂತೆ ತಮಿಳುನಾಡು ತೀವ್ರ ಒತ್ತಡಹಾಕಿದೆ.


ಜೂನ್ ತಿಂಗಳಲ್ಲಿ 9.19 ಟಿಎಂಸಿ ನೀರು ಹರಿಸಬೇಕಿತ್ತು. ಈವರೆಗೂ 2.6 ಟಿಎಂಸಿ ನೀರು ಮಾತ್ರ ಹರಿಸಲಾಗಿದೆ. ಈವರೆಗೂ ನಾಲ್ಕು ಟಿಎಂಸಿ ನೀರು ಕಡಿಮೆ ಹರಿಸಿದೆ. ನಮ್ಮ ಜಲಾಶಯಗಳಲ್ಲಿ ನೀರಿಲ್ಲ ಎನ್ನುವ ಕರ್ನಾಟಕದ ವಾದ ಒಪ್ಪಲು ಸಾಧ್ಯವಿಲ್ಲ. ಫೆಬ್ರವರಿಯಿಂದ ಮೇ ವರೆಗೂ ಹೆಚ್ಚಿನ ನೀರು ಕರ್ನಾಟಕ ಬಳಕೆ ಮಾಡಿದೆ. ಹೀಗಾಗಿ ಜಲಾಶಯಗಳಲ್ಲಿ ನೀರಿನ ಮಟ್ಟ ಕುಸಿದಿದೆ ಎಂದು ತಮಿಳುನಾಡು ವಾದಿಸಿದೆ.

ಇದರಿಂದ ಜೂನ್ ತಿಂಗಳ ನೀರಿನ ಜೊತೆಗೆ ಜುಲೈ ತಿಂಗಳ 31.24 ಟಿಎಂಸಿ ನೀರು ಹರಿಸಲು ಕರ್ನಾಟಕಕ್ಕೆ ನಿರ್ದೇಶನ ನೀಡಬೇಕು ಎಂದು ತಮಿಳುನಾಡು ಸರ್ಕಾರ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರಕ್ಕೆ ಮನವಿ ಮಾಡಿದೆ. ಸಭೆಯಲ್ಲಿ ತಮಿಳುನಾಡು, ಕರ್ನಾಟಕ, ಪುದುಚೇರಿ, ಕೇರಳದ ಪ್ರತಿನಿಧಿಗಳು ಭಾಗಿಯಾಗಿದ್ದರು.




### ಕೊಡಗಿನಲ್ಲೂ ಮಳೆಯಿಲ್ಲ

**ಮಂಡ್ಯ:** ಕಾವೇರಿ ಜಲಾನಯನ ಪ್ರದೇಶ ದಲ್ಲಿ ಆರಂಭದಲ್ಲೇ ಮುಂಗಾರು ಮಳೆ ಸಂಪೂರ್ಣ ಕೈಕೊಟ್ಟಿದೆ. ಕೇರಳದ ವಯನಾಡು, ಕೊಡಗು, ಚಿಕ್ಕಮಗಳೂರು ಭಾಗದಲ್ಲಿ ಮಳೆಯಾದರೆ ಹಳೆ ಮೈಸೂರು ಭಾಗದ ಜಲಾಶಯಗಳಿಗೆ ನೀರು ಹರಿದು ಬರಲಿದೆ.



ಕೊಡಗು ಜಿಲ್ಲೆಯ ಹಾರಂಗಿ ಜಲಾಶ ಯದಲ್ಲಿ ಸದ್ಯ 3.19 ಟಿಸಿಎಂ (ಶೇ.36) ನೀರು ಸಂಗ್ರಹವಿದೆ. ಕಳೆದ ವರ್ಷ ಇದೇ ಸಂದರ್ಭ ಜಲಾಶಯದಲ್ಲಿ 5.74 ಟಿಎಂಸಿ ನೀರು ಲಭ್ಯವಿತ್ತು. ಜಲಾಶಯದ ಗರಿಷ್ಠ ಮಟ್ಟ 8.50 ಟಿಎಂಸಿ. ಈಗ ಜಲಾಶಯಕ್ಕೆ ನೀರಿನ ಒಳಹರಿವು 273 ಕ್ಯುಸೆಕ್ ಇದೆ. 180 ಕ್ಯುಸೆಕ್ ನೀರು ಹೊರ ಹರಿಸಲಾಗುತ್ತಿದೆ.

ಕೆಆರ್ ಎಸ್ ಜಲಾಶಯದಲ್ಲಿ ಈಗ 11.42 ಟಿಸಿಎಂ (ಶೇ.23) ನೀರು ಸಂಗ್ರಹವಿದೆ. ಕಳೆದ ವರ್ಷ ಇದೇ ದಿನ ಜಲಾಶಯದಲ್ಲಿ 35.12 ಟಿಎಂಸಿ ನೀರು ಲಭ್ಯವಿತ್ತು. ಜಲಾಶಯದ ಗರಿಷ್ಠ ನೀರು 49.45 ಟಿಎಂಸಿ. ಕಬಿನಿ ಜಲಾಶಯದಲ್ಲಿ ಸದ್ಯ 5 ಟಿಸಿಎಂ (ಶೇ 26) ನೀರು ಲಭ್ಯವಿದೆ. ಕಳೆದ ವರ್ಷ ಇದೇ ದಿನ ಜಲಾಶಯದಲ್ಲಿ 17.35 ಟಿಎಂಸಿ ನೀರು ಸಂಗ್ರಹವಿತ್ತು. ಜಲಾಶಯದ ಗರಿಷ್ಠ ಮಟ್ಟ 19.52 ಟಿಎಂಸಿ. ಸದ್ಯ ಜಲಾಶಯಕ್ಕೆ ನೀರಿನ ಒಳ ಹರಿವು 433 ಕ್ಯುಸೆಕ್ ಇದೆ.

## ಬಾಲಕರನ್ನೂ ಬಿಟ್ಟಿಲ್ಲವೇ?: ಹೈಕೋರ್ಟ್ ಅಸಮಾಧಾನ

**ಬೆಂಗಳೂರು:** ವಚನಾನಂದ ಶ್ರೀಗಳ ನಿರೀಕ್ಷಣಾ ಜಾಮೀನು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ವೇಳೆ ಹೈಕೋರ್ಟ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ಬಾಲಕರನ್ನೂ ಬಿಟ್ಟಿಲ್ಲವೇ? ಬಾಲಕರೂ ಈಗ ಸುರಕ್ಷಿತರಲ್ಲ ಎಂದು ಹೈಕೋರ್ಟ್ ಖಾರವಾಗಿ ಪ್ರಶ್ನಿಸಿದೆ

ಈ ರೀತಿ ಪ್ರಕರಣದಲ್ಲಿ ನಿರೀಕ್ಷಣಾ ಜಾಮೀನು ಕೊಡುವುದು ಸರಿಯಲ್ಲ. ರೆಗ್ಯುಲರ್ ಜಾಮೀನು ಅರ್ಜಿ ಸಲ್ಲಿಸುವುದು ಸೂಕ್ತವೆಂದು ನ್ಯಾಯಾಲಯ ಸೂಚಿಸಿದೆ. ಅರ್ಜಿ ವಿಚಾರಣೆಯನ್ನು ಜೂ.25ಕ್ಕೆ ಮುಂದೂಡಲಾಗಿದೆ.

ನಿರೀಕ್ಷಣಾ ಜಾಮೀನು ಪ್ರಶ್ನಿಸಿ ಹೈಕೋರ್ಟ್‌ಗೆ ಬಾಲಕನ ತಾಯಿ ಅರ್ಜಿ ಸಲ್ಲಿಸಿದ್ದರು. ವಾದ ಮಂಡನೆಗೆ ಕಾಲಾವಕಾಶ ಕೋರಿದ ವಚನಾನಂದ ಶ್ರೀಗಳ ಪರ ವಕೀಲರು, ಟ್ರಸ್ಟಿನವರಿಗೂ ಸ್ವಾಮೀಜಿಗೂ ವಿವಾದಗಳಿದ್ದವು. ಪ್ರೆಸ್ ಮೀಟ್‌ನಲ್ಲಿ ಪೋಕ್ಸೋ ಕೇಸ್ ಹಾಕುವುದಾಗಿ ಬೆದರಿಕೆ ಹಾಕಿದ್ದರು. ಹೀಗಾಗಿ




ನಿರೀಕ್ಷಣಾ ಜಾಮೀನು ಪಡೆಯಲಾಗಿದೆ ಎಂದು ನ್ಯಾಯಾಲಯಕ್ಕೆ ತಿಳಿಸಿದರು.

ಈಗಾಗಲೇ ವಚನಾನಂದ ಸ್ವಾಮೀಜಿ ಜಾಮೀನು ಪಡೆದ ರೀತಿಗೆ ಸ್ವತಃ ಹೈಕೋರ್ಟ್ ಅಚ್ಚರಿ ವ್ಯಕ್ತಪಡಿಸಿದೆ. ಮೇ 7ರಂದು ಸ್ವಾಮೀಜಿ ವಿರುದ್ಧ ಪೋಕ್ಸೋ ದೂರು ದಾಖಲಾದರೆ, ಶ್ರೀಗಳು ಅದರ ಹಿಂದಿನ ದಿನ ಅಂದರೆ ಮೇ 6ರಂದೇ ನಿರೀಕ್ಷಣಾ ಜಾಮೀನು ಪಡೆದಿದ್ದಾರೆ. ದೂರು ದಾಖಲು ಮುನ್ನವೇ ಜಾಮೀನು ಕೊಟ್ಟ ರೀತಿ ಆಘಾತಕಾರಿ ಎಂದು ಹೈಕೋರ್ಟ್ ತಿಳಿಸಿತ್ತು. ಮೇಲ್ನೋಟಕ್ಕೆ ಈ ಪ್ರಕರಣದಲ್ಲಿ ನಿರೀಕ್ಷಣಾ ಜಾಮೀನು ನೀಡಿದ ವಿಧಾನ ಸರಿಯಲ್ಲ ಎಂದಿತ್ತು.

## ವಿಚಾರಣೆ ಸಮಯ ಕಡಿತಕ್ಕೆ 'ಸುಪ್ರೀಂ'ಗೆ ಅರ್ಜಿ

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿ ನಟ ದರ್ಶನ್ ವಕೀಲರನ್ನು ಬದಲಾಯಿಸಿದ ಬೆನ್ನಲ್ಲೇ ನೂತನ ವಕೀಲರ ಮೂಲಕ ಪ್ರಕರಣದ 60 ಸಾಕ್ಷಿಗಳ ವಿಚಾರಣೆಗೆ ನಿಗದಿಪಡಿಸಲಾಗಿರುವ ಒಂದು ವರ್ಷದ ಗಡುವನ್ನು ಕಡಿತಗೊಳಿಸುವಂತೆ ಸುಪ್ರೀಂ ಕೋರ್ಟ್‌ಗೆ ಪುನರ್ ಪರಿಶೀಲನಾ ಅರ್ಜಿ ಸಲ್ಲಿಸಿದ್ದಾರೆ.

ಒಂದು ವರ್ಷದ ಅವಧಿಯನ್ನು ಮರುಪರಿಶೀಲಿಸಿ ಕಡಿಮೆ ಮಾಡುವಂತೆ ಅರ್ಜಿ



ಯಲ್ಲಿ ಕೋರಲಾಗಿದೆ. ಕೇಸ್ ವಾದದಿಂದ ವಕೀಲ ಸುನಿಲ್ ಕುಮಾರ್ ಹಿಂದೆ ಸರಿದು 59ನೇ ಸೆಷನ್ಸ್ ನ್ಯಾಯಾಲಯಕ್ಕೆ ಮೆಮೋ ಸಲ್ಲಿಸಿಕೆ ಮಾಡಿದ್ದಾರೆ. ದರ್ಶನ್,

## ನೀಟ್ ಪರೀಕ್ಷೆಗೆ ತಡ: ಸತ್ಯ ಪರಿಶೀಲನೆ ವರದಿ ಬಿಡುಗಡೆ

**ಬೆಂಗಳೂರು:** ನೀಟ್ ಪರೀಕ್ಷಾ ಕೇಂದ್ರಕ್ಕೆ ವಿದ್ಯಾರ್ಥಿಗಳು ತಡವಾಗಿ ತಲುಪಿರುವುದಕ್ಕೆ ಬೆಂಗಳೂರು ಸಂಚಾರ ಪೊಲೀಸರು ಮಂಗಳವಾರ ಸತ್ಯ ಪರಿಶೀಲನೆ ವರದಿ ಬಿಡುಗಡೆ ಮಾಡಿದ್ದಾರೆ.

ಒಬ್ಬ ಅಭ್ಯರ್ಥಿಯ ಸಿಸಿಟಿವಿ ವಿಶ್ಲೇಷಣೆಯನ್ನು ಆಧರಿಸಿದ ವರದಿಯಂತೆ, ಪರೀಕ್ಷಾರ್ಥಿಯು ಪರೀಕ್ಷಾ ಕೇಂದ್ರಕ್ಕೆ ಪ್ರವೇಶಿಸಲು ನಿಗದಿಪಡಿಸಿದ ಕಟ್ ಆಫ್‌ಗೆ ಕೇವಲ 33 ನಿಮಿಷ ಮೊದಲು ಮನೆಯಿಂದ ಹೊರಟಿರುವುದನ್ನು ತೋರಿಸಿದೆ.

ಸಿಸಿಟಿವಿ ದೃಶ್ಯಾವಳಿಗಳನ್ನು ವಿಶ್ಲೇಷಿಸುವ ಮೂಲಕ ಸ್ಥಾಪಿಸಲಾದ ಸಮಯದ ವೇಳಾಪಟ್ಟಿ ಅಭ್ಯರ್ಥಿಯು ನಿಗದಿತ ಕಟ್–ಆಫ್ ಸಮಯದ 3 ನಿಮಿಷಗಳ ನಂತರ ದೀರ್ಘ ಮಾರ್ಗವನ್ನು ತೆಗೆದುಕೊಂಡು ಕೇಂದ್ರವನ್ನು ತಲುಪಿದ್ದಾರೆ ಎಂದು ತೋರಿಸಿದೆ.

ಸಂಚಾರ ಪರಿಸ್ಥಿತಿಗಳು ಸಾಮಾನ್ಯವಾಗಿದ್ದವು ಮತ್ತು ಸಾರ್ವಜನಿಕ ಕಾರ್ಯಕ್ರಮದಿಂದ ಯಾವುದೇ ದಟ್ಟಣೆ ಉಂಟಾಗಿರಲಿಲ್ಲ ಎಂದು ವರದಿಯಲ್ಲಿ ತಿಳಿಸಲಾಗಿದೆ.

ಬೆಂಗಳೂರಿನ ಪರೀಕ್ಷಾ ಕೇಂದ್ರದ ಹೊರಗೆ ಮೂವರು ವಿದ್ಯಾರ್ಥಿನಿಯರು ತಡವಾಗಿ ಬಂದ ಕಾರಣ ಪರೀಕ್ಷೆ ಬರೆಯಲು ಅವಕಾಶ ನಿರಾಕರಿಸಲ್ಪಟ್ಟು ಅಳುತ್ತಿರುವ ದೃಶ್ಯಗಳನ್ನು ಸುದ್ದಿ ವಾಹಿನಿಗಳು ಪ್ರಸಾರ ಮಾಡಿದವು. ಪುಟ 2ಕ್ಕೆ

## ವಿಧಾನಸಭೆಯಲ್ಲೂ ಸಿಎಂ ವಿಜಯ್ ಹೈಡ್ರಾಮ

**ಚೆನ್ನೈ:** ತಮಿಳುನಾಡು ವಿಧಾನಸಭೆಯಲ್ಲಿ ಮಂಗಳವಾರ ನಡೆದ ಅಧಿವೇಶನ ರಾಜಕೀಯ ಹೈಡ್ರಾಮಾಕ್ಕೆ ಸಾಕ್ಷಿಯಾಗಿದೆ. ಮುಖ್ಯಮಂತ್ರಿ ವಿಜಯ್ ಅವರು ಭಾಷಣದ ವೇಳೆ ಕೈಸನ್ನೆ ಮಾಡುತ್ತಿದ್ದಂತೆ ವಿರೋಧ ಪಕ್ಷ ಡಿಎಂಕೆ ಶಾಸಕರು ಸದನದಿಂದ ಹೊರನಡೆದರು.

ವಿಧಾನಸಭೆಯಲ್ಲಿ ಭಾಷಣದ ವೇಳೆ ಸಿಎಂ ವಿಜಯ್ ಮಾಡಿದ ಸನ್ನೆ ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಮಾಜಿ ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಚುನಾವಣೆ ಸಂದರ್ಭದಲ್ಲಿ ಟಿವಿಕೆ ಮುಗಿಸುವುದಾಗಿ ಮಾಡಿದ್ದರು ಎನ್ನಲಾದ ಕೈಸನ್ನೆಯನ್ನೇ ಈಗ ಸಿಎಂ ವಿಜಯ್ ಮಾಡಿದ್ದಾರೆ. ವಿಜಯ್ ಈ ಸನ್ನೆ ಮಾಡುತ್ತಿದ್ದಂತೆ ಆಡಳಿತಾರೂಢ ಟಿವಿಕೆ ಶಾಸಕರು ಮೇಜು ತಟ್ಟಿ ಹರ್ಷ ವ್ಯಕ್ತಪಡಿಸಿದರು.



ಇದಕ್ಕೂ ಮುನ್ನ ಈ ವರ್ಷದ ಆರಂಭದಲ್ಲಿ ಡಿಎಂಕೆ ಪ್ರಧಾನ ಕಚೇರಿಯಲ್ಲಿ ಕಾಂಗ್ರೆಸ್ ಜೊತೆಗಿನ ಸೀಟು ಹಂಚಿಕೆ ಮಾತುಕತೆ ಮುಗಿಸಿ ಹೊರಬರುವಾಗ ಎಂ.ಕೆ. ಸ್ಟಾಲಿನ್ ಅವರು ಮಾಧ್ಯಮಗಳತ್ತ ಕೈ ಎತ್ತಿ ಸನ್ನೆಯೊಂದನ್ನು ಮಾಡಿದ್ದರು. ಈ ಮೂಲಕ ಸೀಟು ಹಂಚಿಕೆ ಮಾತುಕತೆ ಯಶಸ್ವಿಯಾಗಿದೆ ಎಂಬುದನ್ನು ತೋರಿಸಲು ಹೀಗೆ ಮಾಡಿದ್ದರು ಎಂದು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿತ್ತು. ಆದರೆ ಸ್ಟಾಲಿನ್ ನಂತರ ಸ್ಪಷ್ಟನೆ ನೀಡಿ, 'ವರದಿಗಾರರು ಪದೇ ಪದೇ ಪ್ರಶ್ನೆ ಕೇಳು ತ್ತಿದ್ದರಿಂದ, ಮಾತುಕತೆ ಮುಗಿಯಿತು ಎಂದು ಹೇಳಲು ಸಹಜವಾಗಿ ಕೈಸನ್ನೆ ಮಾಡಿದ್ದೆ ಅಷ್ಟೇ ಎಂದು ಹೇಳಿ ದ್ದರು. ಈಗ ಅದೇ ಸನ್ನೆಯನ್ನು ಸಿಎಂ

## ಇಂಜಿನಿಯರಿಂಗ್ ವಿದ್ಯಾರ್ಥಿ ಆತ್ಮಹತ್ಯೆ

**ತುಮಕೂರು:** ನಗರದ ಎಸ್‌ಐಟಿ ಕಾಲೇಜಿನ ಮೂರನೇ ವರ್ಷದ ಇಂಜಿನಿಯರಿಂಗ್ ವಿದ್ಯಾರ್ಥಿ ಹಿಂದುಳಿದ ವರ್ಗಗಳ ವಸತಿ ನಿಲಯದಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ದಾವಣಗೆರೆ ಜಿಲ್ಲೆಯ ದೊಣ್ಣೆಹಳ್ಳಿ ಗ್ರಾಮದ ಜಿ.ಇ.ವೆಂಕಟೇಶ್ (25) ಮೃತ ವಿದ್ಯಾರ್ಥಿ. ನಗರದ ಉಪ್ಪಾರಹಳ್ಳಿಯ ಬಿಸಿಎಂ ಹಾಸ್ಟೆಲ್‌ನಲ್ಲಿದ್ದ ಅವರು, ಕೊಠಡಿಯಲ್ಲಿ ಯಾರೂ ಇಲ್ಲದ




ಸಂದರ್ಭದಲ್ಲಿ ನೇಣು ಬಿಗಿದುಕೊಂಡಿದ್ದಾರೆ. ಸೋಮವಾರ ಬೆಳಿಗ್ಗೆ ಸಹಪಾಠಿಗಳು ಕೊಠಡಿಗೆ ಬಂದು ನೋಡಿದಾಗ ಘಟನೆ ಬೆಳಕಿಗೆ ಬಂದಿದೆ.

ವಿದ್ಯಾರ್ಥಿ ವೆಂಕಟೇಶ್ ಆತ್ಮಹತ್ಯೆಗೆ ನಿಖರವಾದ ಕಾರಣ ತಿಳಿದುಬಂದಿಲ್ಲ.

ಆದರೆ, ಸಾವಿಗೂ ಮುನ್ನ ಅವರು ಪೋಷಕರು ಹಾಗೂ ಕುಟುಂಬಸ್ಥರನ್ನು ಉದ್ದೇಶಿಸಿ ಭಾವನಾತ್ಮಕ ಡೆತ್ ನೋಟ್ ಬರೆದಿದ್ದಾರೆ.

## ಅಧಿಕಾರ ಹಂಚಿಕೆ ಒಪ್ಪಂದ ಬಹಿರಂಗ ಪಡಿಸಿದ ಡಿಕೆಶಿ

**ಬೆಂಗಳೂರು:** ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗ ಮಾಜಿ ಸಿಎಂ ಸಿದ್ದರಾಮಯ್ಯ ಮತ್ತು ತಮ್ಮ ನಡುವೆ ನಡೆದ ಅಧಿಕಾರ ಹಂಚಿಕೆ ಒಪ್ಪಂದದ ಬಗ್ಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮೊದಲ ಬಾರಿಗೆ ಬಹಿರಂಗಪಡಿಸಿದ್ದಾರೆ.



ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಾಗ ವರಿಷ್ಠರು ಕೆಪಿಸಿಸಿ ಅಧ್ಯಕ್ಷ ಆಗಿದ್ದ ನನ್ನನ್ನೇ ಮುಖ್ಯಮಂತ್ರಿ ಮಾಡುತ್ತಾರೆ ಎಂದುಕೊಂಡಿದ್ದೆ. ಆದರೆ ಸಿದ್ದರಾಮಯ್ಯ ಹಾಗೂ ನೀವು ಅಧಿಕಾರ ಹಂಚಿಕೆ ಮಾಡಿಕೊಳ್ಳಿ ಎಂದು ಹೈಕಮಾಂಡ್ ಸೂಚಿಸಿತು ಎಂದು ಡಿ.ಕೆ ಶಿವಕುಮಾರ್ ತಿಳಿಸಿದರು.


ಉತ್ತರ ಕರ್ನಾಟಕ ಭಾಗದ 14 ಜಿಲ್ಲೆಗಳ ವಿವಿಧ ದರ್ಗಾಗಳ ಮುಖ್ಯಸ್ಥರು ಸೋಮವಾರ ಪುಟ 2ಕ್ಕೆ

## 'ಅನ್ನಭಾಗ್ಯ' ಯೋಜನೆಗೂ ಕತ್ತರಿ

### 14 ಲಕ್ಷ ಬಿಪಿಎಲ್ ಕಾರ್ಡ್ ರದ್ದು: ಸಚಿವ ಮುನಿಯಪ್ಪ

**ಬೆಂಗಳೂರು:** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಪೈಕಿ ಗೃಹಲಕ್ಷ್ಮಿ ಮತ್ತು ಗೃಹಜ್ಯೋತಿ ಯೋಜನೆಗಳ ಮರುಪರಿಷ್ಕರಣೆ ಬೆನ್ನಲ್ಲೇ ಈಗ 'ಅನ್ನಭಾಗ್ಯ' ಯೋಜನೆಗೂ ಕತ್ತರಿ ಬೀಳುವುದು ನಿಚ್ಚಳವಾಗಿದೆ.

ಅನ್ನಭಾಗ್ಯ ಯೋಜನೆಯಲ್ಲಿ ಆಗಲಿರುವ ಮಹತ್ವದ ಬದಲಾವಣೆಗಳ ಕುರಿತು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್. ಮುನಿಯಪ್ಪ ಅವರು ಸುಳಿವು ನೀಡಿದ್ದಾರೆ.




ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಕೆ.ಎಚ್.ಮುನಿಯಪ್ಪ, ಅನ್ನಭಾಗ್ಯ ಯೋಜನೆಯನ್ನು ನಿಜವಾದ ಬಡವರಿಗೆ ತಲುಪಿಸುವುದು ನಮ್ಮ ಗುರಿ. ಪ್ರಸ್ತುತ ಪುಟ 2ಕ್ಕೆ



# ಧರ್ಮಸ್ಥಳದಲ್ಲಿ ಆಣೆ–ಪ್ರಮಾಣ ರದ್ದು

### ಮತ್ತೊಂದು ಅವಾಂತರ ಏಕೆ? | ಹೈಕಮಾಂಡ್ ಆದೇಶಕ್ಕೆ ಮನ್ನಣೆ: ಆರ್.ಅಶೋಕ್

**ನವದೆಹಲಿ:** ವಿಧಾನಪರಿಷತ್ ಚುನಾವಣೆಯಲ್ಲಿ ನಡೆದ ಅಡ್ಡ ಮತದಾನದ ಕುರಿತು ಆಣೆ–ಪ್ರಮಾಣ ಮಾಡಿಸಲು ಧರ್ಮಸ್ಥಳದಲ್ಲಿ ಬಿಜೆಪಿ ಶಾಸಕಾಂಗ ಸಭೆ ನಡೆಸುವುದಿಲ್ಲ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಸ್ಪಷ್ಟಪಡಿಸಿದರು.

ನವದೆಹಲಿಯಲ್ಲಿ ಮಂಗಳವಾರ ಸುದ್ದಿಗಾರರ ಜೊತೆ ಮಾತನಾಡಿದ ಅವರು, ವಿಧಾನ ಪರಿಷತ್ ಚುನಾವಣೆಯಲ್ಲಿ ನಡೆದಿರುವ ಅಡ್ಡಮತದಾನ ವಿಚಾರದಲ್ಲಿ ಪವಿತ್ರ ಕ್ಷೇತ್ರ ಧರ್ಮಸ್ಥಳವನ್ನು ರಾಜಕೀಯಕ್ಕೆ ತರಬೇಡಿ. ಪಕ್ಷದೊಳಗೆ ಪತ್ತೆಹಚ್ಚಿ. ಇದರಿಂದ ಪಕ್ಷಕ್ಕೆ ಮುಜುಗರ ತಪ್ಪಲಿದೆ ಎಂದು ನಮ್ಮ ಹಿರಿಯ ನಾಯಕರು ತಿಳಿಸಿದ್ದಾರೆಂದು ಹೇಳಿದರು.

ಧರ್ಮಸ್ಥಳವನ್ನು ರಾಜಕೀಯ ಅಪಚಾರಕ್ಕೆ ಬಳಸುವುದು ಬೇಡ ಎಂದು ನಮ್ಮ ಪಕ್ಷದ ಹಿರಿಯರಿಂದಲೇ ಸಲಹೆ ಬಂದ ಹಿನ್ನೆಲೆಯಲ್ಲಿ ನಮ್ಮ ನಿರ್ಧಾರದಿಂದ ಹಿಂದೆ ಸರಿದಿದ್ದೇವೆ. ಪಕ್ಷದ ಆಂತರಿಕ ವಿಚಾರಗಳನ್ನು ಪಕ್ಷದ ವೇದಿಕೆಯಲ್ಲಿಯೇ ಚರ್ಚಿಸಲಾಗುವುದು ಎಂದು ತಿಳಿಸಿದರು.



ಅಡ್ಡ ಮತದಾನದ ಮೂಲಕ ಪಕ್ಷಕ್ಕೆ ಮೋಸ ಮಾಡಿದವರನ್ನು ಸುಮ್ಮನೆ ಬಿಡುವುದಿಲ್ಲ. ತಕ್ಕ ಶಿಕ್ಷೆ ಕೊಟ್ಟೇ ಕೊಡುತ್ತೇವೆ. ಅದು ಸೆರಗಲ್ಲಿ ಕೆಂಡ ಮುಚ್ಚಿಟ್ಟಂತೆ. ಯಾರು ಅಡ್ಡಮತದಾನ ಮಾಡಿದ್ದಾರೆ ಎಂದು ಆಚೆ ಬಂದೇ ಬರುತ್ತದೆ. ಯಾರು ಪಕ್ಷಕ್ಕೆ ದ್ರೋಹ ಬಗೆದಿದ್ದಾರೋ ಅವರಿಗೆ ತಕ್ಕ ಬುದ್ಧಿ ಕಲಿಸುತ್ತೇವೆ. ಇಂತಹ ದುಷ್ಕೃತ್ಯ ಮತ್ತೆ ಮಾಡಬಾರದು ಎಂದರು.

ರಾಜ್ಯ ಸರ್ಕಾರ ಸುಮಾರು 20 ಲಕ್ಷ ಜನರನ್ನು ಗುರುತಿಸಿ ಸರ್ಕಾರದ ಗ್ಯಾರಂಟಿ ಫಲಾನುಭವಿಗಳನ್ನು ಹೊರಗಿಡಲು ಮುಂದಾಗಿದ್ದಾರೆ. ಇದರಿಂದ ಸರ್ಕಾರಕ್ಕೆ ಸುಮಾರು 10ರಿಂದ 15 ಸಾವಿರ ಕೋಟಿ ಪುಟ 2ಕ್ಕೆ

### ಅಡ್ಡಮತದಾನದ ವರದಿ

**ನವದೆಹಲಿ:** ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಶಾಸಕರು ನಡೆಸಿರುವ ಅಡ್ಡಮತದಾನ ಬಗ್ಗೆ ರಾಷ್ಟ್ರಾಧ್ಯಕ್ಷರಿಗೆ ಪ್ರಾಥಮಿಕ ವರದಿ ಸಲ್ಲಿಸುತ್ತೇವೆ. ನಾವು ಈ ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಂಡಿದ್ದೇವೆ. ಸತ್ಯ ಶೋಧನಾ ಸಮಿತಿ ಪತ್ತೆಹಚ್ಚಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮುತುವರ್ಜಿ ವಹಿಸಿ ಬಿಡದಿ ರೈತರಿಂದ ಜಮೀನು ವಶಪಡಿಸಿಕೊಳ್ಳುತ್ತಿದ್ದಾರೆ. ಭೂಮಿ ವಶ ವಿರುದ್ಧ ನಾವು ಮುಂದಿನ ದಿನಗಳಲ್ಲಿ ಹೋರಾಟ ತೀವ್ರಗೊಳಿಸುತ್ತೇವೆ ಎಂದರು.

# 18 ಮಂದಿ ಜೀತಪದ್ಧತಿಯಿಂದ ರಕ್ಷಣೆ



ಮೈಸೂರು: ಜಿಲ್ಲೆಯಲ್ಲಿ ಜೀತಪದ್ಧತಿ ನಡೆಯುತ್ತಿರುವುದು ಮತ್ತೊಮ್ಮೆ ಬೆಳಕಿಗೆ ಬಂದಿದೆ. ಇಬ್ಬರು ಬಾಲ ಕಾರ್ಮಿಕರು ಸೇರಿ ಒಟ್ಟು 18 ಮಂದಿಯನ್ನು ಜೀತದಿಂದ ಮುಕ್ತಗೊಳಿಸಿ ಅಧಿಕಾರಿಗಳು ರಕ್ಷಿಸಿದ್ದಾರೆ. ಅಲ್ಲದೇ, ಬಲವಂತದಿಂದ ದುಡಿಸಿಕೊಳ್ಳುತ್ತಿದ್ದ ಇಟ್ಟಿಗೆ ತಯಾರಿಕಾ ಕಾರ್ಖಾನೆಗಳ ಮೂವರು ಮಾಲೀಕರನ್ನೂ ಬಂಧಿಸಲಾಗಿದೆ.

ಟಿ.ನರಸೀಪುರ ತಾಲೂಕಿನ ಸೋಸಲೆ ಹೋಬಳಿಯ ಬೇವಿನಹಳ್ಳಿ ಗ್ರಾಮದ ಹೊರವಲಯದ ಇಟ್ಟಿಗೆ ಕಾರ್ಖಾನೆಗಳಲ್ಲಿ ಮಾಲೀಕರ ಬಲವಂತಕ್ಕೆ ದುಡಿಮೆ ಮಾಡುವ ಅನಿವಾರ್ಯತೆಗೆ ಸಿಲುಕಿದ್ದ ಮುತ್ತಣ್ಣ(30) ಮತ್ತು ಜ್ಯೋತಿ (24) ದಂಪತಿ ಹಾಗೂ ಇವರ (13 ಮತ್ತು 9 ವರ್ಷದ) ಇಬ್ಬರು ಪುತ್ರರ ಪೈಕಿ ಒಬ್ಬ ಬಾಲಕನಿಂದಲೂ ದುಡಿಸಲಾಗುತ್ತಿತ್ತು ಎಂಬ ಆರೋಪವಿದೆ. ಚೆನ್ನಪ್ಪ (50), ಆತ್ಮಗಂ (22), ಗಣೇಶ್ (25), ರಾಜೇಶ್ವರಿ (22), ನಾಗಮ್ಮ (32), ಮಲ್ಲಿಕಾ (40), ಸುರೇಶ್ (27), ಪ್ರೇಮಾ (26), ಲಕ್ಷ್ಮಿ (24), ಚಂದ್ರು (60), ಚೆನ್ನಮ್ಮ (52), ಅಮುದಾ (34) ಹಾಗೂ ವೇಲುವನಾದ (32) ಎಂಬವರನ್ನು ಜೀತ ಮುಕ್ತಗೊಳಿಸಲಾಗಿದೆ.

ಬೇವಿನಹಳ್ಳಿ ಗ್ರಾಮದ ಹೊರವಲಯದ ಮೂರು ಇಟ್ಟಿಗೆ ಕಾರ್ಖಾನೆಗಳಲ್ಲಿ ಇವರನ್ನು ಬಲವಂತದಿಂದ ದುಡಿಸಿಕೊಳ್ಳಲಾಗುತ್ತಿತ್ತು ಎಂದು ಆರೋಪಿಸಲಾಗಿದ್ದು, ಈ ಕಾರ್ಖಾನೆಗಳ ಮಾಲೀಕರಾದ ಬೇವಿನಹಳ್ಳಿ ಗ್ರಾಮದ ಗಿರೀಶ್ ಮಹಾದೇವ್ ಹಾಗೂ ಯತೀರಾಜು ಎಂಬವರನ್ನು ಪೊಲೀಸರು ಬಂಧಿಸಿದ್ದಾರೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಡಿ.ಎಲ್.ಎಸ್.ಎ ನೇತೃತ್ವದಲ್ಲಿ ರಕ್ಷಣಾ ಕಾರ್ಯಾಚರಣೆ ನಡೆಸಲಾಗಿದೆ. ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳೂ ಆದ ಹಿರಿಯ ಸಿವಿಲ್ ನ್ಯಾಯಾಧೀಶ ನಾಗರಾಜು ಸಿದ್ದಪ್ಪ ಅಂಕಸ ದೊಡ್ಡಿ, ಟಿ.ನರಸೀಪುರ ತಹಶೀಲ್ದಾರ್ ಸುರೇಶಾಚಾರ್ ಬನ್ನೂರು, ಪೊಲೀಸ್ ಇನ್ಸ್ಪೆಕ್ಟರ್ ಸತೀಶ್, ಕಾರ್ಮಿಕ ತನಿಖೆಯ ಅಧಿಕಾರಿ ಟಿ.ವಿ.ಲಕ್ಷ್ಮೀಶ್ ನೇತೃತ್ವದಲ್ಲಿ ಸೋಮವಾರ ಬೆಳಗ್ಗೆ ಇಟ್ಟಿಗೆ ತಯಾರಿಕಾ ಕಾರ್ಖಾನೆಗಳ ಮೇಲೆ ದಾಳಿ ನಡೆಸಲಾಗಿದೆ.ಇವರ ಇಬ್ಬರು ಮಕ್ಕಳ ಪೈಕಿ ಒಬ್ಬನಿಂದಲೂ ಕೆಲಸ ಮಾಡಿಸಲಾಗುತ್ತಿತ್ತು. ಎರಡು ತಿಂಗಳ ಹಿಂದೆ ಇಟ್ಟಿಗೆ ಕಾರ್ಖಾನೆಯಿಂದ ದಂಪತಿ ತಪ್ಪಿಸಿಕೊಂಡಿದ್ದು, ಗ್ರಾಮದಲ್ಲೇ ಇದ್ದ ಮಕ್ಕಳಿಗೆ ಬೆದರಿಕೆ ಹಾಕುವ ಮೂಲಕ ಕಾರ್ಖಾನೆಯವರು ದಂಪತಿಯನ್ನು ಪತ್ತೆ ಮಾಡಿ ಕರೆತಂದು ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಲಾಗಿದೆ. ಈ ಪ್ರಕರಣದಿಂದ ಉಳಿದ ಕಾರ್ಮಿಕರು ಜೀತಪದ್ಧತಿಯಡಿ ದುಡಿಯುತ್ತಿರುವುದು ಬೆಳಕಿಗೆ ಬಂದಿದೆ. ಆರೋಪಿಗಳಾದ ಗಿರೀಶ್, ಮಹದೇವು, ಯತಿರಾಜು ಎಂಬವರನ್ನು ಬಂಧಿಸಿದ್ದು, ಈ ಮೂವರು 35ರಿಂದ 40 ವರ್ಷದ ವಯೋಮಾನದವರು. ಎಸ್.ಸಿ, ಎಸ್.ಟಿ ಕಾಯ್ದೆಯಡಿ ಪ್ರಕರಣ ದಾಖಲಾಗಿರುವ ಹಿನ್ನೆಲೆಯಲ್ಲಿ ಮೂವರು ನಾಗರಿಕ ಹಕ್ಕುಗಳ ಜಾರಿ ನಿರ್ದೇಶನಾಲಯ ಡಿಸಿಆರ್ಇ ವಶದಲ್ಲಿದ್ದಾರೆ. ಟಿ. ನರಸೀಪುರ ತಹಶೀಲ್ದಾರ್ ನೀಡಿದ ದೂರಿನನ್ವಯ ಬನ್ನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಮೊದಲ ಪುಟದಿಂದ

## ನೀಟ್ ಪರೀಕ್ಷೆಗೆ ತಡ: ಸತ್ಯ ಪರಿಶೀಲನೆ ವರದಿ ಬಿಡುಗಡೆ

ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಅವರು ಕಾಂಗ್ರೆಸ್ ರ್ಯಾಲಿಯಿಂದಾಗಿ ನೀಟ್ ವಿದ್ಯಾರ್ಥಿಗಳು ಬೆಂಗಳೂರಿನ ಪರೀಕ್ಷಾ ಕೇಂದ್ರವನ್ನು ತಡವಾಗಿ ತಲುಪಿದ್ದಾರೆ ಎಂದು ಆರೋಪಿಸಿದ್ದರು.

## 'ಅನ್ನಭಾಗ್ಯ' ಯೋಜನೆಗೂ ಕತ್ತರಿ

ಸುಮಾರು 13ರಿಂದ 14 ಲಕ್ಷ ಜನರು ಅನರ್ಹರಾಗಿದ್ದರೂ ಬಿಪಿಎಲ್ ಕಾರ್ಡ್ ಹೊಂದಿದ್ದಾರೆ. ಅಂತಹ ಅನರ್ಹರನ್ನು ಪತ್ತೆ ಹಚ್ಚಿ ಅವರನ್ನು ಪಟ್ಟಿಯಿಂದ ಕೈಬಿಡುವ ಕೆಲಸವನ್ನು ನಾವು ಶೀಘ್ರದಲ್ಲೇ ಮಾಡಲಿದ್ದೇವೆ ಎಂದು ತಿಳಿಸಿದರು. ಅನರ್ಹರು ಸ್ವಯಂಪ್ರೇರಿತರಾಗಿ ತಮ್ಮ ಕಾರ್ಡ್ಗಳನ್ನು ಎಪಿಎಲ್ ಗೆ ವರ್ಗಾಯಿಸಿಕೊಳ್ಳಬೇಕು ಎಂದು ಈ ಹಿಂದೆಯೇ ಮನವಿ ಮಾಡಲಾಗಿತ್ತು. ಈಗ ಸರ್ಕಾರ ಅನರ್ಹರ ಪಟ್ಟಿಯನ್ನು ತರಿಸಿಕೊಂಡಿದೆ. ಇನ್ನು ಕೆಲವೇ ದಿನಗಳಲ್ಲಿ ಅಂತಿಮ ನಿರ್ಧಾರ ಪ್ರಕಟವಾಗಲಿದೆ ಎಂದು ಅವರು ತಿಳಿಸಿದರು.

## ಅಧಿಕಾರ ಹಂಚಿಕೆ ಒಪ್ಪಂದ ಬಹಿರಂಗ ಪಡಿಸಿದ ಡಿಕೆಶಿ

ಸಿಎಂ ಡಿ.ಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿ ಎಂಎಲ್ ಸಿ ಸಲೀಂ ಅಹ್ಮದ್ ಅವರಿಗೆ ಸಚಿವ ಸ್ಥಾನ ನೀಡುವಂತೆ ನೀಡಿದ ಮನವಿ ಸ್ವೀಕರಿಸಿ ಸಿಎಂ ಮಾತನಾಡಿದರು. ಸಲೀಂ ಅಹ್ಮದ್ ಅವರನ್ನು ಎಂಎಲ್ ಸಿ ಮಾಡಬಾರದು ಎಂದು ವಿರೋಧವಿತ್ತು. ನಾನೇ ಸ್ಪರ್ಧಿಸುವಂತೆ ಮಾಡಿದೆ ಎಂದರು.

## ಆರ್ಎಸ್ಎಸ್ ಸಂವಿಧಾನ ವಿರೋಧಿ

ಕೊಲ್ಲಲಾಗುತ್ತಿತ್ತು. ಆಗ ಅವರ ಕೈಯಲ್ಲಿ ಸಂವಿಧಾನ ಕಾಣಿಸಲಿಲ್ಲ. ಅವರ ಕೈಗಳು ನಡುಗುತ್ತಿದ್ದವು. ಆ ಭೀಕರ ಪರಿಸ್ಥಿತಿ ಬಗ್ಗೆ ಕಾಂಗ್ರೆಸ್ ಬಹುತೇಕ ನಿರ್ಲಕ್ಷ್ಯ ತೋರಿತು ಎಂದು ಪ್ರಧಾನಿ ಮೋದಿ ಹೇಳಿದ್ದರು.

## ವಿಚಾರಣೆ ಸಮಯ ಕಡಿತಕ್ಕೆ 'ಸುಪ್ರೀಂ'ಗೆ ದರ್ಶನ್ ಅರ್ಜಿ

ಲಕ್ಷ್ಮಣ್ ಮತ್ತು ನಾಗರಾಜ್ ಸೇರಿದಂತೆ ಮೂವರು ಆರೋಪಿಗಳ ಪರ ವಕಾಲತ್ತಿನಿಂದ ಹಿಂದೆ ಸರಿದಿರುವುದಾಗಿ ಕೋರ್ಟ್ಗೆ ಮಾಹಿತಿ ನೀಡಿದ್ದಾರೆ. ಈ ವೇಳೆ ನ್ಯಾಯಾಲಯ ದರ್ಶನ್ಗೆ, ಹಿರಿಯ ವಕೀಲ ಹಷ್ಮತ್ ಪಾಷಾ ನಿಮ್ಮ ಪರ ವಕಾಲತ್ತು ಹಾಕಿದ್ದಾರೆ ಎಂದು ತಿಳಿಸಿತು. ಪ್ರಕರಣದ ದಾಖಲೆಗಳನ್ನು ನೂತನ ವಕೀಲರಿಗೆ ಹಸ್ತಾಂತರಿಸುವಂತೆ ಕೋರ್ಟ್ ಸೂಚಿಸಿತು. ದಾಖಲೆಗಳನ್ನು ಕುಟುಂಬಸ್ಥರಿಗೆ ನೀಡಲಾಗಿದೆ ಎಂದು ಸುನೀಲ್ ಪರ ವಕೀಲರು ಕೋರ್ಟ್ಗೆ ತಿಳಿಸಿದರು.


### ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ

ಕಾರ್ಯದರ್ಶಿಯವರ ಕಾರ್ಯಾಲಯ, ಚಾಮುಂಡಿಬೆಟ್ಟ, ಮೈಸೂರು-570010

ದೂರವಾಣಿ ಸಂಖ್ಯೆ : 0821-2590027, ಫ್ಯಾಕ್ಸ್: 0821/2590082, ಇ-ಮೇಲ್: eochamunditemple@gmail.com

ಸಂಖ್ಯೆ: ಶ್ರೀಚಾಕ್ಷೇಅಪ್ರಾ (5)ಸಿಆರ್/2026-27 ದಿನಾಂಕ: 22.06.2026

**ಅಲ್ಪಾವಧಿ ಇ-ಟೆಂಡರ್ ಪ್ರಕಟಣೆ (ದ್ವಿ ಲಕೋಟೆ)**

(ಕರ್ನಾಟಕ ಸರ್ಕಾರದ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಮಾತ್ರ)

ಮೈಸೂರು ಚಾಮುಂಡಿಬೆಟ್ಟ ಶ್ರೀ ಚಾಮುಂಡೇಶ್ವರಿ ದೇವಸ್ಥಾನದಲ್ಲಿ ಜರುಗಲಿರುವ 2026 ನೇ ಸಾಲಿನ ಆಷಾಢ ಶುಕ್ರವಾರಗಳಂದು ಆಗಮಿಸುವ ಹಾಗೂ ರೂ.2000 ಟಿಕೆಟ್ ಪಡೆದ ಭಕ್ತಾಧಿಗಳಿಗೆ ನೀಡಲು ಕಛೇರಿಯಿಂದ ಈ ಕೆಳಕಂಡ ವಿವಿಧ ಬಾಬ್ತುಗಳಿಗೆ ಟೆಂಡರ್ ಕರೆಯಲಾಗಿದೆ. ಆಸಕ್ತರು ಟೆಂಡರ್ ನಮೂನೆಗಳನ್ನು ಇ-ಪ್ರೊಕ್ಯೂರ್‌ಮೆಂಟ್ (https://kppp.karnataka.gov.in) ಮೂಲಕ ಸಲ್ಲಿಸಬಹುದಾಗಿದೆ. ಟೆಂಡರ್ ದಾಖಲೆಯಲ್ಲಿ ತಿಳಿಸಿರುವಂತೆ (Technical qualification criteria) ದ ಎಲ್ಲಾ ಅಗತ್ಯ ದಾಖಲೆಗಳನ್ನು ಸಲ್ಲಿಸುವುದು. ಈ ಕೆಳಕಂಡಂತೆ ನಿಗದಿಪಡಿಸಿದ ಇ.ಎಂ.ಡಿ.ಯನ್ನು ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ನಮೂದಿಸಿದ ಯಾವುದಾದರು ಒಂದು ರೀತಿಯಲ್ಲಿ ಸಲ್ಲಿಸತಕ್ಕದ್ದು, ಇ.ಎಂ.ಡಿ.ಯು ಟೆಂಡರಿನ ನ್ಯಾಯ ಸಮ್ಮತಾ ಮಾನ್ಯತಾ ಅವಧಿಗಿಂತ (Validity period) 45 ದಿನಗಳ ನಂತರದ ವರೆಗೆ ಮಾನ್ಯತೆ ಇರತಕ್ಕದ್ದು. ಹೆಚ್ಚಿನ ಮಾಹಿತಿಗಳನ್ನು ಕಛೇರಿ ವೇಳೆಯಲ್ಲಿ ಪಡೆಯಬಹುದು.

| ಕ್ರ.ಸಂ | ಟೆಂಡರ್ ಹೆಸರು | ಅಂದಾಜು ಮೊತ್ತ (ರೂಗಳಲ್ಲಿ) | ಇಎಂಡಿ ಮೊತ್ತ (ರೂ.ಗಳಲ್ಲಿ) |
|---|---|---|---|
| 1 | ರೂ.2000 ಟಿಕೆಟ್ ಪಡೆದ ಭಕ್ತಾಧಿಗಳಿಗೆ ನೀಡಲು 500 ML ಗಾಜಿನ ವಾಟರ್ (ರೂ .40 x25,000QTY) | 10,00,000 | 20,000 |
| 2 | ರೂ.2000 ಟಿಕೆಟ್ ಪಡೆದ ಭಕ್ತಾಧಿಗಳಿಗೆ ನೀಡಲು ದೇವರ ಫೋಟೋ ಫ್ರೇಮ್ ಖರೀಸುವ ಟೆಂಡರ್ (ರೂ.150x25,000QTY | 37,50,000 | 75,000 |
| 3 | ರೂ.2000 ಟಿಕೆಟ್ ಪಡೆದ ಭಕ್ತಾಧಿಗಳಿಗೆ ನೀಡಲು ಜೂಟ್ ಬ್ಯಾಗ್ ಖರೀದಿಸುವ ಟೆಂಡರ್ (ರೂ.65x25,000QTY) | 16,25,000 | 32,500 |

ಇ- ಪ್ರೊಕ್ಯೂರ್‌ಮೆಂಟ್ ವ್ಯವಸ್ಥೆಯಡಿ ಟೆಂಡರ್ ಷೆಡ್ಯೂಲ್ ದಿನಾಂಕಗಳು ಈ ಕೆಳಕಂಕಡಂತಿದೆ.

| ಕ್ರ. ಸಂ | ವಿವರ | ದಿನಾಂಕಗಳು | ಸಮಯ |
|---|---|---|---|
| 01 | ಇ-ಪೋರ್ಟಲ್‌ನಲ್ಲಿ ಟೆಂಡರ್ ದಾಖಲೆಗಳು ಚಾಲ್ತಿಗೆ ಬರುವುದು | 23.06.2026 | ರ ಸಂಜೆ 5-00 ಗಂಟೆಯ ವರೆಗೆ |
| 02 | ಟೆಂಡರ್ ಗೆ ಸಂಬಂಧಿಸಿದ ವಿಚಾರಣೆಗಾಗಿ | 29.06.2026 | ರ ಸಂಜೆ 5-00 ಗಂಟೆಯ ವರೆಗೆ |
| 03 | ಟೆಂಡರ್ ಡೌನ್‌ಲೋಡ್ ಮಾಡಲು ಮತ್ತು ಟೆಂಡರ್ ಸಲ್ಲಿಸಲು ಕೊನೆ ದಿನಾಂಕ ಮತ್ತು ಸಮಯ. | 30.06.2026 | ರ ಸಂಜೆ 5-00 ಗಂಟೆಯ ವರೆಗೆ |
| 04 | ತಾಂತ್ರಿಕ ಟೆಂಡರ್‌ಗಳನ್ನು ತೆರೆಯುವ ದಿನಾಂಕ: | 02.07.2026 | ರ ಬೆಳಿಗ್ಗೆ 11.00 ಗಂಟೆಯ ನಂತರ |
| 05 | ಹಣಕಾಸಿನ ಟೆಂಡರ್‌ನ್ನು ತೆರೆಯುವ ದಿನಾಂಕ : | 03.07.2026 | ರ ಬೆಳಿಗ್ಗೆ 11.00 ಗಂಟೆಯ ನಂತರ |

ಸಹಿ/- ಕಾರ್ಯದರ್ಶಿ
ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ
ಚಾಮುಂಡಿಬೆಟ್ಟ

ವಾಸಾಸಂಇ/ಮೈಸೂರು/367/ಶಿರಡಿ ಸಾಯಿ/2026-27


# ಭೂಸ್ವಾಧೀನ ಬೇರೆ ಕಡೆಯೂ ನಡೆಯುತ್ತಿದೆ

## ಅಲ್ಲಿ ಇಲ್ಲದ ಹೋರಾಟ ಇಲ್ಲೇಕೆ? – ಎಚ್.ಸಿ.ಬಾಲಕೃಷ್ಣ



ರಾಮನಗರ/ಬೆಂಗಳೂರು: ರಾಜ್ಯದ ಇತರೆಡೆಯೂ ವಿವಿಧ ಯೋಜನೆಗಳಿಗಾಗಿ ಭೂಸ್ವಾಧೀನ ನಡೆಯುತ್ತಿದೆ, ಅಲ್ಲಿ ಇಲ್ಲದ ಹೋರಾಟ ಇಲ್ಲೇಕೆ? ಎಂದು ಮಾಗಡಿ ಕ್ಷೇತ್ರದ ಶಾಸಕ ಎಚ್.ಸಿ.ಬಾಲಕೃಷ್ಣ ಎಚ್.ಡಿ.ಕುಮಾರಸ್ವಾಮಿ ಮತ್ತು ನಿಖಿಲ್ ಕುಮಾರಸ್ವಾಮಿ ಅವರನ್ನು ಪ್ರಶ್ನಿಸಿದ್ದಾರೆ.

ಬಿಡದಿ ಸಮಗ್ರ ನಗರ ಯೋಜನೆ ಸಂಬಂಧ ಮಾಧ್ಯಮ ಪ್ರತಿನಿಧಿಗಳು ಕೇಳಿದ ಪ್ರಶ್ನೆಗಳಿಗೆ ಅವರು ಪ್ರತಿಕ್ರಿಯಿಸಿದರು. ಸರ್ಜಾಪುರ, ಚಿಕ್ಕಬಳ್ಳಾಪುರ, ಜಂಗಮಕೋಟೆ, ದೊಡ್ಡಬಳ್ಳಾಪುರದಲ್ಲಿ ವಿವಿಧ ಯೋಜನೆಗಳಿಗೆ ಭೂಸ್ವಾಧೀನ ಪ್ರಕ್ರಿಯೆ ನಡೆಯುತ್ತಿದೆ. ಹಾಸನದಲ್ಲಿ ಕೇಂದ್ರ ಸರ್ಕಾರದಿಂದ ಮಂಜೂರಾಗುವ ಮುನ್ನವೇ ಐಐಟಿ ಕಾಲೇಜಿಗಾಗಿ 1800 ಎಕರೆ ಭೂಸ್ವಾಧೀನ ಮಾಡಿದ್ದಾರೆ. ಕುಮಾರಸ್ವಾಮಿ ಹಾಗೂ ನಿಖಿಲ್ ಅವರು ಇಲ್ಲೆಲ್ಲೂ ಮಾಡದ ಹೋರಾಟವನ್ನು ಬಿಡದಿಯಲ್ಲಿ ಮಾತ್ರ ಯಾಕೆ ಮಾಡುತ್ತಿದ್ದಾರೆ ಎಂದರು.

**ಪ್ರಬುದ್ಧ ನಾಯಕರಿಗೆ ಇರಬೇಕಾದ ಕನಿಷ್ಠ ಜ್ಞಾನ ಇಲ್ಲ**

ಬಡದಿ ಟೌನ್ ಶಿಪ್ ಯೋಜನೆ ಭೂಸ್ವಾಧೀನ ವಿಚಾರದಲ್ಲಿ ಮುಖ್ಯಮಂತ್ರಿಗಳು ಚರ್ಚೆಗೆ ಸಮಯ ದಿನಾಂಕ ಮಾಡಿದ ನಂತರ ಕುಮಾರಸ್ವಾಮಿ ಅವರು ಬೈರಮಂಗಲಕ್ಕೆ ಬನ್ನಿ ಎಂದು ಹೇಳುತ್ತಿದ್ದಾರೆ ಎಂದು ಮಾಧ್ಯಮ ಪ್ರತಿನಿಧಿಗಳು ಗಮನ ಸೆಳದಾಗ ಪ್ರತಿಕ್ರಿಯಿಸಿದ ಅವರು "ಇದನ್ನೇ ನಾನು ಬಾಲಿಶ ವರ್ತನೆ ಎಂದು ಹೇಳುವುದು. ಪ್ರಬುದ್ಧ ನಾಯಕರಿಗೆ ಇರಬೇಕಾದ ಕನಿಷ್ಠ ಜ್ಞಾನ ಕುಮಾರಣ್ಣ ಅವರಿಗಿಲ್ಲ. ಸಿಎಂ ಅಲ್ಲಿಗೆ ಬಂದರೆ ಅವರ ಕಡೆ ರೈತರು, ಇವರ ಕಡೆ ರೈತರು ಬರುತ್ತಾರೆ. ಜನ ಹೆಚ್ಚಾಗಿ ಸೇರುತ್ತಾರೆ. ಎರಡು ಕಡೆಯವರ ಮಧ್ಯೆ ಮಾರಾಮಾರಿ ನಡೆದರೆ ಯಾರು ಹೊಣೆ? ಬಿಡದಿ ಟೌನ್ ಶಿಪ್ ವಿಚಾರದಲ್ಲಿ ರೈತರ ಹೋರಾಟ ಮುಗಿದು, ಈಗ ರಾಜಕೀಯ ಆಯಾಮ ತೆಗೆದುಕೊಂಡಿದೆ. ರಾಜಕೀಯ ವಿಚಾರ ಎಂದಾಗ ಪಕ್ಷದ ಕಾರ್ಯಕರ್ತರು ಸೇರುತ್ತಾರೆ. ಇದು ಹಿರಿಯ ನಾಯಕರಿಗೆ ಇರಬೇಕಾದ ಕನಿಷ್ಠ ಜ್ಞಾನ" ಎಂದು ಕಿಡಿಕಾರಿದರು.

ಅಲ್ಲಿ ಗಲಾಟೆಯಾದರೆ ಕಾನೂನು ಸುವ್ಯವಸ್ಥೆ ಸರಿ ಇಲ್ಲ ಎಂದು ನಮ್ಮ ತಲೆಗೆ ಕಟ್ಟುವ ಉದ್ದೇಶದಿಂದ ಕುಮಾರಸ್ವಾಮಿ ಅವರು ಅಲ್ಲಿಗೆ ಕರೆಯುತ್ತಿದ್ದಾರೆ. ನಿಮಗೆ ಸತ್ಯಾಸತ್ಯತೆ ಜನರ ಮುಂದೆ ಇಡುವುದೇ ನಿಮ್ಮ ಉದ್ದೇಶವಾಗಿದ್ದರೆ ಮಾಧ್ಯಮ ವೇದಿಕೆಗಳ ಮುಂದೆ ಬನ್ನಿ. ಕುಮಾರಸ್ವಾಮಿ ಹಾಗೂ ನಿಖಿಲ್ ಅವರು ಕುಮಾರಸ್ವಾಮಿ ಅವರು ಯಾಕೆ ಬಿಡದಿಯಲ್ಲಿ ಮಾತ್ರ ಪ್ರತಿಭಟನೆ ಮಾಡುತ್ತಿದ್ದಾರೆ? ಬಿಡದಿಯಲ್ಲಿರುವ ನಿಮ್ಮ 35 ಎಕರೆ ಜಾಗ ಉಳಿಸಿಕೊಳ್ಳಲು ಇಲ್ಲಿ ಹೋರಾಟ ಮಾಡುತ್ತಿದ್ದೀರಾ? ಬೇರೆ ಭಾಗದಲ್ಲಿ ಯಾಕೆ ಹೋರಾಟ ಮಾಡುತ್ತಿಲ್ಲ? ನಿಮ್ಮ ತಂದೆ ಹಾಗೂ ಅಣ್ಣನವರು ಹಾಸನದಲ್ಲಿ ಸ್ವಾಧೀನಪಡಿಸಿರುವ ಭೂಮಿಯನ್ನು ಬಿಡಿಸಿ ನೋಡೋಣ. ಬೇರೆ ಭಾಗದಲ್ಲಿರುವವರು ರೈತರಲ್ಲವೇ? ಅದನ್ನು ಬಿಟ್ಟು ಶಿವಕುಮಾರ್ ಸಿಎಂ ಆಗಿದ್ದಾರೆ, ಅವರಿಗೆ ಮಸಿ ಬಳಿಯಬೇಕು ಎಂದು ಪ್ರಯತ್ನಿಸುತ್ತಿದ್ದೀರಾ?" ಎಂದು ಪ್ರಶ್ನಿಸಿದರು.

**ಕಾಸು ಕೊಟ್ಟು, ಜನ ಕರೆತಂದರು**

ಬಿಡದಿ ಹೋಬಳಿಯಲ್ಲಿ ಭಾನುವಾರ ನಡೆದ ಪಾದಯಾತ್ರೆ ಪ್ರತಿಭಟನೆ ಕುರಿತು ಕಿಡಿಕಾರಿದ ಬಾಲಕೃಷ್ಣ, ಕುಮಾರಸ್ವಾಮಿ ಅವರು ರೈತರೊಂದಿಗೆ ಹೋರಾಟ ಮಾಡಿದರೆ ನಾವು ಸ್ವಾಗತಿಸುತ್ತೇವೆ. ಆದರೆ ಮೈಸೂರು, ಮಂಡ್ಯ, ಹಾರೋಹಳ್ಳಿಯಿಂದ ಜನರಿಗೆ ದುಡ್ಡುಕೊಟ್ಟು ಕರೆದುಕೊಂಡು ಬಂದು ಪ್ರತಿಭಟನೆ ಮಾಡಿಸುತ್ತಿದ್ದಾರೆ. ಇದನ್ನು ಹೋರಾಟ ಎಂದು ಹೇಳಲು ಆಗುತ್ತದೆಯೇ? ಎಂದರು. ಅಲ್ಲಿ ಹೋರಾಟ ಮಾಡುತ್ತಿರುವ ರೈತರೇ ರಾಜಕೀಯದವರು ಬಂದು ಈ ಹೋರಾಟ ದಿಕ್ಕು ತಪ್ಪಿಸಿದರು ಎಂದು ಎಂದು ಹೇಳುತ್ತಿದ್ದಾರೆ.

**ಬಿಡದಿಯಲ್ಲಿರುವ ಅಂತ ಮೋದಿ ಹೇಳಿದ್ರ?**

ಕುಮಾರಸ್ವಾಮಿ ಅವರು ಕೇಂದ್ರ ಮಂತ್ರಿಯಾಗಿದ್ದಾರೆ.. ಮೋದಿ ಅವರು ಕುಮಾರಸ್ವಾಮಿ ಅವರಿಗೆ ಬಿಡದಿಯಲ್ಲೇ ವಾಸ್ತವ್ಯ ಹೂಡು ಎಂದು ಹೇಳಿ ಕಳುಹಿಸಿದ್ದಾರಾ? ಕೇಂದ್ರ ಸಚಿವರಾಗಿ ಬೇರೆ ರಾಜ್ಯಗಳಿಗೆ ಹೋಗಿದ್ದು, ಇಲಾಖೆಗಳ ಬಗ್ಗೆ ಸಭೆ ಮಾಡದೇ ಬೆಳಗಾದರೆ ಬಿಡದಿಗೆ ಬರುತ್ತಿದ್ದಾರೆ. ಜೆಪಿ ಭವನ, ಬಿಡದಿ ನಿವಾಸ ಬಿಟ್ಟು ಕುಮಾರಸ್ವಾಮಿ ಬೇರೆ ಕಡೆ ಕದಲುತ್ತಿಲ್ಲ. ಈ ರಾಜ್ಯದ ಜ್ವಲಂತ ಸಮಸ್ಯೆಗಳಿದ್ದು, ಮೇಕೆದಾಟು, ಮಹದಾಯಿ ಯೋಜನೆಗೆ ಮುಕ್ತಿ ಕೊಡಿಸಿ. ಅದನ್ನು ಬಿಟ್ಟು ಬಸ್ ಮಾಡಿಕೊಂಡು ಜನಗಳನ್ನು ಕರೆಸಿ ಬಾಯಿಗೆ ಬಂದಂತೆ ಮಾತನಾಡುತ್ತಿದ್ದಾರೆ. ಕುಮಾರಸ್ವಾಮಿ ಹಾಗೂ ನಿಖಿಲ್ ಬಗ್ಗೆ ಬಾಯಿಗೆ ಬಂದಂತೆ ಮಾಡನಾಡಲು ನಮಗೆ ಬರುವುದಿಲ್ಲವೇ?. ಇವರ ಹೋರಾಟದಿಂದ ರೈತರಿಗೆ ತೊಂದರೆಯಾಗುತ್ತಿದೆಯೇ ವಿನಃ ಪ್ರಯೋಜನವಾಗುತ್ತಿಲ್ಲ" ಎಂದು ತಿಳಿಸಿದರು.

**ಯಾವ ರೈತರು ಒಪ್ಪಿದ್ದಾರೆ, ಸದ್ಯದಲ್ಲೇ ಪಟ್ಟಿ ಬಿಡುಗಡೆ**

ಭೂಸ್ವಾಧೀನಕ್ಕೆ ಬೈರಮಂಗಲದ ಜನ ಒಪ್ಪುತ್ತಿಲ್ಲ ಎಂದು ಕೇಳಿದಾಗ, ಯಾವ ರೈತರು ಒಪ್ಪಿದ್ದಾರೆ, ಯಾರು ಒಪ್ಪಿಲ್ಲ ಎಂದು ಸದ್ಯದಲ್ಲೇ ಮಾಹಿತಿ ಪ್ರಕಟಿಸುತ್ತೇವೆ. ಕಂಪಯ್ಯನಪಾಳ್ಯದಲ್ಲಿ 570 ರೈತರ ಪೈಕಿ ಸುಮಾರು 500 ರೈತರು ಒಪ್ಪಿಗೆ ಪತ್ರ ನೀಡಿದ್ದಾರೆ. ಈ ಒಪ್ಪಿಗೆ ಪತ್ರ ನೀಡಿರುವವರು ರೈತರಲ್ಲವೇ? ಕೌಟುಂಬಿಕ ಸಮಸ್ಯೆಗಳಿಂದಾಗಿ ಹಾಗೂ ಹೈನುಗಾರಿಕೆ ಆಧಾರಿಸಿ ಜೀವನ ಮಾಡುತ್ತಿರುವವರು ವಿರೋಧ ಮಾಡುತ್ತಿದ್ದಾರೆ. ಅವರಿಗೆ ಬೇರೆ ರೀತಿ ಪರಿಹಾರ ನೀಡಲು ತೀರ್ಮಾನ ಮಾಡಿದ್ದೇವೆ. ಅಲ್ಲಿರುವ ನಿಜವಾದ ರೈತರನ್ನು ಕರೆಸಿ ಮಾತನಾಡಲು ನಾವು ಸಿದ್ಧರಿದ್ದರೂ ಇವರು ಅದಕ್ಕೆ ಅವಕಾಶ ನೀಡುತ್ತಿಲ್ಲ.

ಇವರ ಉದ್ದೇಶ ಸಮಸ್ಯೆ ಬಗೆಹರಿಸುವುದೇ ಅಥವಾ ಗಲಾಟೆ ಮಾಡುವುದೇ? ನಾಲ್ಕೈದು ಸಾವಿರ ಜನ ಬಂದಾಗ, ಚರ್ಚೆ ಮಾಡಲು ಸಾಧ್ಯವೇ? ಹೋರಾಟದ ಪರವಾಗಿರುವ 25-30 ಜನ ಬಂದರೆ ಸಾಧಕ ಬಾಧಕ ಚರ್ಚೆ ಮಾಡಬಹುದು. ರಾಜಕೀಯ ಲೇಪ ಹಚ್ಚಿದ ಪರಿಣಾಮ ಈ ವಿಚಾರ ಇಂದು ರಾಜಕೀಯವಾಗಿದೆ. ದಳದವರನ್ನು ದೂರವಿಟ್ಟು ರೈತರು ಇವತ್ತಿಗೂ ಚರ್ಚೆಗೆ ಬಂದರೆ ಅವರ ಜೊತೆ ಮಾತನಾಡಲು ನಾವು ಸಿದ್ಧವಿದ್ದೇವೆ. ಅವರಿಗೆ ಅಗತ್ಯವಿರುವ ಎಲ್ಲಾ ಸವಲತ್ತು ನೀಡಿದ್ದೇವೆ. "ಅಲ್ಲಿನವರ ವಿರೋಧವಿಲ್ಲ ಎಂದು ನಾನು ಹೇಳುತ್ತಿಲ್ಲ. ವಿರೋಧವಿರುವವರ ಮನವೊಲಿಸುವ ಕೆಲಸ ಮಾಡುತ್ತೇವೆ" ಎಂದರು.

# ಮೂವರ ಆತ್ಮಹತ್ಯೆ: ಯುವಕನ ಬಂಧನ



**ಮೈಸೂರು:** ಒಂದೇ ಕುಟುಂಬದ ಮೂವರ ಆತ್ಮಹತ್ಯೆಗೆ ಕಾರಣನಾದ ಯುವಕನನ್ನು ತಿ.ನರಸೀಪರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಉಲ್ಲಾಸ್ ಗೌಡ ಬಂಧಿತ ಆರೋಪಿ. ಈತನನ್ನು ಬಂಧಿಸಲು ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಇನ್ಸ್ಪೆಕ್ಟರ್ ಧನಂಜಯ್, ಶಿವಾನಂದ ಶೆಟ್ಟಿ ನೇತೃತ್ವದಲ್ಲಿ ತಂಡ ರಚನೆ ಮಾಡಿದ್ದರು. ಮೈಸೂರಿನಲ್ಲಿ ಆರೋಪಿಯನ್ನು ಬಂಧಿಸಲಾಗಿದೆ. ಪೊಲೀಸರು ನ್ಯಾಯಾಧೀಶರ ಮುಂದೆ ಆರೋಪಿಯನ್ನು ಹಾಜರು ಪಡಿಸಿದ್ದು, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಮೈಸೂರು ಜಿಲ್ಲೆ ತಿ ನರಸೀಪುರ ತಾಲೂಕಿನ ಹಳೇಕೆಂಪಯ್ಯನಹುಂಡಿ ಗ್ರಾಮದಲ್ಲಿ ನಡೆದಿದ್ದ ಘಟನೆ ನಂತರ ಆರೋಪಿ, ಉಲ್ಲಾಸ್ ಗೌಡ ತಲೆ ಮರೆಸಿಕೊಂಡಿದ್ದನು. ಯುವಕನೊಬ್ಬನ ಕಿರುಕುಳಕ್ಕೆ ಬೇಸತ್ತು ಒಂದೇ ಕುಟುಂಬದ ಮೂರು ಜನ ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆಗೆ ಶರಣಾಗಿದ್ದ ಘಟನೆ ಸೋಮವಾರ ಕೆಂಪಯ್ಯನ ಹುಂಡಿಯಲ್ಲಿ ನಡೆದಿತ್ತು. ಗ್ರಾಮದ ದಂಪತಿ ಶಿವಣ್ಣ, ನಾಗರತ್ನ ಹಾಗೂ ಅವರ ಮಗಳು ರಕ್ಷಿತಾ ಆತ್ಮಹತ್ಯೆಗೆ ಶರಣಾದವರು. ಇದೇ ಗ್ರಾಮದ ಯುವಕ ಉಲ್ಲಾಸ್ ಗೌಡ ಎಂಬಾತ ಮಾನಸಿಕವಾಗಿ ಈ ಕುಟುಂಬಕ್ಕೆ ಕಿರುಕುಳ ನೀಡುತ್ತಿದ್ದ ಎಂದು ಡೆತ್ ನೋಟ್ನಲ್ಲಿ ಆರೋಪಿಸಲಾಗಿತ್ತು. ಮದುವೆ ನಿಶ್ಚಯವಾಗಿದ್ದ ಯುವತಿ ರಕ್ಷಿತಾ ಅವರಿಗೆ ಆರೋಪಿ ಯುವಕ ಕಿರುಕುಳ ನೀಡುತ್ತಿದ್ದ. ಮಾತ್ರವಲ್ಲ ರಕ್ಷಿತಾ ಜೊತೆಗೆ ನಿಶ್ಚಿತಾರ್ಥ ಮಾಡಿಕೊಂಡಿದ್ದ ಯುವಕನಿಗೆ ಉಲ್ಲಾಸ್ ಗೌಡ ಮೆಸೇಜ್ ಮಾಡಿದ್ದ ಎನ್ನವುದರ ಬಗ್ಗೆ ಡೆತ್ನೋಟ್ನಲ್ಲಿ ಆರೋಪಿಸಲಾಗಿತ್ತು. ಇದರಿಂದ ಮರ್ಯಾದೆಗೆ ಅಂಜಿ ಕುಟುಂಬದವರು ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂದು ಪೊಲೀಸರು ಶಂಕೆ ವ್ಯಕ್ತಪಡಿಸಿದ್ದರು.

ಘಟನಾ ಸ್ಥಳಕ್ಕೆ ಆಗಮಿಸಿದ್ದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಪರಿಶೀಲನೆ ನಡೆಸಿ, ಮಾಹಿತಿ ಪಡೆದಿದ್ದರು. ನಂತರ ಡೆತ್ ನೋಟ್ ವಶಪಡಿಸಿಕೊಂಡಿದ್ದು, ತನಿಖೆ ಕೈಗೊಂಡಿರುವುದಾಗಿ ತಿಳಿಸಿದ್ದರು. ಮುಂದಿನ ಎರಡು ದಿನಗಳಲ್ಲಿ ರಕ್ಷಿತಾ ಅವರಿಗೆ ಮದುವೆ ನಿಶ್ಚಯವಾಗಿತ್ತು. ಆದರೆ ಇದರ ನಡುವೆ ಉಲ್ಲಾಸ್ ಗೌಡ ರಕ್ಷಿತಾಳನ್ನು ಪ್ರೀತಿಸಿದ್ದು, ಮದುವೆ ಆಗುತ್ತೇನೆ ಎಂದು ಕುಟುಂಬದವರಿಗೆ ಹೇಳಿದ್ದ. ಆದರೆ, ಆತನ ಪ್ರಸ್ತಾಪವನ್ನು ರಕ್ಷಿತಾ ಹಾಗೂ ಆಕೆ ಮನೆಯವರು ತಿರಸ್ಕರಿಸಿದ್ದರು. ಅಲ್ಲದೇ ಬೇರೆ ಹುಡುಗನ ಜೊತೆಗೆ ನಿಶ್ಚಿತಾರ್ಥ ಕೂಡ ಮಾಡಿದ್ದರು. ಇನ್ನೆರಡು ದಿನಗಳಲ್ಲಿ ಮದುವೆ ಕೂಡ ಇದ್ದು, ಎಲ್ಲ ಸಿದ್ಧತೆ ಮಾಡಿಕೊಂಡಿದ್ದರು. ಆದರೆ ಕೊನೇ ಕ್ಷಣದಲ್ಲಿ ಕುಟುಂಬದವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಸ್ಥಳೀಯರು ತಿಳಿಸಿದ್ದರು. ಈ ಹಿನ್ನೆಲೆಯಲ್ಲಿ ಡೆತ್ ನೋಟ್ ಆಧಾರದ ಮೇಲೆ ಯುವಕನನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದರು.

**ಶವಾಗಾರದಲ್ಲಿ ಪ್ರತಿಭಟನೆ:** ಕೃಷ್ಣರಾಜೇಂದ್ರ ಆಸ್ಪತ್ರೆಯ ಶವಗಾರದ ಬಳಿ ಗ್ರಾಮಸ್ಥರ ಪ್ರತಿಭಟನೆ ನಡೆಸಿ ನಿನ್ನೆ ಘಟನೆ ನಡೆದಿದ್ದರೂ ಸ್ಥಳಕ್ಕೆ ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ, ಸಂಸದ ಸುನೀಲ್ ಬೋಸ್ ಬಾರದಿರುವ ಬಗ್ಗೆ ಬೇಸರ ಹೊರಹಾಕಿದರು. ಮತ ಹಾಕಿಸಿಕೊಳ್ಳುವುದಕ್ಕೆ ಸಮುದಾಯ ಬೇಕೇ ಎಂದು ಕಿಡಿಕಾರಿ ಸ್ಥಳಕ್ಕೆ ಬರುವಂತೆ ಆಗ್ರಹಿಸಿದರು. ಜತೆಗೆ ಸಾವಿಗೆ ಕಾರಣನಾದ ಉಲ್ಲಾಸ್ ಗೌಡನಿಗೆ ಗಲ್ಲು ಶಿಕ್ಷೆ ಆಗಬೇಕು. ಆತನ ಆಸ್ತಿ ಮುಟ್ಟು ಗೋಲು ಹಾಕಿಕೊಳ್ಳಬೇಕು. ಸಂತ್ರಸ್ತ ಕುಟುಂಬಕ್ಕೆ ಸೂಕ್ತ ಪರಿಹಾರ ಕೊಡಬೇಕು ಎಂದು ಆಗ್ರಹಿಸಿದ್ದರಿಂದ ಕೆಲಕಾಲ ಗೊಂದಲದ ವಾತಾವರಣ ಸೃಷ್ಠಿಯಿಯಾಯಿತು.

ಸ್ಥಳಕ್ಕೆ ಆಗಮಿಸಿದ ಮಾಜಿ ಸಚಿವ ಸಾ.ರಾ.ಮಹೇಶ್ ವೈಯಕ್ತಿಕವಾಗಿ 50 ಸಾವಿರ ನೀಡಿ ಮೃತರ ಕುಟುಂಬಕ್ಕೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರಿಂದ 5ಲಕ್ಷ ಪರಿಹಾರ ಕೊಡಿಸಿಕೊಡುವುದಾಗಿ ಹೇಳಿದರು. ಅಲ್ಲದೆ, ಕಾನೂನಾತ್ಮಕವಾಗಿ ಕುಟುಂಬಕ್ಕೆ ನ್ಯಾಯ ದೊರಕಿಸಿಕೊಡುವ ಸಂಬಂಧ ಹೋರಾಟ ನಡೆಸುವುದಾಗಿ ಹೇಳಿ ಕುಟುಂಬಸ್ಥರಿಗೆ ಸಾಂತ್ವಾನ ಹೇಳಿದರು. ಇದೇ ವೇಳೆ ಉಪ್ಪಾರ ಸಮುದಾಯದ ಮುಖಂಡರೂ ಆಗಿರುವ ಶಾಸಕ ಪುಟ್ಟರಂಗಶೆಟ್ಟಿಗೆ ಕರೆ ಮಾಡಿ ಘಟನಾ ಸ್ಥಳಕ್ಕೆ ಬರುವಂತೆ ತಿಳಿಸಿದರು. ಕೂಡಲೇ ಪುಟ್ಟರಂಗ ಶೆಟ್ಟಿ ವರುಣ ಜೆಡಿಎಸ್ ಮುಖಂಡ ಅಭಿಷೇಕ್ ಜತೆಗಿದ್ದರು.

ಶಾಸಕ ಪುಟ್ಟರಂಗಶೆಟ್ಟಿ ಮಾತನಾಡಿ, ನೆನ್ನೆ ವರಣ ಕ್ಷೇತ್ರದ ಕೆಂಪಯ್ಯನಹುಂಡಿ ಗ್ರಾಮದಲ್ಲಿ ಒಂದೇ ಮನೆ ಮೂರು ಜನ ಅತ್ಮಹತ್ಯೆ ಮಾಡಿಕೊಂಡಿದ್ದಾರೆ. ಡೆತ್ ನೋಟ್ ಬರೆದು ತನ್ನ ಸಾವಿಗೆ ಉಲ್ಲಾಸ್ ಗೌಡ ಎನ್ನುವವನೇ ಕಾರಣ ಎಂದು ಬರೆದಿದ್ದಾರೆ. ಪ್ರೀತಿ ವಿಚಾರಕ್ಕೆ ಈ ರೀತಿ ಅಗಿದೆ. ಮಾನಕ್ಕೆ ಹೆದರಿ ಈ ರೀತಿ ಮಾಡಿಕೊಂಡಿದ್ದಾರೆ. ಇದಕ್ಕೆ ಕಾರಣ ಆಗಿರೋದು ಅನ್ಯ ಸಮುದಾಯದ ಉಲ್ಲಾಸ್ ಗೌಡ. ಆತನಿಗೆ ಮರಣದಂಡನೆ ಶಿಕ್ಷೆ ಆಗಬೇಕು ಅಂತ ಎಲ್ಲರು ಒತ್ತಾಯ ಮಾಡುತ್ತಿದ್ದಾರೆ. ಮೃತರ ಕುಟುಂಬದ ಮನೆಯ ಜಾಗ ಕೂಡ ವ್ಯಾಜ್ಯದಲ್ಲಿದೆ. ಅದಕ್ಕೂ ಉಲ್ಲಾಸ್ ಕುಟುಂಬ ತೊಂದರೆ ಕೊಟ್ಟಿದ್ದಾರೆ. ಉಲ್ಲಾಸ್ ತಂದೆ ನನಗೂ ಸ್ನೇಹಿತ. ಇಲ್ಲಿಗೆ ಬರುವ ಮುನ್ನ ಅವರ ಜೊತೆ ಮಾತನಾಡಿದ್ದೇನೆ. ವಿವಾದಿತ ಜಾಗವನ್ನು ಮೃತರ ಕುಟುಂಬಕ್ಕೆ ಬರೆದುಕೊಡುವುದಾಗಿ ಒಪ್ಪಿದ್ದಾರೆ. ನಾವು ತೆಗೆದುಕೊಳ್ಳುವ ತೀರ್ಮಾನಕ್ಕೆ ಒಪ್ಪಿಗೆ ಇದೆ ಎಂದು ಹೇಳಿದ್ದಾರೆ. ತಕ್ಷಣದಲ್ಲಿ ಎಲ್ಲವನ್ನು ಮಾಡಲು ಆಗಲ್ಲ. ಕಾನೂನು ಇದೆ, ಅದರ ಮೂಲಕ ಎಲ್ಲವನ್ನು ಸರಿ ಮಾಡುತ್ತೇವೆಂದು ಪ್ರತಿಭಟನಾಕಾರರ ಮನವೊಲಿಸಿದರು.

### ಯತೀಂದ್ರ, ಸುನೀಲ್ ಬೋಸ್ ಸಾಂತ್ವಾನ

**ಶವಗಾರದಲ್ಲಿ ಪ್ರತಿಭಟನೆ ನಡೆಸುತ್ತಿದ್ದ ತಿಳಿಯುತ್ತಿದ್ದಂತೆ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ, ಸಂಸದ ಸುನೀಲ್ ಕೆಂಪಯ್ಯನಹುಂಡಿ ಗ್ರಾಮದ ಮೃತರ ನಿವಾಸಕ್ಕೆ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವಾನ ಹೇಳಿದರು. ವೈಯುಕ್ತಿಕವಾಗಿ ಐದು ಲಕ್ಷ ಪರಿಹಾರ ಘೋಷಿಸಿದರು. ಕಾನೂನು ಚೌಕಟ್ಟಿನಲ್ಲಿ ತಪ್ಪಿತಸ್ಥರಿಗೆ ಶಿಕ್ಷೆಯಾಗಲಿದ್ದು, ಇದರಲ್ಲಿ ಯಾವುದೇ ಅನುಮಾನ ಬೇಡ, ನಿಮ್ಮೊಟ್ಟಿಗೆ ನಾವಿದ್ದೇವೆಂದು ಹೇಳಿದರು.**

ಮೊದಲ ಪುಟದಿಂದ

## ಆಣೆ-ಪ್ರಮಾಣ ರದ್ದು

ರೂಪಾಯಿ ಉಳಿತಾಯವಾಗುತ್ತದೆ. ಕಾಂಗ್ರೆಸ್ ನವರು ಗೆಲ್ಲುವವರೆಗೆ ಒಂದು, ಗೆದ್ದ ನಂತರ ಮತ್ತೊಂದು ಮಾಡುತ್ತಿದ್ದಾರೆ. ಕಳ್ಳ ಕಾಂಗ್ರೆಸ್ ನ್ನು ರಾಜ್ಯದ ಜನತೆ ನಂಬಬೇಡಿ. ಇದು ಡಿ.ಕೆ ಶಿವಕುಮಾರ್ ಆರಂಭವಷ್ಟೇ. ಮುಂದಿನ ದಿನಗಳಲ್ಲಿ ಇವರ ಆಟ ನೋಡುತ್ತಿರಿ ಎಂದು ವ್ಯಂಗ್ಯವಾಡಿದರು. ಮಾಧ್ಯಮಗಳಲ್ಲಿ ಅಡ್ಡ ಮತದಾನ ಮಾಡಿದವರ ಬಗ್ಗೆ ದಿನಕ್ಕೊಂದು ಹೆಸರುಗಳು ಬರುತ್ತವೆ. ಇದನ್ನು ಯಾರೋ ಮಾಡುತ್ತಿದ್ದಾರೆ. ಕಾಂಗ್ರೆಸ್ ನವರೇ ನಮ್ಮ ಪಕ್ಷದಲ್ಲಿ ಭಿನ್ನಾಭಿಪ್ರಾಯ, ಗೊಂದಲ ಸೃಷ್ಟಿ ಮಾಡಲು ಹೀಗೆ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಪಕ್ಷದ ಹಿರಿಯ ಶಾಸಕರು ಹಾಗೂ ನಾಯಕರಿಂದ ವ್ಯಕ್ತವಾದ ತೀವ್ರ ವಿರೋಧದ ಬೆನ್ನಲ್ಲೇ ಆಣೆ ಪ್ರಮಾಣಕ್ಕೆ ಬ್ರೇಕ್ ಬಿದ್ದಿದೆ. ಧರ್ಮಸ್ಥಳದಲ್ಲಿ ನಡೆಸಲು ಉದ್ದೇಶಿಸಿದ್ದ ಶಾಸಕಾಂಗ ಪಕ್ಷದ ಸಭೆಯನ್ನು ಬಿಜೆಪಿ ರದ್ದುಗೊಳಿಸಿದೆ.

## ನಾಲಿಗೆ ಬಿಗಿ ಹಿಡಿದು ಮಾತಾಡಿ!

ಸಚಿವ ಬಿಸಿ ಪಾಟೀಲ್ ತಿರುಗೇಟು ನೀಡಿದ್ದಾರೆ. ಈಶ್ವರಪ್ಪ ಆರೋಪಕ್ಕೆ ಎಕ್ಸ್ ಮೂಲಕ ಪ್ರತಿಕ್ರಿಯಿಸಿರುವ ಮಾಜಿ ಸಚಿವ ಬಿಸಿ ಪಾಟೀಲ್ ಅವರು, ಈಶ್ವರಪ್ಪ ಎಚ್ಚರಿಕೆಯಿಂದ ನಾಲಿಗೆ ಬಿಗಿ ಹಿಡಿದು ಮಾತನಾಡಿ. ನಾವೆಲ್ಲ ಬಿಜೆಪಿಗೆ ಬರುವಾಗ ನಿಮ್ಮ ಯಾವ ಶ್ರಮವೂ ಇಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ. ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಈಶ್ವರಪ್ಪ, ಎಂಎಲ್‌ಸಿ ಚುನಾವಣೆಯಲ್ಲಿ ನಡೆದ ಅಡ್ಡ ಮತದಾನದ ಬಗ್ಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಈ ಹಿಂದೆ 17 ಕಾಂಗ್ರೆಸ್ ಶಾಸಕರನ್ನು ದುಡ್ಡು ಕೊಟ್ಟು ನಮ್ಮ ಪಕ್ಷಕ್ಕೆ ಕರೆದುಕೊಂಡಿದ್ದೆವು. ನಂತರ ಪಕ್ಷ ಅವರಿಂದ ಹಾಳಾಗಿ ಹೋಯ್ತು ಎಂದು ಟೀಕಿಸಿದ್ದರು.

OOOO

# ಅಕ್ರಮ ವಲಸೆ ತಡೆಯುವಂತೆ ಆಗ್ರಹಿಸಿ ಬೃಹತ್ ಪ್ರತಿಭಟನೆ



ಮೈಸೂರು: ಅಕ್ರಮ ವಲಸೆ ತಡೆಯಿರಿ, ದೇಶದ ಭದ್ರತೆ ಕಾಪಾಡಿ, ನುಸುಳುಕೋರರ ಹಾವಳಿ ನಿಲ್ಲಲಿ ನಮ್ಮ ನೆಲದ ರಕ್ಷಣೆ ಮೊದಲಾಗಲಿ, ಎಂಬಿ ತ್ಯಾದಿ ನಾಮಫಲಕಗಳನ್ನು ಹಿಡಿದು ನೂರಾರು ಘೋಷಣೆಗಳನ್ನು ಕೂಗಿ ಹಿಂದೂ ಜಾಗರಣ ವೇದಿಕೆ ಮಹಾನಗರ ಕಾರ್ಯಕರ್ತರು ಪ್ರತಿಭಟಿಸಿದರು.

ನಗರದ ಗಾಂಧಿ ವೃತ್ತದಲ್ಲಿ ಆಯೋಜಿಸಿದ್ದ ಪ್ರತಿಭಟನೆಯಲ್ಲಿ ಹಣದ ಆಸೆಗಾಗಿ ನಾಗರೀಕ ದಾಖಲೆ ಮಾಡುತ್ತಿರುವ ದೇಶದ್ರೋಹಿಗಳನ್ನು ಬಂಧಿಸಿ, ಅಕ್ರಮವಾಗಿ ರಾಜ್ಯದ ಒಳಗೆ ಬಿಟ್ಟುಕೊಳ್ಳುತ್ತಿರುವ ರಾಜ್ಯ ಸರ್ಕಾರದ ನಡೆಗೆ ಖಂಡನೆ ಎಂದು ನಾನಾ ಘೋಷಣೆಗಳನ್ನು ಕೂಗಿ ಆಕ್ರೋಶ ಹೊರಹಾಕಿದರು.

ಹಿಂದು ಜಾಗರಣೆ ವೇದಿಕೆಯ ಪ್ರಾಂತ್ಯ ಅಧ್ಯಕ್ಷ ಮಹೇಶ್ ಮಾತನಾಡಿ, ಅಕ್ರಮ ಬಾಂಗ್ಲಾ ವಲಸಿಗರು ಮೈಸೂರಿಗೆ ಬರುತ್ತಿದ್ದಾರೆ ಅಂತ ಮಾಹಿತಿ ಬಂತು. ವಿಚಾರ ತಿಳಿದ ತಕ್ಷಣ ದೇಶ ಭಕ್ತರು ಅದನ್ನು ನೋಡುವುದಕ್ಕೆ ಹೋಗಿದ್ದರು. ಅಕ್ರಮ ಬಾಂಗ್ಲಾ ದವರು 3 ಬೋಗಿಯಲ್ಲಿ ಬಂದಿದ್ದಾರೆ ಅನ್ನುವ ಮಾಹಿತಿ ಇತ್ತು. ಅಷ್ಟು ಜನರನ್ನು 15 ಪೊಲೀಸರು ತಪಾಸಣೆ ಮಾಡುವುದಕ್ಕೆ ಅಗುವುದಿಲ್ಲ ಎಂದು ದೇಶ ಭಕ್ತರು ಸಹಾಯಕ್ಕೆ ಹೋಗಿದ್ದೇವು. ಘಟನೆಯಾದ ಮೇಲೆ ಸೂಕ್ತವಾದ ತನಿಖೆಯನ್ನು ಪೊಲೀಸ್ ಇಲಾಖೆ ಮಾಡಿಲ್ಲ. ಕೇವಲ ಅಧಾರ ಕಾರ್ಡ್ ಪರಿಶಿಲಿಸಿದ್ದೇವೆ ಅಂತ ಹೇಳುವುದು ಪೊಲೀಸ ಕೆಲಸ ಅಲ್ಲ. ಲಷ್ಕರ್ ಪೊಲೀಸರು ಅಧಾರ ಕಾರ್ಡ್ ಇದೆ ಅವರನ್ನು ಯಾಕೆ ಕರೆದುಕೊಂಡು ಬಂದಿದ್ದೀರ ಅಂತ ಕೇಳುತ್ತಾರೆ. ಯಾರು ಸಹಕಾರ ಕೊಟ್ಟರು ಅವರ ಮೇಲೆ ಎಫ್ ಐ ಅರ್ ಮಾಡಿಸುತ್ತೀರ. ಅಮಾಯಕರ ಮೇಲೆ ಸುಳ್ಳು ದೂರು ದಾಖಲು ಮಾಡುತ್ತೀರ. ನಿಮ್ಮ ಎಫ್ ಐ ಆರ್ ಗೆ ಇಲ್ಲಿ ಯಾರು ಹೆದರುವುದಿಲ್ಲ. ಖಾಕಿ ಹಾಕಿಕೊಂಡು ಗೂಂಡ ಕೆಲಸವನ್ನು ಮಾಡುತ್ತಿದ್ದಾರೆಂದರು. ರಾಜ್ಯ ಗೃಹ ಸಚಿವರ ಕುಮ್ಮಕ್ಕಿನಿಂದಲೇ ಅಮಾಯಕರ ಮೇಲೆ ದೂರು ದಾಖಲು ಮಾಡಿದ್ದಾರೆ. ರಾಜ್ಯ ಸರ್ಕಾರದ ಬೆಂಬಲದಿಂದಲೇ ಅಕ್ರಮ ವಲಸಿಗರ ಸಂಖ್ಯೆ ಹೆಚ್ಚುತ್ತಿದೆ. ಆಧಾರ್ ಕಾರ್ಡ್ ಪರಿಶೀಲಿಸುತ್ತಾರೆ. ಅದು ಪರಿಶೀಲಿಸಿದರೆ ಸಾಲದು ಪಶ್ಚಿಮ ಬಂಗಾಳದಲ್ಲಿ ಅನೇಕರು ಅಕ್ರಮವಾಗಿ ಆಧಾರ್ ಕಾರ್ಡ್ ಮಾಡಿಕೊಂಡಿದ್ದು, ಈ ಬಗ್ಗೆ ಅಲ್ಲಿನ ಸರ್ಕಾರ ತೀವ್ರ ತಪಾಸಣೆ ನಡೆಸುತ್ತಿದೆ. ಈ ಹಿನ್ನೆಲೆಯಲ್ಲಿ ನಗರದಲ್ಲಿ ಪೋಸರು ತೀವ್ರ ತಪಾಸಣೆ ನಡೆಸಬೇಕೆಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ನಗರಪಾಲಿಕೆ ಮಾಜಿ ಸದಸ್ಯ ನಮ್ರತರಮೇಶ್, ರಾಕೇಶ್ ಗೌಡ, ರಾಜಕುಮಾರ್, ಹೇಮಾನಂದೀಶ್, ದಿನೇಶ್ ಗೌಡ, ಪರಮೇಶ್ ಗೌಡ, ಗಿರಿಗೌಡ, ಆನಂದ್, ಅರುಣ್ ಕುಮಾರ್ ಗೌಡ, ಉಪಸ್ಥಿತರಿದ್ದರು.

## ತೆರಿಗೆ ಕಾಯ್ದೆ–2025 ಸಮರ್ಪಕ ಅನುಷ್ಠಾನಕ್ಕೆ ಗುರುಪ್ರಸಾದ್ ಕರೆ

### ಚಾಮರಾಜನಗರ ಜಿಲ್ಲಾ ಲೆಕ್ಕ ಪರಿಶೋಧಕರ ಅಸೋಷಿಯಯನ್‌ನಿಂದ ಕಾರ್ಯಾಗಾರ




ಚಾಮರಾಜನಗರ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಆದಾಯ ತೆರಿಗೆ ಕಾಯ್ದೆ– 2025 ಅನ್ನು ಏಪ್ರಿಲ್ 1 ರಿಂದ ಜಾರಿ ಮಾಡಿದ್ದು, ಇದನ್ನು ಸಮರ್ಪಕವಾಗಿ ಅನುಷ್ಠಾನ ಮಾಡುವ ಲೆಕ್ಕ ಪರಿಶೋದನೆಯಲ್ಲಿ ವೃತ್ತಿ ನೈಪುಣ್ಯತೆಯನ್ನು ಹೊಂದಬೇಕು ಆದಾಯ ತೆರಿಗೆ ಅಧಿಕಾರಿ ಶ್ರೀ ಗುರುಪ್ರಸಾದ್ ತಿಳಿಸಿದರು.

ನಗರದ ನಂದಿ ಹೋಟೆಲ್ ಇನ್ ನಲ್ಲಿ ಚಾಮರಾಜನಗರ ಜಿಲ್ಲಾ ಅಡಿಟರ್ ಅಸೋಷಿಯನ್ ಹಾಗೂ ಜಿಲ್ಲಾ ತೆರಿಗೆ ಇಲಾಖೆಯ ಸಹಯೋಗಲ್ಲಿ ನಡೆದ ನೂತನ ಅದಾಯ ತೆರಿಗೆ ಕಾಯ್ದೆ ? 2025 ರ ಕುರಿತು ಕಾರ್ಯಾಗಾರನ್ನು ಗಿಡಕ್ಕೆ ನೀರು ಹಾಕುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ಆದಾಯ ತೆರಿಗೆ –2025 ಕಾಯ್ದೆಯನ್ನು ಜಾರಿ ಮಾಡಿದ್ದು, ಕೆಲವು ನ್ಯೂನತೆಗಳು ಸರಿಪಡಿಸಿ, ಹೊಸ ಕಾಯಿದೆಯನ್ನು ಅದಾಯ ತೆರಿಗೆ ಇಲಾಖೆಯ ಅನುಷ್ಠಾನ ಮಾಡಿದೆ. ಈ ಕಾಯ್ದೆಯು ಎಪ್ರಿಲ್ 1 ರಿಂದ ಜಾರಿಯಾಗಿದೆ ಕ್ರಮಬದ್ದತೆವಾಗಿ ಏಪ್ರಿಲ್ 1 ರಿಂದ ಜಾರಿಗೆ ಬಂದಿರುತ್ತದೆ. ಇದರಲ್ಲಿ ಹಲವಾರು ಬದಲಾವಣೆಗಳಾಗಿವೆ. ಅದನ್ನು ತೆರಿಗೆದಾರರಿಗೆ ಮತ್ತು ಸಾರ್ವಜನಿಕರಿಗೆ ಅದರ ನಿಯಮಗಳನ್ನು ತಿಳಿಸಿಕೊಡುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಆದಾಯ ತೆರಿಗೆ ಕಾಯ್ದೆ 1961ರ ಇದ್ದ 819 ಸೆಕ್ಷನ್ ಗಳನ್ನು ಪ್ರಸ್ತುತ 536 ಸೆಕ್ಷನ್ ಗಳಾಗಿ ಮಾರ್ಪಡಿಸಲಾಗಿದೆ. ಆದಾಯ ತೆರಿಗೆ ಕಾಯ್ದೆಯಲ್ಲಿ ಇದ್ದ 47 ಚಾಪ್ಟರ್ ಗಳನ್ನು 23 ಚಾಪ್ಟರ್ ಗಳಿಗೆ ಇಳಿಸಲಾಗಿದೆ ಎಂದರು. ಅದರ ಬಗ್ಗೆ ಲೆಕ್ಕ ಪರಿಶೋಧಕರು ಇನ್ನೂ ಹೆಚ್ಚಿಗೆ ತಿಳಿದುಕೊಳ್ಳಬೇಕಾದ ಅಗತ್ಯವಿದೆ. ಇನ್ನೂ ನಿಮಗೆ ಹೆಚ್ಚಿನ ಮಾಹಿತಿ ಬೇಕಾದರೆ ವಿಶೇಷ ಸಭೆಗಳನ್ನು ಕರೆದು ತಿಳಿಸಿಕೊಡಲಾಗುವುದು ಎಂದರು.

ಚಾಮರಾಜನಗರ ಜಿಲ್ಲಾ ಲೆಕ್ಕ ಪರಿಶೋಧಕರ ಸಂಘದ ಅಧ್ಯಕ್ಷ ಸಿ.ಎಂ. ವೆಂಕಟೇಶ್ ಮಾತನಾಡಿ ಕಾಲಕಾಲಕ್ಕೆ ಆದಾಯ ತೆರಿಗೆ ಕಾಯ್ದೆಯಲ್ಲಿ ಮತ್ತು ಕಾನೂನಿನಲ್ಲಿ ಆಗುವ ಬದಲಾವಣೆ ತಿಳಿದುಕೊಳ್ಳುವ ಅಗತ್ಯವಿದೆ. ಕಾನೂನಿನ ಅರಿವು ಲೆಕ್ಕಪರಿಶೋಧಕರಿಗೆ ಅಗತ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ ತೆರಿಗೆ ಸಲಹೆಗಾರರು ಗಮನ ಹರಿಸಬೇಕಾಗಿ ಕೋರಿ ಕೊಂಡರು. ತಪ್ಪಿದಿದ್ದರೆ ದಂಡ ಮತ್ತು ಬಡ್ಡಿಯನ್ನು ಕಟ್ಟಲು ಭಾದ್ಯರಾಗುತ್ತೀರಿ ಎಂದು ಎಚ್ಚರಿಸಿದರು. ಇದೇ ಸಂದರ್ಭದಲ್ಲಿ ಉತ್ತಮ ತೆರಿಗೆ ಪಾವತಿದಾರಾದ ಆರ್.ಯೋಗರಾಜ್ ಹಾಗೂ ಹಿರಿಯ ಲೆಕ್ಕ ಪರಿಶೋಧಕರಾದ ರಂಗಸ್ವಾಮಿ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಚಾರ್ಟರ್ಡ್ ಅಕೌಂಟೆಂಟ್ ಸಂತೋ?್, ಲೆಕ್ಕ ಪರಿಶೋಧಕರು ರಾದ ಕಮಲ್ ರಾಜ್, ಕಾಮರಾಜ್, ನಾಗಣ್ಣ, ಚಂದ್ರು, ರಂಗನಾಥ್, ಶ್ರೀ ಧರ್, ಕಾರ್ಯದರ್ಶಿ ಮಂಜು,ಇದ್ದರು. ಕಾರ್ಯಕ್ರಮದ ನಿರೂಪನೆಯನ್ನು ಮಣ ಕಂಠ ಸ್ವಾಮಿ ನೆರವೇರಿಸಿದರು.

## ಕುವೆಂಪುನಗರ ಉಪವಿಭಾಗದ ಜನಸಂಪರ್ಕ ಸಭೆ ಮುಂದೂಡಿಕೆ*

ಮೈಸೂರು:– ವಿ.ವಿ ಮೊಹಲ್ಲಾ ವಿಭಾಗದ ಅಧೀಕ್ಷಕ ಇಂಜಿನಿಯರ್/ಕಾರ್ಯನಿರ್ವಾಹಕ ಇಂಜಿನಿಯರ್ ರವರ ಅಧ್ಯಕ್ಷತೆಯಲ್ಲಿ ಕುವೆಂಪು ನಗರ ಉಪ ವಿಭಾಗ ಕಛೇರಿಯಲ್ಲಿ ಜೂನ್ 24 ರಂದು ಗ್ರಾಹಕರ ಕುಂದು ಕೊರತೆಗಳ ಬಗ್ಗೆ ಮೊದಲನೇ ತ್ರೈಮಾಸಿಕ ಜನ ಸಂಪರ್ಕ ಸಭೆಯನ್ನು ಏರ್ಪಡಿಸಲಾಗಿತ್ತು. ಆದರೆ ಆಡಳಿತಾತ್ಮಕ ಕಾರಣಗಳಿಂದ ಸದರಿ ಜನ ಸಂಪರ್ಕ ಸಭೆಯನ್ನು ಜೂನ್ 25 ರಂದು ಬೆಳಿಗ್ಗೆ 11:30 ಗಂಟೆಗೆ ಮರು ನಿಗಧಿಪಡಿಸಲಾಗಿದೆ.

ಆದ್ದರಿಂದ ಈ ವ್ಯಾಪ್ತಿಯ ವಿದ್ಯುತ್ ಗ್ರಾಹಕರು ಭಾಗವಹಿಸಲು ಮತ್ತು ವಿದ್ಯುತ್ ಸಮಸ್ಯೆ ಬಗ್ಗೆ ಏನಾದರೂ ದೂರುಗಳಿದ್ದಲ್ಲಿ, ಅರ್ಜಿ ನೀಡುವುದರ ಮುಖಾಂತರ ಬಗೆಹರಿಸಿಕೊಳ್ಳಬಹುದೆಂದು ಚಾ.ವಿ.ಸ.ನಿ.ನಿ., ವಿ.ವಿ.ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುಮ್ಮಡಿ ನಿರ್ವಾಣ ಸ್ವಾಮೀಜಿ ಲಿಂಗೈಕ್ಯ

## ತ್ರಿವರ್ಣ ಧ್ವಜ ಹಸ್ತಾಂತರದ ವೇಳೆ ಭಾವುಕರಾಗಿ ಬಿಕ್ಕಿದ ಮುಖ್ಯಮಂತ್ರಿ

**ರಾಮನಗರ/ಕನಕಪುರ:** ಜಿಲ್ಲೆಯ ಕನಕಪುರದಲ್ಲಿರುವ ದೇಗುಲ ಮಠದ ಶ್ರೀ ಮುಮ್ಮಡಿ ನಿರ್ವಾಣ ಸ್ವಾಮೀಜಿ ಅವರು ಸೋಮವಾರ ನಿಧನರಾಗಿದ್ದು, ಸಿಎಂ ಡಿ.ಕೆ.ಶಿವಕುಮಾರ್ ಸೇರಿದಂತೆ ಗಣ್ಯರು, ಸಾರ್ವಜನಿಕರು ಲಿಂಗೈಕ್ಯರಾದ ಸ್ವಾಮೀಜಿ ಅವರ ಅಂತಿಮ ದರ್ಶನ ಪಡೆದುಕೊಂಡರು.

**ಸಿಎಂ ಡಿಕೆಶಿ ಅಶ್ರುತರ್ಪಣ**

ಶ್ರೀ ಮುಮ್ಮಡಿ ನಿರ್ವಾಣ ಸ್ವಾಮೀಜಿಗಳ ಪಾರ್ಥಿವ ಶರೀರಕ್ಕೆ ಸಿಎಂ ಡಿ ಕೆ ಶಿವಕುಮಾರ್ ಅವರು ದೇಗುಲ ಮಠದ ಆವರಣದಲ್ಲಿ ಮಂಗಳವಾರ ಅಂತಿಮ ನಮನ ಸಲ್ಲಿಸಿದರು. ಮುಮ್ಮಡಿ ನಿರ್ವಾಣ ಸ್ವಾಮೀಜಿಗಳ ಪಾರ್ಥಿವ ಶರೀರಕ್ಕೆ ಪುಷ್ಪ ನಮನ ಸಲ್ಲಿಸಿದ ಮುಖ್ಯಮಂತ್ರಿಯವರು ನಂತರ ಪಾದುಕೆಗಳಿಗೆ ನಮಸ್ಕರಿಸಿದರು. ತದನಂತರ ಪೊಲೀಸರು ಗಾಳಿಯಲ್ಲಿ ಮೂರು ಸುತ್ತು ಗುಂಡು ಹಾರಿಸಿ, ಗೌರವ ಸಲ್ಲಿಸಿದರು. ಬಳಿಕ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ರಾಷ್ಟ್ರಧ್ವಜವನ್ನು ದೇಗುಲಮಠದ ಕಿರಿಯ ಸ್ವಾಮೀಜಿಗಳಿಗೆ ಹಸ್ತಾಂತರಿಸಿದರು.

**"ಭಕ್ತನಿಗೂ, ಭಗವಂತನಿಗೂ ಇರುವ ಸಂಬಂಧ ಇದು"**

ತದ ನಂತರ ಮಾತನಾಡಿದ ಅವರು , ತಮಗೂ ಸ್ವಾಮೀಜಿ ಅವರ ನಡುವಿನ ಸಂಬಂಧ ಭಕ್ತನಿಗೂ ಹಾಗೂ ಭಗವಂತಿನಿಗೂ ಇರುವ ಸಂಬಂಧ ಎಂದರು. ಶ್ರೀಗಳು ಅತ್ಯಂತ ಕಡಿಮೆ ಮಾತನಾಡುತ್ತಿದ್ದರು. ಆದರೆ ಮೌನವಾಗಿಯೇ ಅಚ್ಚುಕಟ್ಟಾಗಿ ಕೆಲಸಗಳನ್ನು ನೆರವೇರಿಸುತ್ತಿದ್ದರು. ಚುನಾವಣೆ ಮುಂಚೆ ಅವರ ಆಶೀರ್ವಾದ ಪಡೆಯಲು ಹೋದ ಸಂದರ್ಭದಲ್ಲಿ ಅನಾರೋಗ್ಯದಿಂದ ಹಾಸಿ ಗೆಯಲ್ಲಿ ಮಲಗಿದ್ದರೂ ಸಹ ಹಣದ ಕಟ್ಟನ್ನು ನೀಡಿ ಇದು ಚುನಾವಣಾ ಖರ್ಚಿಗೆ ಸಣ್ಣ ಕೊಡುಗೆ ಎಂದು ಹೇಳಿ ಆಶೀರ್ವಾದ ಮಾಡಿದ್ದರು. ಅವರಿಗೆ ಭವಿಷ್ಯದಲ್ಲಿ ಏನಾಗುತ್ತದೆ ಎಂದು ತಿಳಿದಿತ್ತು ಎಂದರು.



**ಉಮ್ಮಳಿಸಿ ಬಂದ ದುಃಖ, ಬಿಕ್ಕಿದ ಸಿಎಂ**

ಕಿರಿಯ ಸ್ವಾಮೀಜಿಗಳಿಗೆ ಧ್ವಜ ಹಸ್ತಾಂತರ ಮಾಡುವ ವೇಳೆ ಭಾವುಕರಾದ ಸಿಎಂ ಶಿವಕುಮಾರ್ ಅವರು ಬಿಕ್ಕಿ, ಬಿಕ್ಕಿ ಅಳುತ್ತಲೇ ರಾಷ್ಟ್ರಧ್ವಜವನ್ನು ನೀಡಿದರು. ನಂತರ ಲಿಂಗೈಕ್ಯ ಮಹಾಸ್ವಾಮಿಗಳ ಪಾದುಕೆಗಳಿಗೆ ನಮಸ್ಕರಿಸಿ ಕಿರಿಯ ಶ್ರೀಗಳಿಗೆ ನಮಿಸಿದರು. ನಂತರ ಶ್ರೀಗಳ ಗದ್ದುಗೆ ಸ್ಥಳಕ್ಕೆ ತೆರಳಿ ವಿಭೂತಿ ಗಟ್ಟಿಗಳನ್ನು ಅರ್ಪಿಸಿ ಪೂಜೆ ಸಲ್ಲಿಸಿದರು.

### ಮಠಗಳಿಗೂ ನನಗೂ ಅವಿನಾಭಾವ ಸಂಬಂಧ

ನನಗೂ ಮಠ–ಮಾನ್ಯಗಳಿಗೂ ಅವಿನಾಭಾವ ಸಂಬಂಧವಿದೆ. ಮನೆ ಹುಷಾರು, ಮಠ ಹುಷಾರು ಎಂದು ಹಿರಿಯರು ಹೇಳಿದ್ದಾರೆ. ಅದರಂತೆ ನಮ್ಮ ಮಠಗಳನ್ನೂ ನಾವು ಉಳಿಸಿ ಬೆಳೆಸಬೇಕು. ಸಾವಿಗೆ ಗಳಿಗೆಯಿಲ್ಲ, ಸಾವು ಯಾರನ್ನೂ ಕೇಳಿ ಬರುವುದಿಲ್ಲ, ಅತಿಥಿಗಳಿಗೆ ನಾಳೆ ಬನ್ನಿ ಎನ್ನಬಹುದು. ಆದರೆ ಸಾವಿಗೆ ನಾಳೆ ಬಾ ಎನ್ನಲು ಸಾಧ್ಯವಿಲ್ಲ. ಆದರೆ ನಿರ್ವಾಣ ಸ್ವಾಮಿಗಳ ಆದರ್ಶ ಸದಾ ಶಾಶ್ವತ ಎಂದರು.

### ದೇಗುಲ ಮಠದೊಂದಿಗೆ ನೂರಾರು ವರ್ಷಗಳ ನಂಟು

ಶ್ರೀ ದೇಗುಲ ಮಠ ಹಾಗೂ ನಮ್ಮ ಕುಟುಂಬಕ್ಕೆ ನೂರಾರು ವರ್ಷಗಳ ಬಅವಿನಾಭಾವ ಒಡನಾಡವಿದೆ. ನಮ್ಮ ಅಜ್ಜನ ಕಾಲದಿಂದಲೂ ಮನೆಯಲ್ಲಿ ಯಾವುದೇ ಕಾರ್ಯ ನಡೆದರೂ ಇವರಿಗಿಂತ ಮೊದಲು ಇದ್ದಂತಹ ಹಿರಿಯ ಸ್ವಾಮೀಜಿಯವರು ಬಂದು ಆಶೀರ್ವಾದ ಮಾಡುತ್ತಿದ್ದರು. ಯಾವುದೇ ಶುಭಕಾರ್ಯಗಳಿದ್ದರೂ ನಮಗೆ ಅವರ ಅಭಯ ಹಸ್ತ ಇದ್ದೇ ಇರುತ್ತಿತ್ತು. ಪ್ರತಿಯೊಂದು ಸಂದರ್ಭದಲ್ಲಿಯೂ ಅವರು ನಮಗೆ ಮಾರ್ಗದರ್ಶನ ಮಾಡುತ್ತಿದ್ದರು. ಅವರ ಚಿಂತನೆಗಳು ನಮಗೆ ದಾರಿದೀಪವಾಗಿದ್ದವು ಎಂದರು.

### ಆದ್ಯಾತ್ಮಕಿ ದೀಪ ದೇಗುಲ

"ನಮ್ಮ ಜಿಲ್ಲೆಗೆ ಆಧ್ಯಾತ್ಮಿಕವಾದ ದೀಪ. ಸರ್ಕಾರ ಬಡವರಿಗಾಗಿ ಅನ್ನ, ಅಕ್ಷರ, ಆಶ್ರಯವನ್ನು ನೀಡುವ ಮುನ್ನವೇ, ದೇಗುಲ ಮಠ ಮತ್ತು ಸಿದ್ದಗಂಗಾ ಮಠಗಳು ನೀಡಿವೆ. ಮೈಸೂರು ಮಹಾರಾಜರ ಕಾಲದಿಂದಲೂ ಈ ಮಠ ಅಚಲವಾಗಿ ನಿಂತಿದೆ. ಕರಿಯಪ್ಪನವರ ವಿದ್ಯಾಸಂಸ್ಥೆಗೂ ಮೊದಲು ಅಕ್ಷರ ದಾನ ಮಾಡಿದವರು. ದೊಡ್ಡ ಅಧಿಕಾರಿಗಳು, ಜನ ಪ್ರತಿನಿಧಿಗಳು, ಉದ್ಯಮಿಗಳು ಈ ಮಠದಲ್ಲಿ ಕಲಿತಿದ್ದಾರೆ. ಈ ಮಠದಲ್ಲಿ ಕಲಿತವರು ಪ್ರಪಂಚದಾದ್ಯಂತ ಹರಡಿಕೊಂಡಿದ್ದಾರೆ ಎಂದರು. ಸುತ್ತೂರು ಶ್ರೀಗಳು ಈ ಮಠಕ್ಕೆ ಯಾವಾಗಲೂ ಆಧಾರಸ್ತಂಭವಾಗಿದ್ದರು. ಸಿದ್ದಗಂಗಾ ಮಠಕ್ಕೆ ಎಷ್ಟು ಹಿರಿತನ ಇದೆಯೋ ಅಷ್ಟೇ ಹಿರಿತನ ಹಳೇ ಮೈಸೂರು ಭಾಗದ ಈ ಮಠಕ್ಕೂ ಇದೆ. ಮರಣ ದೇಹಕ್ಕೆ ಹೊರತು ಜಂಗಮಕ್ಕಲ್ಲ. ಬಸವಣ್ಣವರ ತತ್ವ, ಚಿಂತನೆ ಆದರ್ಶಗಳನ್ನು ಮುನ್ನಡೆಸುತ್ತಿದ್ದರು. ಅಕ್ಷರ, ಅನ್ನ ದಾಸೋಹ ನಡೆಸುತ್ತಿದ್ದರು. ಕಿರಿಯ ಶ್ರೀಗಳ ಮಾರ್ಗದರ್ಶನದಂತೆ ಈ ಮಠದ ಸೇವೆಯನ್ನು ನಾವು ಮುಂದುವರೆಸುತ್ತೇವೆ. ಕನಕಪುರದ ಕಣ ಕಣದಲ್ಲೂ ದೇಗುಲ ಮಠವಿದೆ ಎಂದರು. ನಿರ್ವಾಣ ಮಹಾಸ್ವಾಮಿಯವರಿಗೆ ಸರ್ಕಾರಿ ಗೌರವ ಸಲ್ಲಿಸುವ ಗೌರವ ಸಿಕ್ಕಿದ್ದು ನನ್ನ ಭಾಗ್ಯ. ಇದು ಭಾಗ್ಯ, ಇದು ಭಾಗ್ಯ ಇದು ಭಾಗ್ಯವಯ್ಯಾ ಪದುಮನಾಭನ ಪಾದ ಭಜನೆ ಪರಮ ಸುಖವಯ್ಯಾ. ನಾವೆಲ್ಲರೂ ಹಾಗೂ ಕಿರಿಯ ಶ್ರೀಗಳು ಸೇರಿ ಮಠದ ತತ್ವ, ಪರಂಪರೆಯನ್ನು ಉಳಿಸಿಕೊಂಡು ಹೋಗುತ್ತೇವೆ. ಇದು ನಮ್ಮ ಮಠ ಎಂದು ಹೇಳಿದರು.

## ಕ್ಷಯರೋಗ ಮುಕ್ತ ಅಭಿಯಾನ ಶಿಬಿರ



ಮಡಿಕೇರಿ:–ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕ್ಷಯರೋಗ ವಿಭಾಗದಿಂದ ಪಾಲಿಬೆಟ್ಟ ಟಾಟಾ ಕಂಪನಿ ಲಿಮಿಟೆಡ್ ಪಾಲಿಬೆಟ್ಟ ಕ್ಯಾಂಪೇನ್ ನಲ್ಲಿ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ 100 ದಿನಗಳ ಕ್ಷಯ ಮುಕ್ತ ಅಭಿಯಾನ ಸಂಬಂಧ ಮಂಗಳವಾರ ಶಿಬಿರ ನಡೆಯಿತು.

ಕ್ಷಯ ಗುರುತಿಸುವ ಸಂಬಂಧ ಕಫ ಸಂಗ್ರಹಣೆ ಹಾಗೂ ಹ್ಯಾಂಡ್ ಹೆಲ್ಡ್ ಎಕ್ಸ್–ರೇ ಅಂದರೆ ಕ್ಷಯ ರೋಗಾಣುಗಳು ಸೋಂಕಿತ ವ್ಯಕ್ತಿಯು ಕೆಮ್ಮಿದಾಗ ಹೊರಬಂದ ರೋಗಾಣುಗಳು ಗಾಳಿಯ ಮುಖಾಂತರ ಆರೋಗ್ಯವಂತ ವ್ಯಕ್ತಿಯ ಮೂಗು ಮತ್ತು ಬಾಯಿಯ ಮುಖಾಂತರ ಶ್ವಾಸಕೋಶ ಕ್ಷಯ ಪ್ರವೇಶ ಮಾಡಿ ಸೋಂಕುಂಟು ಮಾಡುತ್ತದೆ.

ಸೋಂಕನ್ನು ಪ್ರಾರಂಭಿಕ ಹಂತದಲ್ಲಿ ಗುರುತಿಸುವ ಒಂದು ಸುಲಭ ವಿಧಾನ ಹಾಗೂ ಸೋಂಕುಳ್ಳ ವ್ಯಕ್ತಿ ಆರೋಗ್ಯ ಸಂಸ್ಥೆಯಲ್ಲಿ ತಲುಪದೇ ವ್ಯಕ್ತಿಯ ವಾಸಸ್ಥಳ ಅಥವಾ ಅನುಕೂಲವಾಗುವ ನಿಗದಿತ ಜಾಗದಲ್ಲಿ ಎಕ್ಸರೇ ಮಾಡಿ ಕ್ಷಯ ಗುರುತಿಸುವ ವಿಧಾನವಾಗಿದೆ.

ಶಿಬಿರದಲ್ಲಿ ಹ್ಯಾಂಡ್ ಹೆಲ್ಡ್ ಎಕ್ಸ್–ರೇ ಸಿಕ್ಕಲ್ ಸೆಲ್ ಪರೀಕ್ಷೆ ಮಾಡಲಾಯಿತು. ವೇದಿಕೆ ಕಾರ್ಯಕ್ರಮದಲ್ಲಿ ಆಡಳಿತ ವೈದ್ಯಾಧಿಕಾರಿ ಡಾ.ಶಿವಪ್ಪ ಹಾಗೂ ಟಾಟಾ ಕಂಪನಿಯ ಆರ್‌ಐಎಚ್‌ಪಿ ವೈದ್ಯಾಧಿಕಾರಿಗಳಾದ ಡಾ.ಚಂದ್ರು ಅವರು ಎಲ್ಲಾ ರಾಷ್ಟ್ರೀಯ ಕಾರ್ಯಕ್ರಮಗಳ ಸಂಬಂಧ ಹಾಗೂ ಕ್ಷಯ ರೋಗ ಕಾರ್ಯಕ್ರಮ 100 ದಿನಗಳ ಅಭಿಯಾನ ಸಂಬಂಧ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಟಾಟಾ ಕಂಪನಿ ಲಿಮಿಟೆಡ್ ವರ್ಷಿಣಿ ಹಾಗೂ ಎನ್‌ಟಿಇಪಿ ಸಿಬ್ಬಂದಿಗಳಾದ ನವೀನ್ ಶ್ರೀಧರ್ ಲೋಕೇಶ್ ಹಾಗೂ ಜ್ಯೋತಿ, ಆರೋಗ್ಯ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಹಾಗೂ ಆಶಾ ಹಾಜರಿದ್ದರು.

## ಹಳ್ಳಕ್ಕೆ ಉರುಳಿದ ಕಾರು

ಗುಂಡ್ಲುಪೇಟೆ: ಅತೀ ವೇಗದಿಂದ ಬಂದ ಕಾರೊಂದು ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಯ ಹಳ್ಳಕ್ಕೆ ಉರುಳಿರುವ ಘಟನೆ ಗುಂಡ್ಲುಪೇಟೆ–ಚಾಮರಾಜನಗರ ಮುಖ್ಯ ರಸ್ತೆಯಲ್ಲಿರುವ ಆದರ್ಶ ಶಾಲೆ ಬಳಿ ಮಂಗಳವಾರ ಬೆಳಿಗ್ಗೆ ನಡೆದಿದೆ. ಸಧ್ಯ ಐವರು ಮಳವಳ್ಳಿ ಮೂಲದ ವ್ಯಕ್ತಿಗಳು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಮಳವಳ್ಳಿ ಮೂಲದ ಹಲಗೂರು ಗ್ರಾಮದ ಸಿದ್ದರಾಜು, ಮಹೇಂದ್ರ, ಅಭಿಷೇಕ್, ಪ್ರಿಯಾಂಕ, ಅನಿತಾ ಗಾಯಾಳುಗಳು. ಇವರು ಚಾಮರಾಜನಗರ ಕಡೆಯಿಂದ ಅತೀವೇಗದಿಂದ ಬಂದ ಸ್ವೀಫ್ಟ್ ಕಾರು ಕೆಎ 05, ಎನ್ ಇ 0368 ಆದರ್ಶ ಶಾಲೆ ಬಳಿ ಇರುವ ತಿರುವಿನಲ್ಲಿ ನಿಯಂತ್ರಣ ಕಳೆದುಕೊಂಡು ಹಳ್ಳಕ್ಕೆ ಬಿದ್ದಿದೆ. ಐವರು ಅದೃಷ್ಟವಶಾತ್ ಪಾರಾಗಿದ್ದಾರೆ. ಇವರು ಚಾಮರಾಜನಗರ ಕಡೆಯಿಂದ ಹಿಮವದ್ ಗೋಪಾಲಸ್ವಾಮಿ ಬೆಟ್ಟಕ್ಕೆ ತೆರಳುವಾಗ ಘಟನೆ ನಡೆದಿದೆ. ಕೂಡಲೇ ಗುಂಡ್ಲುಪೇಟೆ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಗಾಯಾಳುಗಳನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ಕಳುಹಿಸಿ ಚಿಕಿತ್ಸೆ ಕೊಡಿಸಿದ್ದಾರೆ. ಘಟನೆಯಲ್ಲಿ ಕಾರು ಸಂಪೂರ್ಣ ಜಖಂ ಆಗಿದೆ.

**ಅತಿವೇಗ ಚಾಲನೆಗೆ ಕಡಿವಾಣ**

ಗುಂಡ್ಲುಪೇಟೆ–ಚಾಮರಾಜನಗರದ ಮುಖ್ಯ ರಸ್ತೆಯಾಗಿರುವುದರಿಂದ ಸಾವಿರಾರು ವಾಹನಗಳು ಸಂಚಾರ ಮಾಡುತ್ತವೆ. ಈ ಭಾಗದಲ್ಲಿ ಆದರ್ಶ ಶಾಲೆ ಇರುವುದರಿಂದ ಬೆಳಿಗ್ಗೆ, ಸಂಜೆ ವೇಳೆ ಶಾಲೆ ಮಕ್ಕಳ ಓಡಾಟ ಇರುವುದರಿಂದ ವಾಹನ ಸವಾರರು ಅತಿ ವೇಗದಲ್ಲಿ ಚಾಲನೆ ಮಾಡುವುದನ್ನು ನಿಯಂತ್ರಿಸದಿದ್ದರೇ ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳಿಗೆ ತೊಂದರೆಯಾಗಬಹುದು ಎಂದು ಪೋಷಕರು ಆತಂಕ ವ್ಯಕ್ತಪಡಿಸಿದರು.



### ಸ್ವಚ್ಛತೆ ಕಾಣದ ದೊಡ್ಡತುಪ್ಪೂರು ಗ್ರಾಮ

## ಸ್ವಚ್ಛಗೊಳಿಸಲು ಅನುದಾನ ಬಂದಿಲ್ಲ: ಪಿಡಿಒ ಶೋಭಾ

ಗುಂಡ್ಲುಪೇಟೆ: ತಾಲೂಕಿನ ದೊಡ್ಡತುಪ್ಪೂರು ಗ್ರಾಮದಲ್ಲಿ ಅಶುಚಿತ್ವ ತಾಂಡವವಾಡುತ್ತಿದ್ದು, ಸ್ವಚ್ಛತೆ ಮರೀಚಿಕೆಯಾಗಿದೆ. ಎಲ್ಲೆಂದರಲ್ಲಿ ಕಸದ ರಾಶಿ ಬಿದ್ದಿದ್ದರೂ ಗ್ರಾಮ ಪಂಚಾಯತಿ ಅಧಿಕಾರಿಗಳು ನಿರ್ಲಕ್ಷ್ಯವಹಿಸಿದ್ದಾರೆ ಎಂದು ಗ್ರಾಮದ ರೈತ ಮುಖಂಡ ಎಂ.ಶಶಿಕುಮಾರ್ ಆರೋಪಿಸಿದ್ದಾರೆ.

ಶಿಂಡನಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ದೊಡ್ಡತುಪ್ಪೂರು ಗ್ರಾಮದಲ್ಲಿ ಚರಂಡಿ ಸ್ವಚ್ಛಗೊಳಿಸಿ ಎಷ್ಟೋ ತಿಂಗಳು ಕಳೆದಿದೆ. ಶಾಲೆ ಮುಂಭಾಗದ ಚರಂಡಿಯಲ್ಲಿ ಗಿಡಗಂಟಿಗಳು ಬೆಳೆದು ಕೊಳಚೆ ನೀರು ಸರಾಗವಾಗಿ ಹರಿ ಯದೇ ನಿಂತಲ್ಲೇ ನಿಂತು ಗಬ್ಬೆದ್ದು ನಾರುತ್ತಿದೆ. ಇದರಿಂದ ಶಾಲಾ ಮಕ್ಕಳಿಗೆ ಸಾಂಕ್ರಾಮಿಕ ರೋಗ ಹರಡುವ ಭೀತಿ ಎದುರಾಗಿದೆ ಎಂದು ಪೋಷಕರು ದೂರಿದರು. ಹೀಗಿದ್ದರೂ ಕೂಡ ಪಂಚಾಯಿತಿ ಪಿಡಿಓ ಮೌನಕ್ಕೆ ಶರಣಾಗಿ ಕಂಡೂ ಕಾಣದಂತೆ ವರ್ತಿಸುತ್ತಿದ್ದಾರೆ.



ಗ್ರಾಮದ ಬಹುತೇಕ ಚರಂಡಿಗಳಲ್ಲಿ ರಾಶಿ ಗಟ್ಟಲೆ ಹೂಳು ತುಂಬಿದ್ದು, ಸುತ್ತಮುತ್ತಲು ಗಿಡಗಂಟಿಗಳು ಬೆಳೆದು ಚರಂಡಿ ನೀರು ನಿಂತಲ್ಲೇ ನಿಂತು

**ಚರಂಡಿ ಸ್ವಚ್ಛಗೊಳಿಸುವಂತೆ ದೂರು**

ಗ್ರಾಮದ ಬಹುತೇಕ ಚರಂಡಿಗಳಲ್ಲಿ ರಾಶಿಗಟ್ಟಲೇ ಹೂಳು ತುಂಬಿದ್ದು, ಸುತ್ತಮುತ್ತಲು ಗಿಡಗಂಟಿಗಳು ಬೆಳೆದು ನೀರು ನಿಂತಲ್ಲೇ ನಿಂತು ದುರ್ವಾಸನೆ ಬೀರುತ್ತಿದ್ದು, ಸುತ್ತಮುತ್ತಲ ನಿವಾಸಿಗಳಿಗೆ ತುಂಬಾ ತೊಂದರೆಯಾಗುತ್ತಿದೆ. ಹಾಗೂ ಸಾಂಕ್ರಾಮಿಕ ರೋಗದ ಭೀತಿಯಲ್ಲಿದ್ದಾರೆ. ಇದರ ಬಗ್ಗೆ ಗ್ರಾಪಂ ಅಧಿಕಾರಿಗಳು ಚರಂಡಿ ಸ್ವಚ್ಛತೆಗೆ ಕ್ರಮವಹಿಸಬೇಕೆಂದು ಗ್ರಾಮಸ್ಥರು ಮನವಿ ಮಾಡಿದ್ದಾರೆ. ಈ ಸಂಬಂಧ ಶಿಂಡನಪುರ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಶೋಭ ಮಾತನಾಡಿ, ಸರ್ಕಾರದಿಂದ ಯಾವುದೇ ಅನುದಾನ ಗ್ರಾಮ ಪಂಚಾಯತಿಗೆ ಬಂದಿಲ್ಲ. ಡಿಸೆಂಬರ್ ಜನವರಿಯಲ್ಲಿ ಹೂಳು ತೆಗಿಸಿ ನಾನೇ ಪೇಮೆಂಟ್ ಮಾಡಿದ್ದೀನಿ. ಇವಾಗ ಹೂಳು ತೆಗಿಸುವಷ್ಟು ಹಣ ಪಂಚಾಯತಿಯಲ್ಲಿ ಇಲ್ಲ ಎಂಬುದಾಗಿ ಪ್ರತಿಕ್ರಿಯೆ ನೀಡಿದರು.

## ಚಲಿಸುತ್ತಿದ್ದ ಬಸ್ಸಿನಿಂದ ಬಿದ್ದು ಮಹಿಳೆಗೆ ಗಾಯ

ಚಾಮರಾಜನಗರ: ಚಲಿಸುತ್ತಿದ್ದ ಬಸ್ ನಿಂದ ಮಹಿಳೆಯೊಬ್ಬರು ಬಿದ್ದು ಗಾಯಗೊಂಡಿರುವ ಘಟನೆ ಕೋಳಿಪಾಳ್ಯ ಗ್ರಾಮದಲ್ಲಿ ನಡೆದಿದೆ.

ಸುಶೀಲಬಾಯಿ ಗಾಯಗೊಂಡು ತಮಿಳು ನಾಡು ರಾಜ್ಯದ ಸತ್ಯಮಂಗಲದ ತ್ಯಾಗೂ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಚಾಮರಾಜನಗರದ ಜೆ.ಎಸ್.ಎಸ್. ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಚಾಮರಾಜನಗರದಿಂದ ತಾಳವಾಡಿ ಮಾರ್ಗವಾಗಿ ಸತ್ಯಮಂಗಲಕ್ಕೆ ಹೋಗುವ

ಟಿ.ಎನ್.36.ವಿ –5555 ಎನ್.ಎಂ.ಎಸ್ ಬಸ್ಸಿನ ಚಾಲಕ ಕೋಳಿಪಾಳ್ಯ ಗ್ರಾಮದಿಂದ ಮುಂದೆ ಇರುವ ಬೆಜ್ಜಲಪಾಳ್ಯ ಕ್ರಾಸಿನಲ್ಲಿ ಬಸ್‌ನ್ನು ಅತಿವೇಗದಿಂದ ಹಾಗೂ ಅಜಾಗರೂಕತೆಯಿಂದ ಚಲಾಯಿಸಿದ ಪರಿಣಾಮ ನನ್ನ ತಾಯಿ ಏಕಾಏಕಿ ಬಸ್ಸಿನ ಒಳಗಿನಿಂದ ಹೊರಕ್ಕೆ ಬಿದ್ದು ಬಲಗೈ ಮುರಿದು ಹೋಗಿರುತ್ತದೆ ಅಲ್ಲದೆ ಸೊಂಟಕ್ಕೆ ಹಾಗೂ ಕೈಕಾಲಿಗೆ ತರಚಿದ ಗಾಯಗಾಳಾಗಿರುತ್ತದೆ ಹೀಗೆ ತೀವ್ರವಾಗಿ ಗಾಯಗೊಂಡ ನನ್ನ ತಾಯಿಯನ್ನು ಬಸ್ಸಿನವರು ಯಾರಿಗೂ ತಿಳಿಸದೇ ಸತ್ಯಮಂಗಲದ



ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ ಈ ಸಮಯದಲ್ಲಿ ನನ್ನ ತಾಯಿ ಬಲಗೈ ಮುರಿತದಿಂದ ತೀವ್ರವಾಗಿ ನರಳಿದ್ದಾರೆ ಎಂದು ಗಾಯಗೊಂಡ ಸುಶೀಲಬಾಯಿ ಮಗ ಎಂ. ರವೀಂದ್ರನಾಯ್ಕ ದೂರು ರಾಮಸಮುದ್ರ ಪೂರ್ವ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಮುಂಬಾಗಿಲು ಇಲ್ಲದೆ ಅಜಾಗರೂಕತೆಯಿಂದ ಹಾಗೂ ಅತೀವೇಗವಾಗಿ ಬಸ್ ಚಲಾಯಿಸಿರುವ ಚಾಲಕ ಹಾಗೂ ಬಸ್ಸನ್ನು ಸಮರ್ಪಕವಾಗಿ ನಿರ್ವಹಣೆ ಮಾಡದ ಕಂಡಕ್ಟರ್ ಹಾಗೂ ಮಾಲೀಕನ ವಿರುದ್ಧ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಬೇಕು, ಮತ್ತು ಸೂಕ್ತ ಪರಿಹಾರ ಕೊಡಿಸಿ ಕೊಡಬೇಕೆಂದು ಒತ್ತಾಯಿಸಿದ್ದಾರೆ.

oooo

## ಮಡಿಕೇರಿ: 12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ

ಮಡಿಕೇರಿ ಜೂ.23(ಕರ್ನಾಟಕ ವಾರ್ತೆ):– ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಸರ್ಕಾರಿ ಅಭಿಯೋಜನಾ ಇಲಾಖೆ ಮತ್ತು ಜಿಲ್ಲಾ ಆಯುಷ್ ಇಲಾಖೆ ಸಂಯುಕ್ತಾಶ್ರಯದಲ್ಲಿ ನಗರದ ನ್ಯಾಯಾಲಯದ ಸಂಕೀರ್ಣದಲ್ಲಿ "ಆರೋಗ್ಯ ವಯೋವೃದ್ಧಿಗಾಗಿ ಯೋಗ" ಎಂಬ ಘೋಷವಾಕ್ಯದೊಂದಿಗೆ 12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸಲಾಯಿತು.

ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ಸಿ.ಕೆ.ಬಸವರಾಜು ಅವರು ಮಾತನಾಡಿ, ಯೋಗ ಮತ್ತು ಧ್ಯಾನ ಮನುಷ್ಯನ ಜೀವನಕ್ಕೆ ಮುಖ್ಯವಾಗಿದೆ. ದಿನನಿತ್ಯ ಒತ್ತಡದ ಬದುಕಿನಲ್ಲಿರುವ ನಮಗೆ ಯೋಗ ಅವಶ್ಯಕವಾಗಿದೆ. ಇದು ಇಂದಿಗೆ ಸೀಮಿತವಾಗದೆ ಪ್ರತಿದಿನ ಯೋಗಭ್ಯಾಸ ಮುಖ್ಯ ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶುಭ ಅವರು ಮಾತನಾಡಿ, ಮಾನಸಿಕ ಮತ್ತು ದೈಹಿಕ ಆರೋಗ್ಯವೇ ನಿಜವಾದ ಆರೋಗ್ಯ. ಒತ್ತಡ, ಕೋಪದ ನಿಗ್ರಹಕ್ಕೆ ಯೋಗ ಅವಶ್ಯಕ. ಅನಾರೋಗ್ಯ ಮುಕ್ತ ಜೀವನ ಆಗಬೇಕೆಂದರು. ಜೀವನದ ಪ್ರಮುಖ 10 ಸೂತ್ರಗಳ ಬಗ್ಗೆ ಮಾಹಿತಿ ನೀಡಿದರು.

ಮಡಿಕೇರಿ ವಕೀಲರ ಸಂಘದ ಅಧ್ಯಕ್ಷರಾದ ಸಿ.ಟಿ.ಜೋಸೆಫ್ ಅವರು ಮಾತನಾಡಿ ಯೋಗ ಎಂದರೆ ವಿಶ್ವಕ್ಕೆ ಭಾರತ ನೀಡಿದ ಕೊಡುಗೆ. ಪ್ರಾಚೀನ ಕಾಲದಿಂದ ಯೋಗವು ಇತ್ತು. ಪ್ರತಿದಿನದ ಅಭ್ಯಾಸ ದೇಹಾರೋಗ್ಯಕ್ಕೆ ಮುಖ್ಯ ಎಂದರು. ಪ್ರತಿದಿನ ಇದಕ್ಕಾಗಿ ನಾವು ಸಮಯ ಮೀಸಲಿಡಬೇಕು ಎಂದರು.

ವೇದಿಕೆಯಲ್ಲಿ 3ನೇ ಅಪರ ಜಿಲ್ಲಾ ಮತ್ತು ಸೆಷನ್ ನ್ಯಾಯಾಧೀಶರಾದ ಜಿ.ಸುರೇಂದ್ರ, ಜೆ.ಎಂ.ಎಫ್.ಸಿ ಮತ್ತು ಅಪರ ಸಿವಿಲ್ ನ್ಯಾಯಾಧೀಶರಾದ ಬಿ. ಯಶಸ್ವಿನಿ ಅಮೀನ್, ಮಡಿಕೇರಿ ಸರ್ಕಾರಿ ಸಹಾಯಕ ಅಭಿಯೋಜಕರಾದ ರಘು, ಪ್ರಭಾರ ಮುಖ್ಯ ಆಡಳಿತಾಧಿಕಾರಿ ಎಸ್.ಟಿ.ಶಮ್ಮಿ ಇದ್ದರು. ಆಯುಷ್ ಇಲಾಖೆಯ ತರಬೇತುದಾರರಾದ ಕೌಶಿಕ್ ಮತ್ತು ದೇವೇಂದ್ರ ಕಾರ್ಯಕ್ರಮ ನಡೆಸಿಕೊಟ್ಟರು. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಆಡಳಿತ ಸಹಾಯಕರಾದ ಜಯಪ್ಪ ಸ್ವಾಗತಿಸಿ, ನಿರೂಪಿಸಿ, ವಂದಿಸಿದರು.








## ಕೆ–ಸೆಟ್ ಮತ್ತು ಯುಜಿಸಿ–ನೆಟ್ ಪರೀಕ್ಷಾ ತೆರಬೇತಿ ಶಿಬಿರ

ಮೈಸೂರು:– ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ'ವು ಕೆ–ಸೆಟ್ ಮತ್ತು ಯುಜಿಸಿ–ನೆಟ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಏರ್ಪಡಿಸಿದ್ದ 45 ದಿನದ ತರಬೇತಿ ಶಿಬಿರದ ಸಮಾರೋಪ ಸಮಾರಂಭವನ್ನು ಜೂನ್ 25 ರಂದು ಬೆಳಗ್ಗೆ 11 ಗಂಟೆಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಆವರಣದಲ್ಲಿರುವ ಕಾವೇರಿ ಸಭಾಂಗಣದಲ್ಲಿ ಆಯೋಜಿಸಲಾಗುತ್ತದೆ.

ಮೈಸೂರು ವಿಶ್ವ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್ ಅವರು ತರಬೇತಿ ಶಿಬಿರಾರ್ಥಿಗಳಿಗೆ ಶುಭಹಾರೈಸಲಿದ್ದಾರೆ. ಮೈಸೂರು ನಗರದ ಪೊಲೀಸ್ ಉಪ ಆಯುಕ್ತೆ ಡಾ. ಹರ್ಷ ಪ್ರಿಯಂವದ ಅವರು ಮುಖ್ಯ ಭಾಷಣ ಮಾಡಲಿದ್ದಾರೆ. ಅಪರ ಜಿಲ್ಲಾಧಿಕಾರಿಗಳಾದ ಆರ್. ಐಶ್ವರ್ಯ ಅವರು ಮುಕ್ತಭಂಡಾರ ಅಧ್ಯಯನ ಪುಸ್ತಕ ಬಿಡುಗಡೆ ಮಾಡಲಿದ್ದು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶರಣಪ್ಪ ವಿ. ಹಲಸೆ ಅವರು ಸಮಾರೋಪದ ಅಧ್ಯಕ್ಷತೆ ವಹಿಸಲಿದ್ದಾರೆ. ಸಮಾರೋಪದಲ್ಲಿ ಕುಲಸಚಿವರಾದ ಪ್ರೊ. ನವೀನ್ ಕುಮಾರ್ ಎಸ್.ಕೆ., ಪರೀಕ್ಷಾಂಗ ಕುಲಸಚಿವರಾದ ಡಾ. ಸಿ.ಎಸ್. ಆನಂದಕುಮಾರ್, ಶೈಕ್ಷಣಿಕ ಡೀನ್ ಪ್ರೊ. ಎಂ. ರಾಮನಾಥಂ ನಾಯ್ಡು, ಅಧ್ಯಯನ ಕೇಂದ್ರದ ಡೀನ್ ಡಾ. ಎನ್. ಆನಂದಗೌಡ 228 ಅಭ್ಯರ್ಥಿಗಳು ಭಾಗವಹಿಸಿದ್ದಾರೆ

# ನಾಲ್ವಡಿ ಕೃಷ್ಣರಾಜರ ಕಾರ್ಯ ಅಜರಾಮರ: ಶ್ರೀವತ್ಸ




ಮೈಸೂರು: ಮೈಸೂರು ಸಂಸ್ಥಾನದ ಮಹಾರಾಜ ನಾಲ್ವಡಿ ಕೃಷ್ಣರಾಜ ಒಡೆಯರ್ ಮಾಡಿದ ಶಾಶ್ವತ ಕೆಲಸಗಳಿಂದ ಕನ್ನಡ ನಾಡಿನ ಅಭಿವೃದ್ಧಿ ನೂರ್ಮಡಿಯಾಗಿದೆ ಎಂದು ಶಾಸಕ ಟಿ.ಎಸ್.ಶ್ರೀವತ್ಸ ಹೇಳಿದರು.

ನಗರದ ಜೆಎಲ್‌ಬಿ ರಸ್ತೆಯಲ್ಲಿರುವ ನಾದಬ್ರಹ್ಮ ಸಭಾಂಗಣದಲ್ಲಿ ಸೋಮವಾರ ಪಾತಿ ಫೌಂಡೇಶನ್ 126ನೇ ಕಾರ್ಯಕ್ರಮದ ರಾಜಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ರವರ 142ನೇ ಜಯಂತೋತ್ಸವ ಪ್ರಯುಕ್ತ ಆಯೋಜಿಸಿದ ರಸಮಂಜರಿ ಕಾರ್ಯಕ್ರಮ ಹಾಗೂ

ವಿವಿಧ ಕ್ಷೇತ್ರದ ಸಾಧಕರ ಸನ್ಮಾನಿಸಿ ಮಾತನಾಡಿದರು. ಕೃಷ್ಣರಾಜ ಒಡೆಯರ್ ಅವರು ಮಹಾರಾಜರಾಗಿದ್ದರೂ ಸಹ ಅಧಿಕಾರದ ವ್ಯಾಪ್ತಿಯನ್ನು ವಿಕೇಂದ್ರೀಕರಿಸಿ ಪ್ರಜೆಗಳು ಸಹ ಅಧಿಕಾರದಲ್ಲಿ ಒಳಗೊಳ್ಳುವಂತೆ ಮಾಡಿದರು. ನಾಡಿಗೆ ಸಾಹಿತ್ಯ ಪರಿಷತ್ತಿನ ಕೊಡುಗೆ ನೀಡಿದರು ಎಂದರು. ಡಾ.ಚಂದ್ರಶೇಖರ್(ಯೋಗ),ಯೋಗ ಪ್ರಕಾಶ್(ಯೋಗ ಕ್ಷೇತ್ರ), ಸೀಮಾ(ಯೋಗ ಕ್ಷೇತ್ರ), ಡಾ.ಪಿ.ಎಂ.ಗಣೇಶ್ ಕುಮಾರ್(ಕ್ರೀಡಾ ಕ್ಷೇತ್ರ), ಎಸ್.ವಿ.ವೆಂಕಟೇಶಯ್ಯ( ಯೋಗ ಕ್ಷೇತ್ರ), ಡಾ.ಎಸ್.ಕಾವ್ಯ(ವೈದ್ಯಕೀಯ ಕ್ಷೇತ್ರ), ಲಯನ್ ಕೆ. ಎನ್.ಸುರೇಶ್(ಧಾರ್ಮಿಕ ಕ್ಷೇತ್ರ), ಸುಮ ರಾಜ್ ಕುಮಾರ್(ನಿರೂಪಣೆ ಕ್ಷೇತ್ರ) ಗೆ ಸನ್ಮಾನಿಸಿ ಗೌರವಿಸಲಾಯಿತು. ವಿಷ್ಣು ಗ್ರೂಪ್ಸ್ ಚಂದನ ಶ್ರೀನಿವಾಸರವರಿಂದ ರಸಮಂಜರಿ ಕಾರ್ಯಕ್ರಮ ನೆರವೇರಿತು. ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಮಡ್ಡಿಕೆರೆ ಗೋಪಾಲ್, ಆರ್.ಎಸ್. ಎಸ್.ನ ಮಾ.ವೆಂಕಟರಾಮ್, ಪಾತಿ ಫೌಂಡೇಶನ್ ಅಧ್ಯಕ್ಷ ಎಂ.ಡಿ.ಪಾರ್ಥಸಾರಥಿ, ಉದ್ಯಮಿ ಕುಮಾರ್ ಆರಾಧ್ಯ, ಸಹಕಾರಿ ರತ್ನ ಸಿ.ವಿ.ಪಾರ್ಥಸಾರಥಿ, ಸುರೇಶ್ ಗೋಲ್ಡ್, ಟಿಎಸ್ ಅರುಣ್, ಗಾಯಕ ಕೃಷ್ಣಮೂರ್ತಿ, ಚಂದನ ಶ್ರೀನಿವಾಸ್, ಬಸವರಾಜ್, ಮಹದೇವ ಇನ್ನಿತರರು ಹಾಜರಿದ್ದರು.

# ಮಹಿಳಾ ವಕೀಲರು, ನೋಟರಿ ಕಟ್ಟಡಕ್ಕೆ ಶಂಕು ಸ್ಥಾಪನೆ



ಮೈಸೂರು: ಮೈಸೂರು ವಕೀಲರ ಸಂಘದಿಂದ ಮಹಿಳಾ ವಕೀಲರು ಹಾಗೂ ನೋಟರಿಗಳಿಗೆ ಕಟ್ಟಡ ನಿರ್ಮಾಣಕ್ಕೆ ಶಂಕುಸ್ಥಾಪನಾ ಸಮಾರಂಭಕ್ಕೆ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಚಾಲನೆ ನೀಡಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರದ ಆಶ್ರಯದಲ್ಲಿ ಸಂಸದರ 2024-25ನೇ ಸಾಲಿನ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ನಿರ್ಮಾಣಗೊಳ್ಳುತ್ತಿರುವ ಕಟ್ಟಡಕ್ಕೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ದೇಶದ ಬಹುದೊಡ್ಡ ಪ್ರಜಾಪ್ರಭುತ್ವದಲ್ಲಿ ಶಕ್ತಿಯುತವಾಗಿರುವುದು ನ್ಯಾಯಾಂಗವಾಗಿದೆ. ನಮ್ಮ ಶಾಸಕಾಂಗ, ಮಾಧ್ಯಮದ ಅಂಗದ ಮಾದರಿಯಲ್ಲೇ ಕಾನೂನು ಅಂಗ ಸಮಾಜದ ಒಳಿತಿಗಾಗಿ ಕೆಲಸ ಮಾಡುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಕರ್ನಾಟಕ ಉಚ್ಚನ್ಯಾಯಾಲಯದ ನ್ಯಾಯಮೂರ್ತಿ ಹಾಗೂ ಜಿಲ್ಲಾ ಆಡಳಿತಾತ್ಮಕ ನ್ಯಾಯಮೂರ್ತಿ ಎಸ್.ಜಿ.ಪಂಡಿತ್ ಸಮಾರಂಭ ಉದ್ಘಾಟಿಸಿದರು. ಮೈಸೂರು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಉಷಾರಾಣಿ ಮುಖ್ಯ ಅತಿಥಿಗಳಾಗಿದ್ದರು. ಮೈಸೂರು ಜಿಲ್ಲಾ ವಕೀಲರ ಸಂಘದ ಎಸ್.ಲೋಕೇಶ್ ಅಧ್ಯಕ್ಷತೆವಹಿಸಿದ್ದರು. ಕೆ.ಎಸ್.ಬಿ.ಸಿ. ಸದಸ್ಯ ಬಿ.ಆರ್.ಚಂದ್ರಮೌಳಿ, ಮೈಸೂರು ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿ ಎ.ಜಿ.ಸುಧೀರ್, ಉಪಾಧ್ಯಕ್ಷ ಎಂ.ವಿ.ಚಂದ್ರಶೇಖರ್, ಖಜಾಂಚಿ ಹೆಚ್.ಬಿ.ಭರತ್, ಜಂಟಿ ಕಾರ್ಯದರ್ಶಿ ಕೆ.ಆರ್.ಚರಣ್ ರಾಜ್, ಮಹಿಳಾ ಜಂಟಿ ಕಾರ್ಯದರ್ಶಿ ಬಿ.ವಿ.ವಿನೋದ, ಹಿರಿಯ ಕಮಿಟಿಯ ಜಿ.ಎಸ್.ಶಿವಸ್ವಾಮಿ, ಆರ್.ಕನ್ಯಾಕುಮಾರಿ, ಕೆ.ಎಸ್. ಅಂದಾನಿ, ಕೃಷ್ಣ ಎಸ್.ಕಟಾವ್‌ಕರ್, ಪ್ರದೀಪ್ ಬಿಡ್ಡನ್, ಕಿರಿಯ ಕಮಿಟಿಯ ಕೆ.ದೇವರಾಜ, ಎಂ.ಉಮೇಶ್, ಎಂ.ಕಿಶೋರ್ ಕೀರ್ತಿ, ಜೆ.ಲೋಕೇಶ್, ಎಂ.ಬಿ.ದೀಪು ಇನ್ನಿತರರು ಉಪಸ್ಥಿತರಿದ್ದರು.

## ವಿದ್ಯುತ್ ವ್ಯತ್ಯಯ

ಮೈಸೂರು:- 66/11 ಕೆ.ವಿ ಮೇಗಳಾಪುರ ವಿದ್ಯುತ್ ವಿತರಣಾ ಕೇಂದ್ರ ದಿಂದ ಹೊರಹೊಮ್ಮುವ 11 ಕೆ.ವಿ. ಇಂಡಸ್ಟ್ರೀಯಲ್ ಮತ್ತು ಎಸ್.ಆರ್ ಹುಂಡಿ ಫೀಡರ್‌ಗಳ ವ್ಯಾಪ್ತಿಯಲ್ಲಿ ಬ್ರೇಕರ್ ನಿರ್ವಹಣಾ ಕಾಮಗಾರಿ ಕೆಲಸದ ನಿಮಿತ್ತ ಜೂನ್ 24 ರಂದು ಬೆಳಿಗ್ಗೆ 10:00 ರಿಂದ ಮಧ್ಯಾಹ್ನ 3:00 ಘಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ವಿದ್ಯುತ್ ವ್ಯತ್ಯಯವಾಗಲಿರುವ ಮುಖ್ಯ ಪ್ರದೇಶಗಳು: ಮೇಗಳಾಪುರ, ಹೊಸಹಳ್ಳಿ, ಕುಪ್ಪೇಗಾಲ, ಸಿದ್ದರಾಮನಹುಂಡಿ, ಯಡಕೊಳ, ಅಂಚೆಹುಂಡಿ, ದೇವೇಗೌಡನ ಹುಂಡಿ, ಕಡವೆಕಟ್ಟೆಹುಂಡಿ, ಶಿವಶಂಕರ್ ಪೋಲ್ ಫ್ಯಾಕ್ಟರಿ, ರಾಜಶ್ರೀ ಇಂಡಸ್ಟ್ರೀಸ್, ನಿಶಾರ ಹೋಟೆಲ್, ಜಾಗ್ವಾರ್ ಸಿಮೆಂಟ್, ಟಿ. ನರಸೀಪುರ ಮುಖ್ಯ ರಸ್ತೆ ಹಾಗೂ ಸುತ್ತ-ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಚಾ.ವಿ.ಸ.ನಿ.ನಿ. ನ.ರಾ.ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಾಗೃತಿ ಬೈಕ್ ಯ್ಯಾಲಿ



ಚಾಮರಾಜನಗರ, ಮಾದಕ ವಸ್ತುಗಳ ಸೇವನೆ ಹಾಗೂ ವ್ಯಸನದ ದುಷ್ಪರಿಣಾಮಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಚಾಮರಾಜನಗರ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಸೋಮವಾರ ನಗರದಲ್ಲಿ ಜಾಗೃತಿ ಬೈಕ್ ಯ್ಯಾಲಿ ಆಯೋಜಿಸಲಾಯಿತು.

ನಗರದ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗದಿಂದ ಆರಂಭವಾದ ಯ್ಯಾಲಿಗೆ ಜಿಲ್ಲಾ ಪೊಲೀಸ್ ಇಲಾಖೆಯ ಅಧಿಕಾರಿಗಳಾದ ಎ. ಎಸ್.ಪಿ. ಶಶಿಧರ್ ಹಾಗೂ ಡಿವೈಎಸ್ಪಿ ಸ್ನೇಹರಾಜ್ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ಬಳಿಕ ಬೈಕ್ ಯ್ಯಾಲಿಯು ನಗರದ ಪ್ರಮುಖ ರಸ್ತೆ ಹಾಗೂ ವೃತ್ತಗಳಲ್ಲಿ ಸಂಚರಿಸಿ ಸಾರ್ವಜನಿಕರಿಗೆ ಮಾದಕ ವ್ಯಸನದ ವಿರುದ್ಧ ಜಾಗೃತಿ ಮೂಡಿಸಿತು.

ಈ ಸಂದರ್ಭದಲ್ಲಿ ಮಾತನಾಡಿದ ಅಧಿಕಾರಿಗಳು, ಮಾದಕ ವಸ್ತುಗಳ ಸೇವನೆಗೆ ಯುವ ಜನತೆ ಸೇರಿದಂತೆ ವಿವಿಧ ವರ್ಗದ ಜನರು ಬಲಿಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಮಾದಕ ವ್ಯಸನಗಳಿಂದ ವ್ಯಕ್ತಿ, ಕುಟುಂಬ ಹಾಗೂ ಸಮಾಜದ ಮೇಲೆ ದುಷ್ಪರಿಣಾಮ ಉಂಟಾಗುವುದರಿಂದ ಇಂತಹ ಚಟಗಳಿಂದ ದೂರವಿರುವಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಅಗತ್ಯವಾಗಿದೆ ಎಂದು ತಿಳಿಸಿದರು.

ಡಿವೈಎಸ್ಪಿ ಸ್ನೇಹರಾಜ್ ಮಾತನಾಡಿ, ಯುವಕರು ಮಾದಕ ವ್ಯಸನಗಳಿಗೆ ಒಳಗಾಗದಂತೆ ಜಾಗೃತಿ ಮೂಡಿಸುವುದು ಪೊಲೀಸ್ ಇಲಾಖೆಯ ಪ್ರಮುಖ ಕರ್ತವ್ಯಗಳಲ್ಲಿ ಒಂದಾಗಿದೆ. ಈ ನಿಟ್ಟಿನಲ್ಲಿ ಬೈಕ್ ಯ್ಯಾಲಿ ಸೇರಿದಂತೆ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು. ಯ್ಯಾಲಿಯ ವೇಳೆ ಪೊಲೀಸ್ ಸಿಬ್ಬಂದಿಗಳು ಮಾದಕ ವ್ಯಸನ ವಿರೋಧಿ ಸಂದೇಶಗಳನ್ನು ಒಳಗೊಂಡ ಪ್ಲೇಕಾರ್ಡ್‌ಗಳನ್ನು ಪ್ರದರ್ಶಿಸಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಿದರು.

ಕಾರ್ಯಕ್ರಮದಲ್ಲಿ ಸಂಚಾರಿ ಪೊಲೀಸ್ ಠಾಣೆಯ ಹನುಮಂತ್ ಉಪ್ಪಾರ್, ಪಟ್ಟಣ ಪೊಲೀಸ್ ಠಾಣೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸೇರಿದಂತೆ ಜಿಲ್ಲಾ ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಭಾಗವಹಿಸಿದ್ದರು.

# ಕಾರು, ಕೈಗಾಡಿ ಮೇಲೆ ಕಾಡಾನೆ ದಾಳಿ



**ಚಾಮರಾಜನಗರ,** ಪ್ರಸಿದ್ಧ ಪ್ರವಾಸಿ ತಾಣ ಮತ್ತು ಯಾತ್ರಾಸ್ಥಳವಾದ ಯಳಂದೂರು ತಾಲೂಕಿನ ಬಿಳಿಗಿರಿರಂಗನ ಬೆಟ್ಟದಲ್ಲಿ ಕಾಡಾನೆಯೊಂದು ಕಾರು, ಕೈಗಾಡಿ ಮೇಲೆ ದಾಳಿ ಮಾಡಿ ಧ್ವಂಸ ಮಾಡಿದ ಘಟನೆ ನಡೆದಿದೆ.

ಬಿಳಿಗಿರಿರಂಗನ ಬೆಟ್ಟದ ದೇವಾಲಯದ ರಾಜಗೋಪುರ ಬಳಿ ನಿಲ್ಲಿಸಿದ್ದ ಕಾರು, ಕಬ್ಬಿನ ಹಾಲಿನ ಗಾಡಿ ಮೇಲೆ ಕಾಡಾನೆ ರೋಷಾವೇಷ ತೋರಿದ್ದು ಕಾರು ಜಖಂಗೊಂಡಿದ್ದರೆ ಕೈಗಾಡಿ, ಅಂಗಡಿಗಳು ಧ್ವಂಸವಾಗಿದೆ. ಕಾಡಾನೆ ದಾಳಿ ಸ್ಥಳೀಯರಲ್ಲಿ ಆತಂಕ ಹುಟ್ಟಿಸಿದೆ.

ಬಿಳಿಗಿರಿರಂಗನ ಬೆಟ್ಟ ನಿವಾಸಿ ರಂಗನಾಥ್ ಎಂಬವರಿಗೆ ಸೇರಿದ ಕಾರು ಇದಾಗಿದ್ದು, ದೇವಾಲಯದ ರಾಜಗೋಪುರ ಬಳಿ ಕಾರು ನಿಲ್ಲಿಸಿದ್ದಾಗ ಆಹಾರ ಅರಸಿ ಬಂದ ಕಾಡಾನೆಯೊಂದು ದಾಳಿ ಮಾಡಿದೆ. ಮಾರುತಿ ಆಲ್ಟೋ ಕಾರು ಕಾಡಾನೆಯ ಆರ್ಭಟಕ್ಕೆ ಜಖಂ ಆಗಿದ್ದು, ಮಾಲೀಕರಿಗೆ ನಷ್ಟ ಉಂಟಾಗಿದೆ. ಅರಣ್ಯ ಇಲಾಖೆ ಸೂಕ್ತ ಪರಿಹಾರವನ್ನು ಕೊಡಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ಹುಲಿ ದಾಳಿಗೆ ಎರಡು ಹಸು ಬಲಿ: ಚಾಮರಾಜನಗರ ತಾಲೂಕಿನ ಚನ್ನಪ್ಪನಪುರ ಗ್ರಾಮದ ನಿವಾಸಿ ಮಹದೇವಯ್ಯ ಎಂಬುವವರಿಗೆ ಸೇರಿದ 2 ಹಸುಗಳ ಮೇಲೆ ದಾಳಿ ನಡೆಸಿದ್ದು, ಹಸುಗಳು ಮೃತಪಟ್ಟ ಘಟನೆ ಸೋಮವಾರ ತಡರಾತ್ರಿ ನಡೆದಿದೆ.


ಹುಲಿ ದಾಳಿಯ ಮಾಹಿತಿ ತಿಳಿಯುತ್ತಿದ್ದಂತೆ ಚಾಮರಾಜನಗರ ಬಫರ್ ಅರಣ್ಯ ಇಲಾಖೆ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಹುಲಿ ಸೆರೆ ಹಿಡಿಯಲು ಮುಂದಾಗಿದ್ದಾರೆ. ಅಮಚವಾಡಿ ಮತ್ತು ಹೊನ್ನಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಾರ್ವಜನಿಕರು ಎಚ್ಚರಿಕೆಯಿಂದ ಇರುವಂತೆ ಹಾಗೂ ಹುಲಿ ಕಂಡುಬಂದಲ್ಲಿ ಕೂಡಲೇ ಚಾಮರಾಜನಗರ ಪ್ರಾದೇಶಿಕ ವಲಯದ ಸಿಬ್ಬಂದಿಗೆ ಮಾಹಿತಿ ನೀಡುವಂತೆ ಅರಣ್ಯ ಇಲಾಖೆ ಕೋರಿದೆ.

ಕಳೆದ ಎರಡು ದಿನಗಳ ಹಿಂದೆ ಸಿದ್ಧಲಿಂಗಪುರ ಗ್ರಾಮದಲ್ಲಿ ಕುರಿ ಮತ್ತು ಮೇಕೆಗಳ ಮೇಲೆ ಹುಲಿ ದಾಳಿ ನಡೆಸಿ 2 ಕುರಿ ಮತ್ತು 2 ಮೇಕೆಗಳನ್ನು ಬಲಿ ಪಡೆದಿತ್ತು. ಸಿದ್ದಲಿಂಗಪುರ ಗ್ರಾಮದ ಮಹೇಶ್ ಮತ್ತು ಶೇಷ ಎಂಬ ಸಹೋದರರಿಗೆ ಸೇರಿದ ಕುರಿ ಮತ್ತು ಮೇಕೆಗಳ ಮೇಲೆ ಹುಲಿ ದಾಳಿ ನಡೆಸಿ

# ದಸಂಸ ಹೆಸರಲ್ಲಿ ಕೆಲವರಿಂದ ಅಕ್ರಮ

## ಕೆಲವರ ಮೇಲೆ ನಿಗಾವಹಿಸಿ | ಸಮುದಾಯದ ಮುಖಂಡರಿಂದ ಮನವಿ





ಎಚ್.ಡಿ.ಕೋಟೆ: ದಲಿತ ಸಂಘರ್ಷ ಸಮಿತಿಯ ಹೆಸರಿನಲ್ಲಿ ಕೆಲವರು ದುಡ್ಡು ಮಾಡುತ್ತಿದ್ದಾರೆ. ಇಲಾಖೆಗಳಲ್ಲಿ ಮಧ್ಯ ಪ್ರವೇಶಿಸಿ ಹಣಗಳಿಸುವ ದಂಧೆ ಮಾಡಿಕೊಂಡಿದ್ದಾರೆ. ಜೊತೆಗೆ ಸಿವಿಲ್ ಪ್ರಕರಣಗಳಲ್ಲಿ ಮೂಗು ತೂರಿಸುತ್ತಿದ್ದಾರೆ. ಇಂತವರ ವಿರುದ್ಧ ಪೊಲೀಸ್ ಇಲಾಖೆ ನಿಗಾವಹಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಕಾನೂನು ಸುವ್ಯವಸ್ಥೆ ಮೇಲೆ ಪರಿಣಾಮ ಬೀರಲಿದೆ ಎಂದು ದಲಿತ ಸಮುದಾಯದ ಕೆಲವರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿಗೆ ಮನವಿ ಮಾಡಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆದ ಹೆಚ್.ಡಿ.ಕೋಟೆ, ಸರಗೂರು ಹಾಗೂ ಅಂತರಸಂತೆ ಪೊಲೀಸ್ ಠಾಣೆಗಳ ವ್ಯಾಪ್ತಿಯ ಸಾರ್ವಜನಿಕರ ಅಹವಾಲು ಸ್ವೀಕಾರ ಸಭೆಯಲ್ಲಿ ಹಲವು, ಸಲಹೆ, ಸೂಚನೆ, ದೂರುಗಳು ಕೇಳಿಬಂದವು.

ಶಾಲಾ, ಕಾಲೇಜು ಸಮಯಗಳಲ್ಲಿ ಪುಂಡರು ಅತೀ ವೇಗ, ಎಕ್ಸಲೇಟರ್ ಶಬ್ದ ಹೆಚ್ಚಿಸಿಕೊಂಡು ಬೈಕ್ ಚಲಾಯಿಸುತ್ತಾರೆ. ಗದ್ದಿಗೆ ಸರ್ಕಲ್ ಪುಂಡ, ಪೋಕರಿಗಳ ಅಡ್ಡೆಯಾಗಿ ಮಾರ್ಪಟ್ಟಿದೆ. ಶಾಲಾ, ಕಾಲೇಜಿಗೆ ಮಕ್ಕಳು ಹೋಗುವ, ಬರುವ ಸಮಯ ಬ್ಯಾರಿಕೇಡ್ ಅಳವಡಿಸಿ ಸಂಚಾರ ದಟ್ಟಣೆ, ಅತೀ ವೇಗದ ಚಾಲನೆ ನಿಯಂತ್ರಿಸಬೇಕು. ಹೌಸಿಂಗ್ ಬೋರ್ಡ್, ಸ್ಟೇಡಿಯಂ, ಕನಕ ಭವನದ ಹಿಂದಿನ ನೂತನ ಬಡಾವಣೆಗಳು ಅಪರಾಧ ಕೃತ್ಯಗಳ ತಾಣಗಳಾಗಿ ಮಾರ್ಪಡಾಗುತ್ತಿವೆ. ಆದಿಚುಂಚನಗಿರಿ ಶಾಲೆ ಬಳಿ ಇರುವ ಹಂಪ್ ನಿಂದ ದ್ವಿ-ಚಕ್ರ ವಾಹನ ಸವಾರರು ಬಿದ್ದು ಗಾಯಗೊಳ್ಳುತ್ತಿರುವ ಘಟನೆಗಳು ಮರುಕಳಿಸುತ್ತಿವೆ. ಇಲ್ಲಿ ಜೀಬ್ರಾ ಕ್ರಾಸಿಂಗ್ ಅಳವಡಿಕೆ, 0.5ಮೀ ಅಂತರದಲ್ಲಿ ಹಂಪ್ ಇರುವ ಬಗ್ಗೆ ಸೂಚನಾ ಫಲಕ ಅಳವಡಿಸಬೇಕು ಎಂದು ಜೀವಿಕ ಸಂಘಟನೆ ಜಿಲ್ಲಾ ಸಂಚಾಲಕ ಉಮೇಶ್ ಸಲಹೆ ನೀಡಿದರು.

### ಕೆಲ ಸಾರ್ವಜನಿಕರ ಅಸಮಾಧಾನ

ತಾಲೂಕಿನಿಂದ ಸರಗೂರನ್ನು ಬೇರ್ಪಡಿಸಿ ನೂತನ ತಾಲೂಕು ಎಂದು ಸರ್ಕಾರ ಘೋಷಿಸಿದೆ. ಯಾವುದೇ ಸಭೆ, ಸಮಾರಂಭ ನಡೆದರೂ ಕೋಟೆಯಲ್ಲಿಯೇ ಮಾಡುತ್ತೀರಿ. ಅಧಿಕಾರಿಗಳು ಸರಗೂರನ್ನು ಕಡೆಗಣಿಸಿದ್ದೀರಿ ಆದ್ದರಿಂದ ನಾವು ಸಭೆ ಬಹಿಷ್ಕರಿಸಿ ಹೊರ ನಡೆಯುತ್ತೇವೆ ಎಂದು ಕೆಲವರು ಸಭೆ ಆರಂಭದಲ್ಲಿ ಆಕ್ಷೇಪ ವ್ಯಕ್ತಪಡಿಸಿದರು. ಮುಂದಿನ ದಿನಗಳಲ್ಲಿ ದಿನಾಂಕ ನಿಗದಿ ಮಾಡಿ ಸರಗೂರಿನಲ್ಲೂ ಸಭೆ ಮಾಡಲಾಗುವುದು ಎಂದು ಸಹಾಯಕ ಪೊಲೀಸ್ ವರಿಷ್ಠಾಧಿಕಾರಿ ನಾಗೇಶ್ ತಿಳಿಸಿದ ನಂತರ, ಸಭೆ ಆರಂಭವಾಯಿತು.

ಸರಗೂರಿನ ಕೃಷ್ಣ, ಮಹಿಳಾ ಆಪ್ತ ಸಮಾಲೋಚಕಿ ಜಶೀಲಾ ಪೊಲೀಸ್ ಇಲಾಖೆ ಸಿಬ್ಬಂದಿಗಳ ಕಾರ್ಯವೈಖರಿಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಪತ್ರಕರ್ತ ಬಸವರಾಜು ಮಾತನಾಡಿದರು.

### ಭೂಮಿ ಕಬಳಿಸುವ ಹುನ್ನಾರ:ಆರೋಪಿಯ ಮೇಲೆ ಕ್ರಮವಿಲ್ಲ

ಹಿರೇನಂದಿ ಗ್ರಾಮದ ಶಿವಯ್ಯ ಮಾತನಾಡಿ, ಸ.ನಂ 28 ಸೇರಿದಂತೆ ಇತರೆ ಸರ್ವೆ ನಂಬರ್ ನ ಸುಮಾರು ಇಪ್ಪತ್ತು ಎಕರೆ ರೈತರು ಕೃಷಿ ಮಾಡುತ್ತಿರುವ ಜಮೀನುಗಳಲ್ಲಿ ಇಲ್ಲಿ ಭವನ ನಿರ್ಮಾಣ ಮಾಡುತ್ತೇವೆ ಎಂದು ಡಾ.ಬಿ.ಆರ್. ಅಂಬೇಡ್ಕರ್ ನಾಮಫಲಕ ಅಳವಡಿಸಿ, ಕೆಲ ವರ್ಷಗಳ ನಂತರ ಆ ಭೂಮಿಯಲ್ಲಿ ಬೆಳೆ ಬೆಳೆದು ನಕಲಿ ದಾಖಲೆ ಸೃಷ್ಟಿಸಿ, ಕಾಲ ಕಳೆಯುತ್ತಿದ್ದಂತೆಯೇ ಆ ಭೂಮಿ ಲಪಾಟಯಿಸುವ ಹುನ್ನಾರವನ್ನು ಎಚ್.ಸಿ.ನರಸಿಂಹ ಮೂರ್ತಿ ಮಾಡಿದ್ದಾರೆ ಎಂದು ಆರೋಪಿಸಲಾಯಿತು. ಸಮೀಪದ ಬನವಾಡಿ ಗ್ರಾಮದಲ್ಲೂ ಹೀಗೆ ಮಾಡಲಾಗಿದೆ. ಈ ಸಂಬಂಧ ಅನೇಕ ಗಲಾಟೆಗಳು ನಡೆದಿವೆ.

ಈ ಬಗ್ಗೆ ಪೊಲೀಸ್ ಠಾಣೆಯಲ್ಲಿ ದೂರು ನೀಡಿದರೆ, ಆರೋಪಿಯ ಮೇಲೆ ಎರಡು ಬಾರಿ ಅಸನ್ನೆಯ ಅಪರಾಧಗಳು ಎಂದು (ಎನ್.ಸಿ.ಆರ್) ಮಾಡಿದ್ದಾರೆ. ನ್ಯಾಯ ಕೇಳಿದ ನಮ್ಮ ಮೇಲೆ ಪ್ರಕರಣ ದಾಖಲಿಸಿ ಅನ್ಯಾಯ ಮಾಡಿದ್ದಾರೆ ಎಂದು ಅಳಲು ತೋಡಿಕೊಂಡರೆ, ಇದೇ ವಿಷಯಕ್ಕೆ ಬನವಾಡಿ ಗ್ರಾಮದ ನಿಂಗಮ್ಮ ಸಭೆಯಲ್ಲಿ ಕಣ್ಣೀರಿಟ್ಟರು.

ಹಿರೇನಂದಿ ಗ್ರಾಮದ ಮಹದೇವಸ್ವಾಮಿ ಮಾತನಾಡಿ, ಜಮೀನು ವಿಷಯಕ್ಕೆ ಮೂರನೆ ವ್ಯಕ್ತಿ ನೀಡಿದ ದೂರಿನ ಮೇರೆಗೆ ನನ್ನ ಹಾಗೂ ನನ್ನ ತಂದೆಯನ್ನು ಠಾಣೆಗೆ ತಂದು ಥಳಿಸಿದ್ದಾರೆ ಎಂದು ಆರೋಪಿಸಿದರು. ದಲಿತ ಸಂಘರ್ಷ ಸಮಿತಿಯ ಸಣ್ಣ ಕುಮಾರ್ ಮೇಲೆ 8 ಆಗಿವೆ. ಅದ ರಲ್ಲಿ 7 ಪ್ರಕ ರಣಗಳಲ್ಲಿ ಪ್ರಥಮ ಆರೋಪಿಯಾಗಿದೆ. ಇಷ್ಟಿದ್ದರೂ ಈತನ ವಿರುದ್ಧ ಕ್ರಮ ಏಕಿಲ್ಲ ಎಂದು ಕಟ್ಟೆಮನುಗನಹಳ್ಳಿ ಗ್ರಾಮದ ಉಮೇಶ್, ಹೈರಿಗೆ ಮಂಜು ಪ್ರಶ್ನಿಸಿದರು.

ಕೆಲ ದೂರುಗಳನ್ನು ಪರಿಶೀಲಿಸುವಂತೆ ಎಸ್.ಪಿ.ಮಲ್ಲಿಕಾರ್ಜುನ ಬಾಲದಂಡಿ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು. ಸಾರ್ವಜನಿಕರು ತಮ್ಮ ಕಚೇರಿಗೂ ನೇರವಾಗಿ ಬಂದು ಅಹವಾಲು ಸಲ್ಲಿಸಬಹುದು ಎಂದು ತಿಳಿಸಿದರು.

ಆರಕ್ಷಕ ವೃತ್ತ ನಿರೀಕ್ಷಕರಾದ ಗಂಗಾಧರ್, ಪ್ರಸನ್ನ ಕುಮಾರ್, ಸಬ್ ಇನ್ಸ್ ಪೆಕ್ಟರ್ ಗಳಾದ ಕಿರಣ್, ಚಂದ್ರಹಾಸ, ಸುರೇಶ್ ನಾಯಕ, ಗೋಪಾಲ್ ಸೇರಿದಂತೆ ಸಿಬ್ಬಂದಿಗಳು, ತಹಶೀಲ್ದಾರ್ ಗಳಾದ ಮೋಹನ ಕುಮಾರಿ, ಶ್ರೀನಿವಾಸ್, ತಾ.ಪಂ ಕಾರ್ಯನಿರ್ವಹಣಾಧಿಕಾರಿ ಪ್ರೇಮ್ ಕುಮಾರ್, ಪುರಸಭೆ ಮುಖ್ಯಾಧಿಕಾರಿ ಪಿ.ಸುರೇಶ್ ಸೇರಿದಂತೆ ಹಲವು ಇಲಾಖೆಗಳ ಅಧಿಕಾರಿಗಳು, ನೌಕರರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದರು.


# ಹುಲಿ ದಾಳಿಗೆ 2 ಹಸುಗಳು ಬಲಿ



ಚಾಮರಾಜನಗರ, ತಾಲೂಕಿನ ಅಮಚವಾಡಿ, ಹೊನ್ನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಹುಲಿ ದಾಳಿ ಮಿತಿಮೀರಿದ್ದು, ಕುರಿ-ಮೇಕೆ ಹಾಗೂ ಜಾನುವಾರುಗಳನ್ನು ಬಲಿ ಪಡೆಯುತ್ತಿದೆ.

ತಾಲೂಕಿನ ಚನ್ನಪ್ಪನಪುರ ಗ್ರಾಮದ ನಿವಾಸಿ ಮಹದೇವಯ್ಯ ಎಂಬುವವರಿಗೆ ಸೇರಿದ 2 ಹಸುಗಳ ಮೇಲೆ ದಾಳಿ ನಡೆಸಿದ್ದು, ಹಸುಗಳು ಮೃತಪಟ್ಟಿದೆ. ಹುಲಿ ದಾಳಿಯ ಮಾಹಿತಿ ತಿಳಿಯುತ್ತಿದ್ದಂತೆ ಅರಣ್ಯ ಇಲಾಖೆ ಸಿಬ್ಬಂದಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಹುಲಿ ಸೆರೆ ಹಿಡಿಯಲು ಮುಂದಾಗಿದ್ದಾರೆ. ಅಮಚವಾಡಿ ಮತ್ತು ಹೊನ್ನಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಾರ್ವಜನಿಕರು ಎಚ್ಚರಿಕೆಯಿಂದ ಇರುವಂತೆ ಹಾಗೂ ಹುಲಿ ಕಂಡುಬಂದಲ್ಲಿ ಕೂಡಲೇ ಚಾಮರಾಜನಗರ ಪ್ರಾದೇಶಿಕ ವಲಯದ ಸಿಬ್ಬಂದಿಗಳಿಗೆ ಮಾಹಿತಿ ನೀಡುವಂತೆ ಅರಣ್ಯ ಇಲಾಖೆ ತಿಳಿಸಿದೆ.

# ಮುಂದುವರೆದ ವೈದ್ಯಕೀಯ ಶಿಕ್ಷಣ ಕಾರ್ಯಗಾರ




ಚಾಮರಾಜನಗರ, ವೈದ್ಯಕಿಯ ಶಿಕ್ಷಣವು ವರ್ಷ ದಿಂದ ವರ್ಷಕ್ಕೆ ಮುಂದುವರೆಯುತ್ತಿದ್ದು ಅದರ ಉಪಯೋಗವನ್ನು ವೈದ್ಯರುಗಳು ಸದುಪಯೋಗ ಪಡಿಸಿಕೊಂಡರೆ ಚಿಕಿತ್ಸೆ ನೀಡಲು ಅನುಕೂಲವಾಗುತ್ತದೆ ಎಂದು ಚಾಮರಾಜನಗರ ಆರ್ಥೋಪೆಡಿಕ್ ಅಸೋಶಿಯೇಷನ್ ಅಧ್ಯಕ್ಷ ಡಾ.ಪದ್ಮಾಕ್ಷ ತಿಳಿಸಿದರು.

ನಗರದ ಸಿಮ್ಸ್ ಆಸ್ಪತ್ರೆಯ ಸಭಾಂಗಣದಲ್ಲಿ ಮೂಳೆ ಮತ್ತು ಕೀಲು ವಿಭಾಗವು ಕರ್ನಾಟಕ ಆರ್ಥೋಪೆಡಿಕ್ ಮತ್ತು ಮೈಸೂರು ಆರ್ಥೋಪೆಡಿಕ್, ಚಾಮರಾಜನಗರ ಆರ್ಥೋಪೆಡಿಕ್ ವಿಭಾಗದ ಸಹಯೋಗದಲ್ಲಿ ಮೂಳೆ ಮತ್ತು ಕೀಲುಗಳ ಬಗ್ಗೆ ಮುಂದುವರೆದ ವೈದ್ಯಕೀಯ ಶಿಕ್ಷಣ ಕುರಿತು ಏರ್ಪಡಿಸಿದ್ದ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು. ಪಾದ ಮತ್ತು ಕೀಲಿಗೆ ಸಂಬಂಧಪಟ್ಟ ತೊಂದರೆಗಳು ಬಂದಾಗ ಯಾವರೀತಿ ಅಡ್ವಾನ್ಸ್ ಟ್ರೀಟ್ ಮೆಂಟ್ ಕೊಡಬೇಕು ಎಂಬ ಬಗ್ಗೆ ಹೆಚ್ಚಿನ ಮಾಹಿತಿ ನೀಡಿದರು.

ಸಿಮ್ಸ್ ಆಸ್ಪತ್ರೆಯ ಕೀಲು ಮತ್ತು ಮೂಳೆ ವಿಭಾಗದ ಮುಖ್ಯಸ್ಥರಾದ ಡಾ.ಮಾರುತಿ ಮಾತನಾಡಿ, ಮುಂದುವರೆದ ಶಿಕ್ಷಣದಿಂದ ಹಲವಾರು ವೈದ್ಯಕೀಯ ಸವಾಲುಗಳನ್ನು ಸಮರ್ಥವಾಗಿ ಎದುರಿಸಲು ಸಾಧ್ಯ ಎಂದರು. ವೈದ್ಯರು ಈ ಕಾರ್ಯಗಾರದಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಂಡು ರೋಗಿಗಳಿಗೆ ಎದುರಾಗುವ ಕೀಲು ಮತ್ತು ಮೂಳೆ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಚಾ.ನಗರ ಜಿಲ್ಲೆ ಸೇರಿದಂತೆ ಮೈಸೂರು, ಮಂಡ್ಯ, ಹಾಸನ ಇನ್ನಿತರ ಜಿಲ್ಲೆಗಳ ಸುಮಾರು 75 ಕ್ಕೂ ಹೆಚ್ಚು ವೈದ್ಯರು ಭಾಗವಹಿಸಿದ್ದರು. ಜೆ.ಎಸ್.ಎಸ್ ಆರ್ಥೋಪೆಡಿಕ್ ಅಸೋಸಿಯೇಷನ್ ಅಧ್ಯಕ್ಷ ಡಾ.ವಿಜಯ್, ಮಣಿಪಾಲ್ ಆಸ್ಪತ್ರೆಯ ಡಾ. ಚಿನ್ಮಯಿ, ಬೆಂಗಳೂರಿನ ಡಾ.ಕೃಷ್ಣಪ್ರಸಾದ್, ಡಾ.ಪ್ರತೀಕ್ಷಾ, ಡಾ.ಚೇತನ್, ಡಾ. ಶಿವಕುಮಾರ್, ಶಿವಮೊಗ್ಗದ ಡಾ.ದೇವ್‌ಗಳಿಗಳಿ, ಚಾಮರಾಜನಗರ ವಿಭಾಗದ ಡಾ. ರಾಘವೇಂದ್ರ, ಡಾ.ಮನೋಜ್, ಡಾ.ಶಕೀಭ್, ಡಾ. ಮಹದೇವಪ್ರಸಾದ್, ಡಾ.ಮೋಹಿತ್, ಡಾ.ರವಿನಂದನ್, ಡಾ. ಮಧು, ಡಾ.ಯುವಾನ್ ಮೊದಲಾದವರು ಭಾಗವಹಿಸಿದ್ದರು.

### ಜಿಲ್ಲಾಧಿಕಾರಿ ಶ್ರೀರೂಪ ಅವರಿಂದ ವಿತರಣೆ

# ಎಸ್ಸೆಎಲ್ಸಿಯಲ್ಲಿ ಹೆಚ್ಚು ಅಂಕ ಗಳಿಸಿದ ಮಕ್ಕಳಿಗೆ ವಿದ್ಯಾರ್ಥಿವೇತನ ವಿತರಣೆ



ಚಾಮರಾಜನಗರ, ಶ್ರೀರೂಪ ಅವರು ಇಂದು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ಜಿಲ್ಲೆಯ ವಿವಿಧ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಕ್ರೆಡಿಟ್ ಆಕ್ಸಿಸ್ ಇಂಡಿಯಾ ಫೌಂಡೇಷನ್ (ಗ್ರಾಮೀಣ ಕೂಟ) ವತಿಯಿಂದ ನೀಡುವ 10 ಸಾವಿರ ರೂ. ಗಳ ವಿದ್ಯಾರ್ಥಿವೇತನ ವಿತರಿಸಿದರು.

ನಗರದ ಜಿಲ್ಲಾಧಿಕಾರಿಗಳ ಕೊಠಡಿಯಲ್ಲಿಂದು ಚಾಮರಾಜನಗರದಲ್ಲಿ ಶಾಖಾ ಕಚೇರಿ ಹೊಂದಿರುವ ಕ್ರೆಡಿಟ್ ಆಕ್ಸಿಸ್ ಇಂಡಿಯಾ ಫೌಂಡೇಷನ್ (ಗ್ರಾಮೀಣ ಕೂಟ) ಸಂಸ್ಥೆಯಲ್ಲಿ ಸದಸ್ಯರಾಗಿರುವ ತಲಾ 8 ಪೋಷಕರ ಮಕ್ಕಳಿಗೆ ಮುಂದಿನ ಶೈಕ್ಷಣಿಕ ವಿದ್ಯಾಭ್ಯಾಸಕ್ಕೆ ಆರ್ಥಿಕ ನೆರವು ನೀಡುವ ಸಲುವಾಗಿ ನೀಡಲಾಗುವ ವಿದ್ಯಾರ್ಥಿವೇತನ ಹಾಗೂ ಪ್ರಮಾಣಪತ್ರಗಳನ್ನು ವಿತರಿಸಿ ಶುಭ ಹಾರೈಸಿದರು.

ಇದೇ ವೇಳೆ ಜಿಲ್ಲಾಧಿಕಾರಿ ಶ್ರೀರೂಪ ಅವರು ವಿದ್ಯಾರ್ಥಿಗಳೊಂದಿಗೆ ಆತ್ಮೀಯವಾಗಿ ಮಾತನಾಡಿ ಮುಂದಿನ ಹಂತದ ಶೈಕ್ಷಣಿಕ ವಿದ್ಯಾಭ್ಯಾಸದ ಬಗ್ಗೆ ಮಕ್ಕಳನ್ನು ವಿಚಾರಿಸಿದರು. ಭವಿಷ್ಯದಲ್ಲಿ ಏನು ಆಗಬೇಕೆಂಬ ಉದ್ದೇಶ ಹಾಗೂ ಗುರಿಗಳನ್ನು ಹೊಂದಿದ್ದೀರಿ ಎಂದು ಮಕ್ಕಳನ್ನು ಕೇಳಿದರು. ಇದಕ್ಕುತ್ತರಿಸಿದ ಮಕ್ಕಳು ಉನ್ನತ ವಿದ್ಯಾಭ್ಯಾಸ ಪಡೆಯಬೇಕೆಂಬ ಅಭಿಲಾಷೆ ವ್ಯಕ್ತಪಡಿಸಿದರು.

ಬಳಿಕ ಮಕ್ಕಳನ್ನು ಉದ್ದೇಶಿಸಿ ಮಾತನಾಡಿದ ಜಿಲ್ಲಾಧಿಕಾರಿ ಶ್ರೀರೂಪ ಅವರು ಕ್ರೆಡಿಟ್ ಆಕ್ಸಿಸ್ ಇಂಡಿಯಾ ಫೌಂಡೇಷನ್ (ಗ್ರಾಮೀಣ ಕೂಟ) ವತಿಯಿಂದ ಸಂಸ್ಥೆಯಲ್ಲಿ ಸದಸ್ಯರಾಗಿರುವ ಪೋಷಕರ ಮಕ್ಕಳನ್ನು ಶೈಕ್ಷಣಿಕವಾಗಿ ಉತ್ತೇಜಿಸುವ ಸಲುವಾಗಿ ಕಳೆದ ಮೂರು ವರ್ಷಗಳಿಂದ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ರೂಪದಲ್ಲಿ ಆರ್ಥಿಕ ನೆರವು ನೀಡಲಾಗುತ್ತಿದೆ ಎಂದರು.

ಮುಂದಿನ ದಿನಗಳಲ್ಲಿ ಪಿಯುಸಿ ಪರೀಕ್ಷೆಯಲ್ಲಿಯೂ ಹೆಚ್ಚಿನ ಅಂಕ ಪಡೆದ ಮಕ್ಕಳಿಗೂ ವಿದ್ಯಾರ್ಥಿವೇತನ ನೀಡಲು ನಗರದ ಗ್ರಾಮೀಣ ಕೂಟ ಸಂಸ್ಥೆ ಇಚ್ಚಿಸಿದೆ. ವಿದ್ಯಾರ್ಥಿವೇತನವನ್ನು ಶೈಕ್ಷಣಿಕ ಉದ್ದೇಶಗಳಿಗಾಗಿ ಸದ್ಬಳಕೆ ಮಾಡಿಕೊಳ್ಳಬೇಕು. ಮಕ್ಕಳು ಉನ್ನತ ವ್ಯಾಸಂಗ ಪಡೆದು ಉತ್ತಮ ಜೀವನ ಕಟ್ಟಿಕೊಳ್ಳಬೇಕು. ಆ ಮೂಲಕ ಮಕ್ಕಳು ತಂದೆತಾಯಿಗಳಿಗೆ ಹಾಗೂ ಜಿಲ್ಲೆಗೆ ಕೀರ್ತಿ ತರಬೇಕು ಎಂದು ಜಿಲ್ಲಾಧಿಕಾರಿ ಶೀರೂಪ ಅವರು ಕಿವಿಮಾತು ಹೇಳಿದರು.

ಅಪೂರ್ವ (ಶೇ. 98.56), ಸಿಂಚನಾ (ಶೇ. 94.88), ತೇಜಸ್ವಿನಿ (ಶೇ. 94.24), ಅರ್ಪಿತಾ (ಶೇ. 94), ಮಾನಸ (ಶೇ. 93.44), ಇಂದುಶ್ರೀ (ಶೇ. 91), ಆಶಾ (ಶೇ. 90.56) ಹಾಗೂ ಹೇಮಲತಾ (ಶೇ. 89.28) ಅವರು ವಿದ್ಯಾರ್ಥಿವೇತನ ಪಡೆದ ವಿದ್ಯಾರ್ಥಿಗಳಾಗಿದ್ದಾರೆ. ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ, ಶಿರಸ್ತೇದಾರರಾದ ರಂಗರಾಜು, ಕ್ರೆಡಿಟ್ ಆಕ್ಸಿಸ್ ಇಂಡಿಯಾ ಫೌಂಡೇಷನ್ (ಗ್ರಾಮೀಣ ಕೂಟ) ಸಂಸ್ಥೆಯ ವಲಯ ವ್ಯವಸ್ಥಾಪಕರಾದ ಕೃಷ್ಣ, ಲೋಕೇಶ್, ಶಾಖಾ ವ್ಯವಸ್ಥಾಪಕರಾದ ದಿಲೀಪ್‌ಕುಮಾರ್, ವಿದ್ಯಾರ್ಥಿಗಳ ಪೋಷಕರು, ಇತರರು ಇದೇ ಸಂದರ್ಭದಲ್ಲಿ ಇದ್ದರು.

ಇದಕ್ಕೂ ಮೊದಲು ಕ್ರೆಡಿಟ್ ಆಕ್ಸಿಸ್ ಇಂಡಿಯಾ ಫೌಂಡೇಷನ್ (ಗ್ರಾಮೀಣ ಕೂಟ) ಸಂಸ್ಥೆಯ ವತಿಯಿಂದ ಜಿಲ್ಲಾಡಳಿತ ಭವನ ಆವರಣದಲ್ಲಿ ಗಿಡನೆಟ್ಟು ನಿರೆರೆಯಲಾಯಿತು.

## ಸಂಕ್ಷಿಪ್ತ ಸುದ್ದಿ

### ಜೂನ್ 24 ರಂದು ನಶಾ ಮುಕ್ತ ಭಾರತ ಅಭಿಯಾನ




**ಮಂಡ್ಯ:** ಮಂಡ್ಯ ಧ್ವನಿ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಆರ್. ಜಿ. ವ್ಯಸನಿಗಳ ಸಮಗ್ರ ಪುನಶ್ಚೇತನ ಕೇಂದ್ರ ಮಂಡ್ಯ ವತಿಯಿಂದ ನಶಾ ಮುಕ್ತ ಭಾರತ ಅಭಿಯಾನ 2026 ವಿಶ್ವ ಮಾದಕ ವಸ್ತುಗಳ ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಜೂನ್ 24ರಂದು ಬೆಳಿಗ್ಗೆ 11 ಗಂಟೆಗೆ ನಗರದ ಸಿಹಿ ನೀರು ಕೊಳ,ಆರ್.ಜಿ.ವ್ಯಸನಿಗಳ ಪುನಶ್ಚೇತನಾ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಕೆ. ನಾಗಣ್ಣಗೌಡರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳಾದ ಆನಂದ .ಎಂ ರವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಜಿಲ್ಲಾ ಕುಷ್ಟರೋಗ ನಿರ್ಮೂಲನ ಅಧಿಕಾರಿಗಳಾದ ಡಾ. ಸೋಮಶೇಖರ್ ಎಂ.ಸಿ, ವಿಕಲಚೇತನರ ಮತ್ತು ಹಿರಿಯ ನಾಗರಿಕ ಕಲ್ಯಾಣ ಅಧಿಕಾರಿಗಳಾದ ಕೋಮಲ್ ಕುಮಾರ್ ರವರು ಆಗಮಿಸಲಿದ್ದಾರೆ.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಮನೋರಗತಜ್ಞರಾದ ಡಾ. ಹೆಚ್.ವಿ ಶಶಾಂಕ್ ರವರು ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಕ್ಲಿನಿಕಲ್ ಸೈಕಾಲಜಿಸ್ಟ್ ರಾದ ಡಾ. ಮಹಮ್ಮದ್ ಸುಹೇಲ್ ಮಧ್ಯಪಾನದಿಂದ ಆಗುವ ದುಷ್ಪರಿಣಾಮ ಕುರಿತು ಉಪನ್ಯಾಸವನ್ನು ನೀಡಲಿದ್ದಾರೆ.

ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಡಿ ಎಚ್ ಓ ಕಚೇರಿ ಜಿಲ್ಲಾ ಸಹ ಸಲಹೆಗಾರರಾದ ತಿಮ್ಮರಾಜು ಎಸ್ ಎನ್ ರವರು ತಂಬಾಕು ಕುರಿತು ಉಪನ್ಯಾಸ ನೀಡಲಿದ್ದಾರೆ.

ಶಂಕರ ನಗರ ಬಿ.ಎಲ್.ಎಸ್. ನರ್ಸಿಂಗ್ ಕಾಲೇಜು ಪುಣ್ಯಶ್ರೀ ರವರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ

# ಮಕ್ಕಳು ಪಲ್ಸ್ ಪೋಲಿಯೋ ಲಸಿಕೆಯಿಂದ ಹೊರಗುಳಿಯದಂತೆ ಕ್ರಮ ವಹಿಸಿ

## ವಲಸೆ ಕಾರ್ಮಿಕರ ಮಕ್ಕಳಗೆ ಪಲ್ಸ್ ಪೋಲಿಯೋ ಲಸಿಕೆ ಪಡೆದುಕೊಳ್ಳುವಂತೆ ಅಗತ್ಯ ಕ್ರಮ ವಹಿಸಿ: ಡಾ. ಕುಮಾರ

**ಮಂಡ್ಯ:** ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೊ ಲಸಿಕಾ ಕಾರ್ಯಕ್ರಮವು ಜೂನ್ 28 ರಂದು ಜುಲೈ 01 ರವರಿಗೆ ನಡೆಯಲಿದ್ದು, 0–5 ವರ್ಷದೊಳಗಿನ ಯಾವುದೇ ಮಗುವು ಲಸಿಕೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಜಿಲ್ಲಾ ಲಸಿಕಾ ಕಾರ್ಯಪಡೆ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

2014 ರಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಭಾರತವನ್ನು ಪೋಲಿಯೋ ಮುಕ್ತ ದೇಶ ಎಂದು ಘೋಷಿಸಿದೆ. ಆದರೂ ನೆರೆಯ ರಾಷ್ಟ್ರಗಳಾದ ಪಾಕಿಸ್ತಾನ ಮತ್ತು ಅಪಘಾನಿಸ್ತಾನಗಳಲ್ಲಿ ಕೆಲವು ಪೋಲಿಯೊ ಪ್ರಕರಣಗಳು ವರದಿಯಾಗುತ್ತಿದ್ದು, ಹೆಚ್ಚಿನ ನಿಗಾ ವಹಿಸುವ ಹಿನ್ನೆಲೆ, ಮುಂಜಾಗ್ರತಾ ಕ್ರಮವಾಗಿ ಭಾರತದಲ್ಲಿ ಪಲ್ಸ್ ಪೋಲಿಯೊ ಕಾರ್ಯಕ್ರಮ ಮುಂದುವರಿಸಲಾಗಿದೆ ಎಂದು ತಿಳಿಸಿದ ಅವರು, ಪೋಲಿಯೋ ನಿರ್ಮೂಲನೆಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದರು.



ಜಿಲ್ಲೆಯಾದ್ಯಂತ ಜೂನ್ 28 ರಿಂದ ಜುಲೈ 01 ರವರಿಗೆ ನಡೆಯಲಿರುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ 0–5 ವರ್ಷದೊಳಗಿನ ಮಕ್ಕಳಿಗೆ ಲಸಿಕೆ ನೀಡಲಾಗುತ್ತಿದ್ದು, ಪ್ರತಿಯೊಬ್ಬ ಪೋಷಕರು ತಪ್ಪದೇ ತಮ್ಮ 5 ವರ್ಷದೊಳಗಿನ ಮಕ್ಕಳಿಗೆ ಲಸಿಕೆಯನ್ನು ಹಾಕಿಸುವುದರೊಂದಿಗೆ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ತಿಳಿಸಿದರು.

ಜೂನ್ 28 ರಂದು ಜಿಲ್ಲೆಯಾದ್ಯಂತ ಬೂತ್‌ಗಳಲ್ಲಿ ಲಸಿಕೆ ಹಾಕಲಾಗುವುದು. ಜೂನ್ 29 ರಿಂದ ಜುಲೈ 1 ರವರೆಗೆ ಲಸಿಕೆ ಹಾಕದ ಮಕ್ಕಳನ್ನು ಪತ್ತೆಹಚ್ಚಲು ಮನೆ ಮನೆಗೆ ಭೇಟಿ ನೀಡಲಾಗುವುದು. ಮನೆ ಮನೆಗೆ ತೆರಳಿ 5 ವರ್ಷದೊಳಗಿನ ಎಲ್ಲ ಮಕ್ಕಳಿಗೂ ಲಸಿಕೆ ನೀಡಬೇಕು. ಯಾವುದೇ ಕಾರಣಕ್ಕೂ ಮಗುವೂ ಲಸಿಕೆಯಿಂದ ವಂಚಿತವಾಗಬಾರದು ಎಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಪೋಲಿಯೊ ನಿರ್ಮೂಲನೆ ಮಾಡುವಲ್ಲಿ ಅಧಿಕಾರಿಗಳು ಯಾವುದೇ ನಿರ್ಲಕ್ಷ್ಯ ತೋರಬಾರದು. ಲಸಿಕೆ ನಿರಾಕರಿಸುವ ಕುಟುಂಬಗಳ ಮನವೊಲಿಸಿ ಪ್ರತಿಯೊಂದು ಮಗುವಿಗೂ ಕಡ್ಡಾಯವಾಗಿ ಲಸಿಕೆ ಹಾಕಿಸುವಂತೆ ಮಾಡುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಜೂನ್‌ನಲ್ಲಿ ನಡೆಯಲಿರುವ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮಕ್ಕೆ ಜಿಲ್ಲೆಯಲ್ಲಿ 0–5 ವರ್ಷದೊಳಗಿನ ಒಟ್ಟು ಅಂದಾಜು 1,13, 034 ಮಕ್ಕಳಿಗೆ ಲಸಿಕೆ ಹಾಕಲು ಗುರಿ ನೀಡಲಾಗಿದ್ದು ಮಕ್ಕಳಿಗೆ ಲಸಿಕೆಗಳನ್ನು ನೀಡಲು ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ 723 ಲಸಿಕಾ ಕೇಂದ್ರಗಳನ್ನು ತೆರೆಯಲಾಗಿದೆ

ಲಸಿಕಾ ದಿನದಂದು ಲಸಿಕೆ ನೀಡಲು ಗುರುತಿಸಲಾದ ಅಂಗನವಾಡಿ ಹಾಗೂ ಶಾಲೆಗಳಲ್ಲಿ ಕೇಂದ್ರಗಳನ್ನು ತೆರೆಯಲು ಸಜ್ಜುಗೊಳಿಸಿಟ್ಟುಕೊಳ್ಳಬೇಕು.

ಜಿಲ್ಲೆಯಲ್ಲಿ ಕಸ ವಿಲೇವಾರಿ ಮಾಡುವ ವಾಹನಗಳಲ್ಲಿ ಜಿಂಗಲ್ ಅಳವಡಿಸುವ ಮೂಲಕ ಹೆಚ್ಚು ಹೆಚ್ಚು ಪೋಲಿಯೋ ಲಸಿಕಾ ಕಾರ್ಯಕ್ರಮ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕು ಹಾಗೂ ಧಾರ್ಮಿಕ ಸ್ಥಳಗಳಲ್ಲಿ ಹೆಚ್ಚು ಜಾಗೃತಿ ಕಾರ್ಯಕ್ರಮಗಳನ್ನು ಮಾಡಬೇಕು ಎಂದು ತಿಳಿಸಿದರು.

ವಲಸೆ, ಕಟ್ಟಡ ಹಾಗೂ ಮತ್ತಿತರ ಕೂಲಿ ಕಾರ್ಮಿಕರ ಮಕ್ಕಳು ಲಸಿಕಾ ಪಡೆಯುವಂತೆ ಹೆಚ್ಚು ಜಾಗೃತಿ ಮೂಡಿಸಬೇಕು. ಕರ ಪತ್ರ ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಹೆಚ್ಚು ಪ್ರಚಾರ ನೀಡಬೇಕು.


ಲಸಿಕಾ ಕಾರ್ಯಕ್ರಮ ದಿನದಂದು ವೈದ್ಯರು ಗೈರು ಹಾಜರಾಗದಂತೆ ಲಸಿಕಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಪಲ್ಸ್ ಪೋಲೀಯೋ ಕಾರ್ಯಕ್ರಮದ ಯಶಸ್ವಿಗೆ ಎಲ್ಲಾ ಇಲಾಖೆಗಳ ಅಧಿಕಾರಿಗಳು ಹಾಗೂ ಸಾರ್ವಜನಿಕರು ಸಮನ್ವಯದಿಂದ ಕಾರ್ಯನಿರ್ವಹಿಸಬೇಕೆಂದರು.

ಸಭೆಯಲ್ಲಿ ಎಸ್. ಬಿ. ಎಜುಕೇಷನ್ ಟ್ರಸ್ಟ್ ನ ಕಾರ್ಯದರ್ಶಿಗಳು ಹಾಗೂ ರೆಡ್ ಕ್ರಾಸ್ ಸಂಸ್ಥೆಯ ಅಧ್ಯಕ್ಷರಾದ ಮೀರಾಶಿವಲಿಂಗಯ್ಯ,ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಕೆ. ಮೋಹನ್, ನಿವೃತ್ತ ಡಿ. ಹೆಚ್. ಒ. ಡಾ. ಟಿ. ಎನ್. ಮರೀಗೌಡ,ಜಿಲ್ಲಾ ಆರ್. ಸಿ. ಹೆಚ್ ಅಧಿಕಾರಿ ಡಾ. ಕೆ. ಪಿ. ಅಶ್ವಥ್, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕರಾದ ಲೋಕೇಶ್, ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಲಿಂಗೈಖ್ಯರಾದ ಸ್ವಾಮೀಜಿ ಅವರಿಗೆ ಸಂಸದರಿಂದ ನಮನ

**ರಾಮನಗರ:** ಕನಕಪುರ ದೇಗುಲ ಮಠದ ಶ್ರೀ ಮುಮ್ಮಡಿ ನಿರ್ವಾಣ ಸ್ವಾಮೀಜಿ ಅವರ ಪಾರ್ಥಿವ ಶರೀರದ ಅಂತಿಮ ದರ್ಶನವನ್ನು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದ ಡಾ.ಸಿ.ಎನ್.ಮಂಜುನಾಥ್ ಪಡೆದುಕೊಂಡರು.

ದೇಗುಲ ಮಠಕ್ಕೆ ಭೇಟಿ ನೀಡಿದ್ದ ಅವರು ಭಾವಪೂರ್ಣ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಶ್ರೀಗಳ ಆಧ್ಯಾತ್ಮಿಕ ಸೇವೆ, ಸಮಾಜಮುಖಿ ಕಾರ್ಯಗಳು ಹಾಗೂ ಜನಮಾನಸದಲ್ಲಿ ಅವರು ಮೂಡಿಸಿರುವ ಅಚಲ ಪ್ರಭಾವವನ್ನು ಸ್ಮರಿಸಿದರು.



ಕನಕಪುರದ ದೇಗುಲ ಮಠದ ಪೂಜ್ಯ ಪೀಠಾಧ್ಯಕ್ಷರಾದ ನಿ.ಪ್ರ.ಸ್ವ. ಡಾ. ಶ್ರೀ ಶ್ರೀ ಶ್ರೀ ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳವರ ಲಿಂಗೈಕ್ಯವು ಆಧ್ಯಾತ್ಮಿಕ ಕ್ಷೇತ್ರಕ್ಕೆ ತುಂಬಲಾರದ ನಷ್ಟವಾಗಿದೆ. ತಮ್ಮ ಆಧ್ಯಾತ್ಮಿಕ ಚಿಂತನೆ, ಸೇವಾ ಮನೋಭಾವ, ಸರಳತೆ ಹಾಗೂ ಮಾನವೀಯ ಮೌಲ್ಯಗಳ ಮೂಲಕ ಅವರು ಅಸಂಖ್ಯಾತ ಭಕ್ತರ ಬದುಕಿನಲ್ಲಿ ಅಳಿಸಲಾಗದ ಛಾಪು ಮೂಡಿಸಿದ್ದರು. ಶ್ರೀಮಠದ ಪರಂಪರೆ, ಗೌರವ ಮತ್ತು ಧಾರ್ಮಿಕ ಮೌಲ್ಯಗಳನ್ನು ಮತ್ತಷ್ಟು ಉನ್ನತ ಮಟ್ಟಕ್ಕೆ ಕೊಂಡೊಯ್ಯುವಲ್ಲಿ ಅವರ ಕೊಡುಗೆ ಸದಾ ಸ್ಮರಣೀಯವಾಗಿರುತ್ತದೆ. ಪರಮಾತ್ಮನು ಅವರ ದಿವ್ಯ ಆತ್ಮಕ್ಕೆ ಚಿರಶಾಂತಿ ಕರುಣಿಸಲಿ ಹಾಗೂ ಅವರ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿಯನ್ನು ಭಕ್ತರು, ಶಿಷ್ಯರು ಮತ್ತು ಅಭಿಮಾನಿಗಳಿಗೆ ನೀಡಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಸಂಸದರು ತಿಳಿಸಿದ್ದಾರೆ.

## ಕ್ಷಯರೋಗ ಮುಕ್ತ ಅಭಿಯಾನ ಶಿಬಿರ

**ಮಡಿಕೇರಿ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕ್ಷಯರೋಗ ವಿಭಾಗದಿಂದ ಪಾಲಿಬೆಟ್ಟ ಟಾಟಾ ಕಂಪನಿ ಲಿಮಿಟೆಡ್ ಪಾಲಿಬೆಟ್ಟ ಕ್ಯಾಂಪೇನ್ ನಲ್ಲಿ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ 100 ದಿನಗಳ ಕ್ಷಯ ಮುಕ್ತ ಅಭಿಯಾನ ಸಂಬಂಧ ಮಂಗಳವಾರ ಶಿಬಿರ ನಡೆಯಿತು.

ಕ್ಷಯ ಗುರುತಿಸುವ ಸಂಬಂಧ ಕಫ ಸಂಗ್ರಹಣೆ ಹಾಗೂ ಹ್ಯಾಂಡ್ ಹೆಲ್ಡ್ ಎಕ್ಸ್–ರೇ ಅಂದರೆ ಕ್ಷಯ ರೋಗಾಣುಗಳು ಸೋಂಕಿತ ವ್ಯಕ್ತಿಯು ಕೆಮ್ಮಿದಾಗ ಹೊರಬಂದ ರೋಗಾಣುಗಳು ಗಾಳಿಯ ಮುಖಾಂತರ ಆರೋಗ್ಯವಂತ ವ್ಯಕ್ತಿಯ ಮೂಗು ಮತ್ತು ಬಾಯಿಯ ಮುಖಾಂತರ ಶ್ವಾಸಕೋಶ ಕ್ಷಯ ಪ್ರವೇಶ ಮಾಡಿ ಸೋಂಕುಂಟು ಮಾಡುತ್ತದೆ.

ಕಾರ್ಯಕ್ರಮದಲ್ಲಿ ಟಾಟಾ ಕಂಪನಿ ಲಿಮಿಟೆಡ್ ವರ್ಷಿಣಿ ಹಾಗೂ ಎನ್‌ಟಿಇಪಿ ಸಿಬ್ಬಂದಿಗಳಾದ ನವೀನ್ ಶ್ರೀಧರ್ ಲೋಕೇಶ್ ಹಾಗೂ ಜ್ಯೋತಿ, ಆರೋಗ್ಯ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಹಾಗೂ ಆಶಾ ಹಾಜರಿದ್ದರು.

# ಮಕ್ಕಳನ್ನೇ ಆಸ್ತಿಯನ್ನಾಗಿ ಬೆಳೆಸಿ

## ಶೈಕ್ಷಣಿಕ ಪರಿಕರಗಳ ವಿತರಣಾ ಸಮಾರಂಭದಲ್ಲಿ ಸಂಸದ ಡಾ. ಸಿ.ಎನ್. ಮಂಜುನಾಥ್ ಕರೆ

**ರಾಮನಗರ:** ರಾಮನಗರ/ಚನ್ನಪಟ್ಟಣ: ಶಿಕ್ಷಣ ಮತ್ತು ಸಂಸ್ಕೃತಿಯೇ ಬದುಕಿನ ರಕ್ಷಾಕವಚ, ಹೀಗಾಗಿ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಿ ಅವರನ್ನು ಆಸ್ತಿಯನ್ನಾಗಿ ಬೆಳೆಸಿ ಎಂದು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದ ಡಾ.ಸಿ.ಎನ್.ಮಂಜುನಾಥ್ ಕರೆ ನೀಡಿದರು.

ಜಿಲ್ಲೆಯ ಚನ್ನಪಟ್ಟಣದ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು ಮೈದಾನದಲ್ಲಿ ಶಿಕ್ಷಣ ಸಂಜೀವಿನಿ ಮರೀಗೌಡ ಚಾರಿಟಬಲ್ ಟ್ರಸ್ಟ್ (ರಿ.) ವತಿಯಿಂದ ಆಯೋಜಿಸಲಾದ ಶೈಕ್ಷಣಿಕ ಪರಿಕರಗಳ ವಿತರಣಾ ಸಮಾರಂಭದಲ್ಲಿ ಅವರು ಮಾತನಾಡಿದರು. ಶಿಕ್ಷಣವೇ ಸಮಾಜದ ಪರಿವರ್ತನೆಗೆ ಮತ್ತು ರಾಷ್ಟ್ರ ನಿರ್ಮಾಣಕ್ಕೆ ಅತ್ಯಂತ ಪರಿಣಾಮಕಾರಿ ಸಾಧನವಾಗಿದೆ ಎಂದು ತಿಳಿಸಿದರು.

ಮರೀಗೌಡ ಚಾರಿಟಬಲ್ ಟ್ರಸ್ಟ್ ಸಂಸ್ಥಾಪಕರಾದ ಹಾಗೂ ಸಮಾಜಸೇವಕರಾದ ಹೆಚ್. ಎಂ. ನಾಗೇಶ್ ರವರ ಶಿಕ್ಷಣ ಸೇವೆಯನ್ನು ಸಂಸದರು ಮುಕ್ತಕಂಠದಿಂದ ಪ್ರಶಂಸಿಸಿದರು. ಗ್ರಾಮೀಣ ಭಾಗದ ಸಾವಿರಾರು ಮಕ್ಕಳ ಶೈಕ್ಷಣಿಕ ಉನ್ನತಿಗಾಗಿ ನಾಗೇಶ್ ಅವರು ಕೈಗೊಂಡಿರುವ ಕಾರ್ಯಗಳು ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿಕಾರಕ ಬದಲಾವಣೆಗೆ ಕಾರಣವಾಗಿದ್ದು, ಸಮಾಜಕ್ಕೆ ಮಾದರಿಯಾಗಿದೆ ಎಂದರು.

ಚನ್ನಪಟ್ಟಣ ತಾಲ್ಲೂಕಿನ ಒಂದನೇ ತರಗತಿಯಿಂದ ದ್ವಿತೀಯ ಪಿ.ಯು.ಸಿ.ವರೆಗಿನ ಸುಮಾರು 18 ಸಾವಿರ ಸರ್ಕಾರಿ ಶಾಲಾ ಮಕ್ಕಳಿಗೆ ಶಾಲಾ ಬ್ಯಾಗ್,



ಪುಸ್ತಕಗಳು ಹಾಗೂ ಇತರೆ ಶೈಕ್ಷಣಿಕ ಪರಿಕರಗಳನ್ನು ಇದೇ ವೇಳೆ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಮಹಾ ಸಂಸ್ಥಾನದ ಪೀಠಾಧ್ಯಕ್ಷ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿಯವರು, ಸ್ಪಟಿಕಪುರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ ಡಾ. ನಂಜಾವಧೂತ ಮಹಾಸ್ವಾಮೀಜಿಯವರು, ಆದಿಚುಂಚನಗಿರಿ ರಾಮನಗರ ಶಾಖಾ ಮಠದ ಮುಖ್ಯಸ್ಥರಾದಶ್ರೀ ಅನ್ನದಾನೇಶ್ವರನಾಥ ಸ್ವಾಮೀಜಿಯವರು, ಗೌಡಗೆರೆ ಶ್ರೀ ಚಾಮುಂಡೇಶ್ವರಿ ದೇವಸ್ಥಾನದ ಮುಖ್ಯಸ್ಥ ಶ್ರೀ ಡಾ. ಮಲ್ಲೇಶ್ ಗುರೂಜಿಯವರು ದಿವ್ಯ ಸಾನಿಧ್ಯ ವಹಿಸಿದ್ದರು.

ಜೆಡಿಎಸ್ ಜಿಲ್ಲಾಧ್ಯಕ್ಷ ಜಯಮುತ್ತು, ಬಿಜೆಪಿ ಜಿಲ್ಲಾಧ್ಯಕ್ಷ ಆನಂದ್ ಸ್ವಾಮಿ, ಚನ್ನಪಟ್ಟಣ ತಾಲ್ಲೂಕು ಜೆಡಿಎಸ್ ಅಧ್ಯಕ್ಷ ನಾಗರಾಜು, ಬಿಜೆಪಿ ತಾಲ್ಲೂಕು ಅಧ್ಯಕ್ಷ ರವೀಶ್, ಪ್ರಮುಖರಾದ ಚೇತನ್ ಮತ್ತು ಗಣ್ಯರು ಭಾಗವಹಿಸಿದ್ದರು.

## ಸಮಾಜ ಸೇವೆಗೆ ಕೈಜೋಡಿಸಿ ಯುವಜನತೆಗೆ ಮಾದರಿಯಾಗಿ

**ನಾಗಮಂಗಲ:** ತಾವುಗಳು ತಮ್ಮ ಕೈಲಾದ ಸಮಾಜಕ್ಕೆ ತಮ್ಮಿಂದ ಕೈಲಾದ ಸಹಾಯ ಮಾಡುವ ಮುಖಾಂತರ ಬೇರೆಯವರಿಗೆ ಮಾದರಿಯಾಗಬೇಕೆಂದು ಧಾನಿಗಳಾದ ಶ್ರೀನಿವಾಸ್ ತಿಳಿಸಿದರು.

ನಾಗಮಂಗಲ ತಾಲೂಕಿನ ಕಾಂತಪುರ ಸರ್ಕಾರಿ ಪ್ರೌಢ ಶಾಲೆ ಗೆ ಅಕ್ಷರ ದಾಸೋಹ ಕಾರ್ಯಕ್ರಮಕ್ಕೆ ಎಲ್ಲಾ ಮಕ್ಕಳಿಗೆ ಊಟ ಮಾಡಲು ಅಗತ್ಯವಾದ ಕಾರ್ಪೆಟ್ ಅನ್ನು ಶ್ರೀಮತಿ ದಿವಂಗತ ರಂಗನಾಯಕಮ್ಮ ರವರ ಸಹೋದರ ನರಸಿಂಹ ಮೂರ್ತಿ ಹಾಗೂ ಅವರ ಮಗನಾದ ಶ್ರೀನಿವಾಸ್ ಶಾಲೆಯಲ್ಲಿ ಅಗತ್ಯ ವಸ್ತುಗಳನ್ನ ನೀಡುತ್ತಾ ಮಾತನಾಡಿದರು.

ಇದೇ ಸಂದರ್ಭದಲ್ಲಿ ಎಸ್ ಡಿ ಎಮ್ ಸಿ ಸದಸ್ಯರಾದ ಶ್ರೀನಿವಾಸ್ ರವರು ಎಲ್ಲಾ ಮಕ್ಕಳಿಗೂ ಕುಡಿಯುವ ನೀರಿನ ಲೋಟವನ್ನು ಕೊಡುಗೆಯಾಗಿ ನೀಡಿದರು.




ಶಾಲೆಯ ಪರವಾಗಿ ಅವರಿಗೆ ಅಭಿನಂದನೆಯನ್ನು ಸಲ್ಲಿಸಲಾಯಿತು.

ಅಕ್ಷರ ದಾಸೋಹ ಕಾರ್ಯಕ್ರಮದ ಸಹಾಯಕ ನಿರ್ದೇಶಕರಾದ ಶ್ರೀಯುತ ಮಂಜುನಾಥ್ ರವರು ಕಾರ್ಪೆಟ್ಟಿನ ಮೇಲೆ ಕುಳಿತ ವಿದ್ಯಾರ್ಥಿಗಳಿಗೆ ಹಾಲನ್ನು ವಿತರಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿದರು.


ಶಾಲೆಯ ಮುಖ್ಯ ಶಿಕ್ಷಕರಾದ ಎಂ ಎನ್ ಮಂಜುನಾಥ್, ಯೋಗ ಗುರುಗಳಾದ ನಾರಾಯಣಸ್ವಾಮಿ ಅವರು, ದಾನಿಗಳಾದ ನರಸಿಂಹಮೂರ್ತಿ ಹಾಗೂ ಶ್ರೀನಿವಾಸ್ ರವರು

ಹಾಗೂ ಶಿಕ್ಷಕರಾದಫಾ ಜಿಲ್ಲಾ ಬಾನು , ಶಿವಮ್ಮ, ಸೋಮಶೇಖರ, ನೂರ್ ಫಾತಿಮಾ, ಮುರಳಿದರ, ಕೃಪಾ, ನರಸಿಂಹಾಚಾರಿ, ವಿಶಾಕ್, ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಕುವೆಂಪುನಗರ ಉಪವಿಭಾಗದ ಜನಸಂಪರ್ಕ ಸಭೆ ಮುಂದೂಡಿಕೆ

**ಮೈಸೂರು:** ವಿ.ವಿ ಮೊಹಲ್ಲಾ ವಿಭಾಗದ ಅಧೀಕ್ಷಕ ಇಂಜಿನಿಯರ್/ ಕಾರ್ಯನಿರ್ವಾಹಕ ಇಂಜಿನಿಯರ್ ರವರ ಅಧ್ಯಕ್ಷತೆಯಲ್ಲಿ ಕುವೆಂಪು ನಗರ ಉಪ ವಿಭಾಗ ಕಛೇರಿಯಲ್ಲಿ ಜೂನ್ 24 ರಂದು ಗ್ರಾಹಕರ ಕುಂದು ಕೊರತೆಗಳ ಬಗ್ಗೆ ಮೊದಲನೇ ತ್ರೈಮಾಸಿಕ ಜನ ಸಂಪರ್ಕ ಸಭೆಯನ್ನು ಏರ್ಪಡಿಸಲಾಗಿತ್ತು. ಆದರೆ ಆಡಳಿತಾತ್ಮಕ ಕಾರಣಗಳಿಂದ ಸದರಿ ಜನ ಸಂಪರ್ಕ ಸಭೆಯನ್ನು ಜೂನ್ 25 ರಂದು ಬೆಳಿಗ್ಗೆ 11:30 ಗಂಟೆಗೆ ಮರು ನಿಗಧಿಪಡಿಸಲಾಗಿದೆ. ಆದ್ದರಿಂದ ಈ ವ್ಯಾಪ್ತಿಯ ವಿದ್ಯುತ್ ಗ್ರಾಹಕರು ಭಾಗವಹಿಸಲು ಮತ್ತು ವಿದ್ಯುತ್ ಸಮಸ್ಯೆ ಬಗ್ಗೆ ಏನಾದರೂ ದೂರುಗಳಿದ್ದಲ್ಲಿ, ಅರ್ಜಿ ನೀಡುವುದರ ಮುಖಾಂತರ ಬಗೆಹರಿಸಿಕೊಳ್ಳಬಹುದೆಂದು ಚಾ.ವಿ.ಸ.ನಿ.ನಿ., ವಿ.ವಿ.ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿಕ್ಷಕರ ಸಂಘಕ್ಕೆ ನೂತನ ಅಧ್ಯಕ್ಷರಾಗಿ ಕೆ.ಆರ್ ಶಶಿಧರ ಈಚಗೆರೆ ಆಯ್ಕೆ



**ಮಂಡ್ಯ:** ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘ ಮಂಡ್ಯ ಉತ್ತರ ವಲಯ ಘಟಕಕ್ಕೆ ನೂತನ ಅಧ್ಯಕ್ಷರಾಗಿ ಕೆ.ಆರ್. ಶಶಿಧರ ಈಚಗೆರೆಯವರು ಸರ್ವಾನುಮತದಿಂದ ಆಯ್ಕೆಯಾದರು.

ಸಂಘದ ಕಚೇರಿಯಲ್ಲಿ ನಡೆದ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಹಿಂದಿನ ಅಧ್ಯಕ್ಷ ಎನ್. ಗೋಪಿನಾಥ್ ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಕೆ.ಆರ್.ಶಶಿಧರ ಈಚಗೆರೆ ಅವರನ್ನು ಎನ್ ಗೋಪಿನಾಥ್ ಸೂಚಿಸಿದರೆ, ಸಂಘಟನಾ ಕಾರ್ಯದರ್ಶಿ ಎನ್.ಜಿ.ಅಶೋಕ್ ಅನುಮೋದಿಸಿದರು. ಉಳಿದ ಪದಾಧಿಕಾರಿಗಳು ಆಯ್ಕೆಗೆ ಸಮ್ಮತಿಸಿದರು.

ನೂತನ ಅಧ್ಯಕ್ಷ ಕೆ.ಆರ್. ಶಶಿಧರ ಈಚಗೆರೆಯವರು ಜೋಡಿ ಹೊಡಾಘಟ್ಟ ಸರ್ಕಾರಿ ಪ್ರೌಢಶಾಲೆಯಲ್ಲಿ ಕನ್ನಡ ಭಾಷಾ ಶಿಕ್ಷಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.ಪ್ರಸ್ತುತ ' ಮಂಡ್ಯ ಜಿಲ್ಲಾ ಸರ್ಕಾರಿ ನೌಕರ ಸಂಘದ ಜಿಲ್ಲಾ ಸಂಘಟನಾ ಕಾರ್ಯದರ್ಶಿಯಾಗಿ, ಮಂಡ್ಯ ಜಿಲ್ಲಾ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಗೌರವಾಧ್ಯಕ್ಷರಾಗಿ, ಬಡ್ತಿ ಪ್ರೌಢಶಾಲಾ ಶಿಕ್ಷಕರ ಸಂಘದ ತಾಲೂಕು ಘಟಕದ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಸಭೆಯಲ್ಲಿದ್ದ ಮಾಜಿ ಅಧ್ಯಕ್ಷ ಎನ್. ಗೋಪಿನಾಥ್, ಕಾರ್ಯದರ್ಶಿ ಕೆ.ಸಿ. ಗೋವಿಂದ,ಖಜಾಂಚಿ ರಾಮಕೃಷ್ಣಯ್ಯ, ಉಪಾಧ್ಯಕ್ಷ ಜೆ.ಯತಿರಾಜು,ಸಂಘಟನಾ ಕಾರ್ಯದರ್ಶಿ ಎನ್.ಜಿ. ಅಶೋಕ್, ಪದಾಧಿಕಾರಿಗಳು ಮತ್ತು ಶಿಕ್ಷಕರು ಅಭಿನಂದಿಸಿದರು.

# ಶ್ರೀ ಮುಮ್ಮಡಿ ನಿರ್ವಾಣ ಸ್ವಾಮೀಜಿಯವರಿಗೆ ಸಿಎಂ ಡಿ.ಕೆ. ಶಿವಕುಮಾರ್ ಅಂತಿಮ ನಮನ

**ರಾಮನಗರ:** ರಾಜ್ಯದ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಜೂ. 23ರ ಮಂಗಳವಾರ ಕನಕಪುರದ ದೇಗುಲ ಮಠಕ್ಕೆ ಭೇಟಿ ನೀಡಿ ಸೋಮವಾರ ಲಿಂಗೈಕ್ಯರಾದ ದೇಗುಲ ಮಠದ ಪೂಜ್ಯ ನಿ.ಪ್ರ.ಸ್ವ. ಡಾ. ಶ್ರೀ ಶ್ರೀ ಶ್ರೀ ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳ ಅಂತಿಮ ದರ್ಶನ ಪಡೆದು, ಸ್ವಾಮೀಜಿಗಳ ಪಾರ್ಥಿವ ಶರೀರಕ್ಕೆ ಪುಷ್ಪ ನಮನ ಸಲ್ಲಿಸಿ, ನಂತರ ಪಾದುಕೆಗಳಿಗೆ ನಮಸ್ಕರಿಸಿದರು. ತದನಂತರ ಆರಕ್ಷಕ ಸಿಬ್ಬಂದಿ ಗಾಳಿಯಲ್ಲಿ ಮೂರು ಸುತ್ತು ಗುಂಡು ಹಾರಿಸಿ, ಸರ್ಕಾರಿ ಗೌರವ ಸಲ್ಲಿಸಿದರು. ಬಳಿಕ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ರಾಷ್ಟ್ರಧ್ವಜವನ್ನು ದೇಗುಲಮಠದ ಕಿರಿಯ ಸ್ವಾಮೀಜಿಗಳಿಗೆ ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಮಠದ ಆವರಣದಲ್ಲಿ ನೆರೆದಿದ್ದ ಮಠದ ಭಕ್ತರನ್ನು ಉದ್ದೇಶಿಸಿ ಮಾತನಾಡಿದ ಅವರು, ?ಶ್ರೀಗಳು ಅತ್ಯಂತ ಕಡಿಮೆ ಮಾತನಾಡುತ್ತಿದ್ದರು. ಆದರೆ ಮೌನವಾಗಿಯೇ ಅಚ್ಚುಕಟ್ಟಾಗಿ ಕೆಲಸಗಳನ್ನು ನೆರವೇರಿಸುತ್ತಿದ್ದರು.

ಶ್ರೀಮಠಹಾಗೂನಮ್ಮಕುಟುಂಬಕ್ಕೆನೂರಾರು ವರ್ಷಗಳ ಅವಿನಾಭಾವ ಒಡನಾಡವಿದೆ. ನಮ್ಮ ಅಜ್ಜನ ಕಾಲದಿಂದಲೂ ಮನೆಯಲ್ಲಿ ಯಾವುದೇ ಕಾರ್ಯ ನಡೆದರೂ ಇವರಿಗಿಂತ ಮೊದಲು



ಇದ್ದಂತಹ ಹಿರಿಯ ಸ್ವಾಮೀಜಿಯವರು ಬಂದು ಆಶೀರ್ವಾದ ಮಾಡುತ್ತಿದ್ದರು. ಯಾವುದೇ ಶುಭಕಾರ್ಯಗಳಿದ್ದರೂ ನಮಗೆ ಅವರ ಅಭಯ ಹಸ್ತ ಇದ್ದೇ ಇರುತ್ತಿತ್ತು. ಪ್ರತಿಯೊಂದು ಸಂದರ್ಭದಲ್ಲಿಯೂ ಅವರು ನಮಗೆ ಮಾರ್ಗದರ್ಶನ ಮಾಡುತ್ತಿದ್ದರು. ಅವರ ಚಿಂತನೆಗಳು ನಮಗೆ ದಾರಿದೀಪವಾಗಿದ್ದವು ಎಂದರು.

ನಮ್ಮ ಜಿಲ್ಲೆಯ ಆಧ್ಯಾತ್ಮಿಕವಾದ ದೀಪ. ಅನ್ನ, ಅಕ್ಷರ, ಆಶ್ರಯವನ್ನು ಸರ್ಕಾರ ನೀಡುವುದಕ್ಕಿಂತ ಮೊದಲು ಇವರು ಹಾಗೂ ಸಿದ್ದಗಂಗಾ ಮಠ ನೀಡಿದ್ದವು. 86 ವರ್ಷ ಬಾಳಿ ಬದುಕಿ ಮಾರ್ಗದರ್ಶನ ನೀಡಿದವರು. 700 ವರ್ಷಗಳಿಂದ ಜಾತಿ, ಧರ್ಮ ಮಾಡದೇ ಮೈಸೂರು ಮಹಾರಾಜರ ಕಾಲದಿಂದಲೂ ಈ ಮಠ ಅಚಲವಾಗಿ ನಿಂತಿದೆ. ಕರಿಯಪ್ಪನವರ ವಿದ್ಯಾಸಂಸ್ಥೆಗೂ ಮೊದಲು ಅಕ್ಷರ ದಾನ ಮಾಡಿದವರು. ದೊಡ್ಡ ಅಧಿಕಾರಿಗಳು, ಜನಪ್ರತಿನಿಧಿಗಳು, ಉದ್ಯಮಿಗಳು ಈ ಮಠದಲ್ಲಿ ಕಲಿತಿದ್ದಾರೆ. ಈ ಮಠದಲ್ಲಿ ಕಲಿತವರು ಪ್ರಪಂಚದಾದ್ಯಂತ ಹರಡಿಕೊಂಡಿದ್ದಾರೆ ಎಂದರು.

ಈ ಮಠದ ಆಶೀರ್ವಾದಿಂದ ಬೆಳೆದವರು ಎಲ್ಲರೂ ಒಟ್ಟಾಗಿ ಇನ್ನೊಮ್ಮೆ ಸೇರಿ ಸಮಾಜಮುಖಿ ಕೆಲಸಗಳನ್ನು ಮುಂದುವರೆಸಿಕೊಂಡು ಹೋಗಲು ಚಿಂತನೆ ನಡೆಸಲಾಗುವುದು. ಹೊರ ಜಿಲ್ಲೆಗಳು, ತಮಿಳುನಾಡಿನಿಂದಲೂ ಭಕ್ತಾಧಿಗಳು ಬಂದಿದ್ದಾರೆ ಎಂದರು.

ಸುತ್ತೂರು ಶ್ರೀಗಳು ಈ ಮಠಕ್ಕೆ ಯಾವಾಗಲೂ ಆಧಾರಸ್ತಂಭವಾಗಿದ್ದರು. ಸಿದ್ದಗಂಗಾ ಮಠಕ್ಕೆ ಎಷ್ಟು ಹಿರಿತನ ಇದೆಯೋ ಅಷ್ಟೇ ಹಿರಿತನ ಹಳೇ ಮೈಸೂರು ಭಾಗದ ಈ ಮಠಕ್ಕೂ ಇದೆ. ಮರಣ ದೇಹಕ್ಕೆ ಹೊರತು ಜಂಗಮಕ್ಕಲ್ಲ. ಬಸವಣ್ಣವರ ತತ್ವ, ಚಿಂತನೆ ಆದರ್ಶಗಳನ್ನು ಮುನ್ನಡೆಸುತ್ತಿದ್ದರು. ಅಕ್ಷರ, ಅನ್ನ ದಾಸೋಹ ನಡೆಸುತ್ತಿದ್ದರು. ಕಿರಿಯ ಶ್ರೀಗಳ ಮಾರ್ಗದರ್ಶನದಂತೆ ಈ ಮಠದ ಸೇವೆಯನ್ನು ನಾವು ಮುಂದುವರೆಸುತ್ತೇವೆ. ಕನಕಪುರದ ಕಣ ಕಣದಲ್ಲೂ ದೇಗುಲ ಮಠವಿದೆ ಎಂದರು.

ನಿರ್ವಾಣ ಮಹಾಸ್ವಾಮಿಯವರಿಗೆ ಸರ್ಕಾರಿ ಗೌರವ ಸಲ್ಲಿಸುವ ಗೌರವ ಸಿಕ್ಕಿದ್ದು ನನ್ನ ಭಾಗ್ಯ. ನಾವೆಲ್ಲರೂ ಹಾಗೂ ಕಿರಿಯ ಶ್ರೀಗಳು ಸೇರಿ ಮಠದ ತತ್ವ, ಪರಂಪರೆಯನ್ನು ಉಳಿಸಿಕೊಂಡು ಹೋಗುತ್ತೇವೆ. ಇದು ನಮ್ಮ ಮಠ? ಎಂದು ಹೇಳಿದರು.


ಸಚಿವರಾದ ಈಶ್ವರ್ ಖಂಡ್ರೆ ಅವರು ಮಾತನಾಡಿ, ಸರಳ, ಸಜ್ಜನಿಕೆಗೆ ಹೆಸರಾದ, ಧಾರ್ಮಿಕ ಹಾಗೂ ಆಧ್ಯಾತ್ಮಿಕ ಕ್ಷೇತ್ರಕ್ಕೆ ಬಹಳ ವಿಶಿಷ್ಟವಾದ ಕೊಡುಗೆ ನೀಡಿದ ಶ್ರೀಗಳ ಅಗಲಿಕೆ ಸಮಾಜಕ್ಕೆ ತುಂಬಲಾರದ ನಷ್ಟವಾಗಿದೆ. 700 ರಿಂದ 800 ವರ್ಷಗಳ ಇತಿಹಾಸವುಳ್ಳ ಮಠದಲ್ಲಿ ಶ್ರೀಗಳು ಸಾವಿರಾರು ಜನರಿಗೆ ಜ್ಞಾನ, ದಾಸೋಹ, ಸಂಸ್ಕಾರ ಕೊಟ್ಟಂತಹ ಕೀರ್ತಿ ಶ್ರೀಗಳಿಗೆ ಸಲ್ಲಿಸುತ್ತದೆ. ನಮ್ಮ ಕುಟುಂಬಕ್ಕೂ ಸಹ ಈ ಮಠದ ಒಡನಾಡಿಕೆ ಚನ್ನಾಗಿತ್ತು. ಶ್ರೀಗಳು ತೋರಿದ ಮಾರ್ಗದಲ್ಲಿ ನಡೆಯುವ ಮೂಲಕ ನೈಜ ಶ್ರದ್ಧಾಂಜಲಿ ಅರ್ಪಣೆಮಾಡಿದ್ದೇವೆ. ಸರ್ಕಾರಿ ಗೌರವ ಸಲ್ಲಿಸುತ್ತಿರುವುದು ನನ್ನ ಹಾಗೂ ಸಮಾಜದ ಪರವಾಗಿ ಸರ್ಕಾರಕ್ಕೆ ಗೌರವ ಸಲ್ಲಿಸುತ್ತೇನೆ ಎಂದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಶಾಸಕರಾದ ಎಸ್. ರವಿ, ಬಮೂಲ್ ಅಧ್ಯಕ್ಷರಾದ ಡಿ.ಕೆ. ಸುರೇಶ್, ಜಿಲ್ಲಾಧಿಕಾರಿ ಯಶವಂತ್ ಗುರುಕರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿವಾಸ ಗೌಡ ಸೇರಿದಂತೆ ಹಿರಿಯ ಅಧಿಕಾರಿಗಳು, ಮಠದ ಕಿರಿಯ ಶ್ರೀಗಳು, ಅಪಾರ ಸಂಖ್ಯೆಯ ಭಕ್ತಾದಿಗಳು, ಸಾರ್ವಜನಿಕರು ಲಿಂಗೈಕ್ಯ ಶ್ರೀಗಳಿಗೆ ಅಂತಿಮ ನಮನ ಸಲ್ಲಿಸಿದರು.



# ರಾಜ್ಯ ಸರ್ಕಾರದಿಂದ ಐತಿಹಾಸಿಕ ನಿರ್ಧಾರ ವಿದ್ಯಾರ್ಥಿಗಳ ಅಕ್ಷರ ಸಾಧನೆಗೆ ಸಹಕಾರ



ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
KARNATAKA STATE ROAD TRANSPORT CORPORATION
APPLICATION FOR STUDENT PASS 20[illegible]-27

ವಿದ್ಯಾ ಸಂಸ್ಥೆಯಿಂದ ಕೊಡಬೇಕಾದ ದೃಢೀಕರಣ ಪತ್ರ / Certificatefrom Educational Institution

ವಿದ್ಯಾರ್ಥಿಯ ಹೆಸರು / Student Name..............................

ಜನ್ಮ ದಿನಾಂಕ / Date Of Birth ............. ಲಿಂಗ / Gender.........

ವಿದ್ಯಾರ್ಥಿಯ ದಾಖಲಾತಿ ಸಂಖ್ಯೆ / Student Registration No............

ಕೋರ್ಸ್ / Course ............... ವರ್ಷ / Year...............

SATS / UUCMS ID......................

Photo with Signature

ವಿದ್ಯಾಸಂಸ್ಥೆಯ ಹೆಸರು ಮತ್ತು ವಿಳಾಸ / Institution Name & Address

ವಿದ್ಯಾರ್ಥಿಯ ವಾಸಸ್ಥಳ ವಿಳಾಸ / Student's Residental Address

Pass Travel Route

ಇಂದ / From Place..........................ವರೆಗೆ / To Place.........................

ಮಾರ್ಗ ಬದಲಾವಣೆ ಸ್ಥಳ / Via Place..........................

ಮೇಲೆ ನೀಡಿರುವ ವಿದ್ಯಾರ್ಥಿಯ ವೈಯಕ್ತಿಕ ವಿವರಗಳು, ವಿದ್ಯಾಸಂಸ್ಥೆಯ ದಾಖಲಾತಿಯಲ್ಲಿ ನಮೂದಾಗಿರುವಂತೆ ಇರುತ್ತದೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

It is certified that students' personal details mentioned above are as recorded in our Education Institution.

ಶಾಲೆ / ಕಾಲೇಜು / ವಿಶ್ವವಿದ್ಯಾನಿಲಯದ ಮೊಹರು ............
School / College / University Seal...................

ಪ್ರಾಚಾರ್ಯರು / ಮುಖ್ಯೋಪಾಧ್ಯಾಯರ ಸಹಿ ಮತ್ತು ದಿನಾಂಕ............
Principal / Head Master Signature and Date.......

## ಶಾಲೆ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್!

ಕೆಎಸ್‌ಆರ್‌ಟಿಸಿ, ಬಿಎಂಟಿಸಿ, ಕೆಕೆಆರ್‌ಟಿಸಿ, ಎನ್‌ಡಬ್ಲ್ಯೂಕೆಆರ್‌ಟಿಸಿ ಬಸ್‌ಗಳಲ್ಲಿ ಅನ್ವಯ

**ಕರ್ನಾಟಕ ನವ ನಿರ್ಮಾಣಕ್ಕೆ ಗ್ಯಾರಂಟಿ ಸರ್ಕಾರ...**

ಗಡಿಭಾಗದ ವಿದ್ಯಾರ್ಥಿಗಳಿಗೂ ಉಚಿತ ಬಸ್ ಪಾಸ್ ಸೌಲಭ್ಯ

ಹಣ ಪಾವತಿಸಿದವರಿಗೆ 15 ದಿನಗಳಲ್ಲಿ ಹಣ ವಾಪಸ್

ಇಂದೇ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ!

ಸೇವಾಸಿಂಧು ಪೋರ್ಟಲ್ ಲಿಂಕ್
https://sevasindhuservices.karnataka.gov.in/buspasservices/

ಕೆಎಸ್‌ಆರ್‌ಟಿಸಿ ವಿದ್ಯಾರ್ಥಿ ಪಾಸ್ ವಿವರಗಳು
https://ksrtc.karnataka.gov.in/studentpass

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಹಿಂದುಳಿದ ವರ್ಗ / ಬ್ರಾಹ್ಮಣ ಸಮುದಾಯಗಳ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,